24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 2 | ನವದೆಹಲಿ | ಬೆಲೆ ₹10 | ಜೂನ್ 28 2026, ಭಾನುವಾರ

## ಒಳಪುಟಗಳಲ್ಲಿ

ನ್ಯಾಯಮೂರ್ತಿಗಳ ವಿರುದ್ಧ ಪೂರ್ವಗ್ರಹ ಪೀಡಿತ, ಪಕ್ಷಪಾತ ಆಕ್ಷೇಪ ಎತ್ತಿ ಪ್ರಮಾಣಪತ್ರ ಸಲ್ಲಿಸಿದ್ದ ಕೇಜ್ರಿವಾಲ್ - ಪು.4

ಬೆಂಗಳೂರು ಆಸ್ತಿದಾರರಿಗೆ ಸರ್ಕಾರದಿಂದ ಸಿಹಿಸುದ್ದಿ: ಆಗಸ್ಟ್ 23ರವರೆಗೆ ಅವಕಾಶ - ಪು.5

ಪ್ರೇಯಸಿಗೆ ಇರಿದು ಕಾರು ಸ್ಫೋಟಿಸಿದ ಯುವಕನ ಸಜೀವ ದಹನ ಯುವತಿ -ಪು.6

# ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗನಾಗಿ ಬೆಳೆದಿದ್ದು ವಿಶ್ವಮಾನವನಾಗಿ

## ನಾಡಪ್ರಭು ಜಯಂತಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣ್ಣನೆ

**ಬೆಂಗಳೂರು, ಜೂ.27: ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗನಾಗಿ ಬೆಳೆದಿದ್ದು ವಿಶ್ವಮಾನವನಾಗಿ. ಇದನ್ನು ಯಾರೂ ಸಹ ಮರೆಯಬಾರದು. ಈ ಹಾದಿಯಲ್ಲಿಯೇ ನಾವೆಲ್ಲರೂ ನಡೆಯಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು. ಯಲಹಂಕದಲ್ಲಿ ಬೆಂಗಳೂರು ಉತ್ತರ ತಾಲ್ಲೂಕು ಒಕ್ಕಲಿಗರ ಸಮಿತಿ ಶನಿವಾರ ಆಯೋಜಿಸಿದ್ದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಶಿವಕುಮಾರ್ ಅವರುಮಾತನಾಡಿದರು.**



ಇಡೀ ವಿಶ್ವ ಬೆಂಗಳೂರನ್ನು ನೋಡುತ್ತಿದೆ. ಇದಕ್ಕೆ ಕಾರಣ ನಾಡಪ್ರಭು ಕೆಂಪೇಗೌಡರು. 500 ವರ್ಷಗಳ ಹಿಂದೆ ಈ ಭೂಮಿಗೆ ಪೂಜೆ ಮಾಡಿ ನಗರ ನಿರ್ಮಾಣ ಮಾಡಿದರು. ಇದನ್ನು ಬೆಂಗಳೂರು ವಾಸಿಗಳು ಮರೆಯಬಾರದು. ಈ ನಗರ ನಿರ್ಮಾಣ ಮಾಡುವಾಗ ಇದು ಇಷ್ಟು ದೊಡ್ಡಮಟ್ಟಕ್ಕೆ ಬೆಳೆಯುತ್ತದೆ ಎನ್ನುವುದು ಅವರಿಗೆ ಗೊತ್ತಿರಲಿಲ್ಲ. ಆದರೆ ಅವರ ದೂರದೃಷ್ಟಿ ಇಲ್ಲಿ ಕೆಲಸ ಮಾಡಿದೆ ಎಂದರು. ನಾವುಗಳು ಯಾರೂ ಬೆಂಗಳೂರು ಕಟ್ಟಿದವರಲ್ಲ. ಆದರೆ ನಾವಿರುವ ಈ ನಗರವನ್ನು ಉಳಿಸಿ ಬೆಳೆಸಬೇಕು. ಮನೆ ಹುಷಾರು, ಮಠ ಹುಷಾರು ಎಂದು ಹಿರಿಯರು ಹೇಳಿದ್ದಾರೆ. ಅದರಂತೆ ನಾವು ನಮ್ಮ ಪರಂಪರೆ ಉಳಿಸಬೇಕು. ಕೆಂಪೇಗೌಡರು ಹಾಕಿಕೊಟ್ಟ ಅಡಿಪಾಯದಂತೆ ನಾವೆಲ್ಲರೂ ನಡೆಯುತ್ತಿದ್ದೇವೆ. ಅನೇಕ ವೃತ್ತಿಗಳನ್ನು ಉಳಿಸಲು ಮಾರ್ಗದರ್ಶನ ನೀಡಿದರು. ಅವರು ಹಾಕಿದ ಸಂಪ್ರದಾಯದಂತೆ ನಾವು ನಡೆಯುತ್ತಿದ್ದೇವೆ ಎಂದರು.



ಬೆಂಗಳೂರಿನಲ್ಲಿ ವಿದ್ಯೆ, ಆರೋಗ್ಯ, ವೃತ್ತಿ ದೊರೆಯುತ್ತದೆ. ಇಲ್ಲಿ ಪ್ರತಿಯೊಬ್ಬರೂ ಬದುಕನ್ನು ಕಟ್ಟಿಕೊಳ್ಳಬಹುದು ಎಂದು ಅನೇಕರು ಈ ನಗರಕ್ಕೆ ಬರುತ್ತಿದ್ದಾರೆ. ಬೆಂಗಳೂರು ದಿನದಿಂದ ದಿನಕ್ಕೆ ಬೆಳೆಯುತ್ತಿದೆ.

ನಗರ ವಿಸ್ತರಣೆ ಆಗುತ್ತಲೇ ಇದೆ. ಈ ನಗರಕ್ಕೆ ಬರುವವರನ್ನು ನಾವು ತಡೆಯಲು ಸಾಧ್ಯವಿಲ್ಲ. ಅದಕ್ಕೆ 'ವರ್ಟಿಕಲ್ ಬೆಳವಣಿಗೆ' ಬಗ್ಗೆ ನಾನು ಆಲೋಚನೆ ಮಾಡುತ್ತಿದ್ದೇನೆ ಎಂದರು.

"ಕೆಎಚ್‌ಬಿಯಿಂದ ಬೆಂಗಳೂರು ಉತ್ತರ ತಾಲ್ಲೂಕು ಒಕ್ಕಲಿಗರ ಸಂಘಕ್ಕೆ ನೀಡಿರುವ ನಿವೇಶನಕ್ಕೆ 3.5 ಕೋಟಿ ಕಟ್ಟಬೇಕು ಎಂದು ಹೇಳಲಾಗಿತ್ತು. ಇದರ ಬಗ್ಗೆ ಸಂಸದ ಸುಧಾಕರ್, ಮಾಜಿ ಶಾಸಕ ಗಂಟಿಗಾನಹಳ್ಳಿ ಕೃಷ್ಣಪ್ಪ ಅವರು ದರ ಕಡಿಮೆಗೆ ಮನವಿ ಮಾಡಿದ್ದಾರೆ. ಎಲ್ಲರ ಮನವಿಯಂತೆ ಈ ಜಾಗಕ್ಕೆ ಶೇ.10ರಷ್ಟು ದರ ನಿಗದಿ ಮಾಡಲಾಗುವುದು" ಎಂದು ಸಿಎಂ ರಿಯಾಯಿತಿ ಘೋಷಣೆ ಮಾಡಿದರು.



ಕೆಂಪೇಗೌಡ ಜಯಂತಿ ಅಂಗವಾಗಿ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಕೃಷ್ಣ ಬೈರೇಗೌಡ, ಕೆ.ಎಚ್. ಮುನಿಯಪ್ಪ ಹಾಗೂ ವಿವಿಧ ಮಠಾಧೀಶರು ಭಾಗವಹಿಸಿದ್ದರು.

## 15 ಲಕ್ಷ ಸಸಿ ನೆಡುವ ಅಭಿಯಾನಕ್ಕೆ ಮುಖ್ಯಮಂತ್ರಿ ಚಾಲನೆ

ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯ ಅಂಗವಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಹಮ್ಮಿಕೊಂಡಿರುವ ಜಾಗತಿಕ ಮಟ್ಟದ ಬೃಹತ್ ಗಿಡ ನೆಡುವ ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಾಲನೆ ನೀಡಿದ್ದಾರೆ.ನಗರದ ಹಸಿರು ಹೊದಿಕೆಯನ್ನು ಮರುಸ್ಥಾಪಿಸುವ ಹಾಗೂ ಗಿನಿಸ್ ವಿಶ್ವ ದಾಖಲೆ ಬರೆಯುವ ಮಹತ್ವಾಕಾಂಕ್ಷೆಯೊಂದಿಗೆ ಒಂದೇ ದಿನದಲ್ಲಿ ಬರೋಬ್ಬರಿ 15 ಲಕ್ಷ ಸಸಿಗಳನ್ನು ನೆಡುವ ಬೃಹತ್ ಕಾರ್ಯಕ್ರಮ ಇದಾಗಿದೆ.

ವಿಧಾನಸೌಧದ ಆವರಣದಲ್ಲಿ ಸಸಿ ನೆಟ್ಟು ಪರಿಸರ ಜಾಗೃತಿ ಅಭಿಯಾನಕ್ಕೆ ಹಸಿರು ನಿಶಾನೆ ತೋರಿದ ಸಿಎಂ, ನಾಡಪ್ರಭು ಕೆಂಪೇಗೌಡರು ಉಸಿರಾಡಿದ ಹಸಿರು ಬೆಂಗಳೂರನ್ನು ಮರಳಿ ನಿರ್ಮಿಸಲು ಪ್ರತಿಯೊಬ್ಬ ನಾಗರಿಕರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಮಧ್ಯಪ್ರದೇಶದ ಇಂದೋರ್ ನಗರದಲ್ಲಿ ಒಂದೇ ದಿನ 12 ಲಕ್ಷ ಸಸಿಗಳನ್ನು ನೆಟ್ಟಿರುವುದು ಇದುವರೆಗಿನ ಅತಿ ದೊಡ್ಡ ದಾಖಲೆಯಾಗಿದೆ. ಈಗ ಈ ದಾಖಲೆಯನ್ನು ಮುರಿದು ಜಾಗತಿಕ ಮಟ್ಟದಲ್ಲಿ ಹೊಸ ಇತಿಹಾಸ ಸೃಷ್ಟಿಸಲು ಬಿಡಿಎ ಸರ್ವ ಸಿದ್ಧತೆ ಮಾಡಿಕೊಂಡಿದೆ. ಬೆಂಗಳೂರಿನ ವಿವಿಧ ಬಡಾವಣೆಗಳು, ಉದ್ಯಾನಗಳು, ಕೆರೆ ಅಂಗಳಗಳು ಹಾಗೂ ಬಫರ್ ವಲಯಗಳಲ್ಲಿ ಸಸಿಗಳನ್ನು ನೆಡಲು ಒಟ್ಟು 240 ಎಕರೆ ಪ್ರದೇಶವನ್ನು ಗುರುತಿಸಲಾಗಿದೆ.

ಕೇವಲ ಗಿಡ ನೆಡುವುದಷ್ಟೇ ಅಲ್ಲದೆ, ಅವುಗಳು ಮರವಾಗಿ ಬೆಳೆಯುವವರೆಗೂ ಪೋಷಿಸಲು ವಿಶೇಷ ಜಂಟಿ ತಂಡಗಳನ್ನು ರಚಿಸಲಾಗಿದೆ. ಈ ಮೆಗಾ ಹಸಿರು ಅಭಿಯಾನವು ಕೇವಲ ಸರ್ಕಾರದ ಕಾರ್ಯಕ್ರಮವಾಗಿ ಉಳಿಯದೆ ದೊಡ್ಡಮಟ್ಟದ ಜನಾಂದೋಲನವಾಗಿ ರೂಪುಗೊಂಡಿದೆ.

ಸಸಿಗಳನ್ನು ನೆಡಲು ಹಾಗೂ ಅವುಗಳ ಉಸ್ತುವಾರಿ ನೋಡಿಕೊಳ್ಳಲು 50 ಸಾವಿರಕ್ಕೂ ಹೆಚ್ಚು ಸ್ವಯಂಸೇವಕರು ಅರಣ್ಯ ಇಲಾಖೆ ಹಾಗೂ ಬಿಡಿಎ ಜೊತೆ ಕೈಜೋಡಿಸಿದ್ದಾರೆ. ಈ ಹಸಿರು ಕ್ರಾಂತಿಯ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸುವ ಸಾರ್ವಜನಿಕರಿಗೆ ಸರ್ಕಾರದಿಂದ ವಿಶೇಷ 'ಡಿಜಿಟಲ್ ಪ್ರಮಾಣಪತ್ರ'ವನ್ನು ವಿತರಿಸಲಾಗುತ್ತಿದ್ದು, ಯುವ ಪೀಳಿಗೆಯಿಂದ ಭಾರಿ ಬೆಂಬಲ ವ್ಯಕ್ತವಾಗಿದೆ.

## ಅಫ್ಘಾನಿಸ್ತಾನದಲ್ಲಿ ಭೂಕಂಪ, ಜಮ್ಮು ಕಾಶ್ಮೀರ, ದೆಹಲಿಯಲ್ಲಿ ಭೂಮಿ ಕಂಪಿಸಿದ ಅನುಭವ

**ನವದೆಹಲಿ, ಜೂ.27:** ಅಫ್ಘಾನಿಸ್ತಾನದಲ್ಲಿ ಶನಿವಾರ ಸಂಜೆ 6.2 ತೀವ್ರತೆಯ ಭೂಕಂಪ ಸಂಭವಿಸಿದ್ದು, ಪಾಕಿಸ್ತಾನ, ಜಮ್ಮು ಮತ್ತು ಕಾಶ್ಮೀರ ಮತ್ತು ದೆಹಲಿ–ಎನ್‌ಸಿಆರ್ ಪ್ರದೇಶದ ಕೆಲವು ಭಾಗಗಳಲ್ಲಿ ಕಂಪನ ಉಂಟಾಗಿದೆ. ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ (ಎನ್‌ಸಿಎಸ್) ಪ್ರಕಾರ, ಭಾರತೀಯ ಸಮಯ ಸಂಜೆ 7.04 ಕ್ಕೆ ಭೂಕಂಪ ಸಂಭವಿಸಿದೆ. ಈಶಾನ್ಯ ಅಫ್ಘಾನಿಸ್ತಾನದ ಜುರ್ಮ್‌ನಿಂದ ದಕ್ಷಿಣಕ್ಕೆ ಸುಮಾರು 43 ಕಿಲೋಮೀಟರ್ ದೂರದಲ್ಲಿ ಭೂಕಂಪ ಕೇಂದ್ರೀಕೃತವಾಗಿದೆ ಎಂದು ಅಮೆರಿಕ ಭೂವೈಜ್ಞಾನಿಕ ಸಮೀಕ್ಷೆ (ಯುಎಸ್‌ಜಿಎಸ್) ತಿಳಿಸಿದೆ. ಸಾವು–ನೋವು ಅಥವಾ ಹಾನಿಯ ಬಗ್ಗೆ ತಕ್ಷಣದ ವರದಿಗಳಿಲ್ಲ. ಕಾಬೂಲ್‌ನಲ್ಲಿ, ಕಟ್ಟಡಗಳು ಕಂಪಿಸಿದ್ದು, ನಿವಾಸಿಗಳು ಮನೆಗಳಿಂದ ಹೊರಗೆ ಓಡಿಬಂದಿದ್ದಾರೆ.

"ವೆನೆಜುವೆಲಾದಲ್ಲಿನ ಭಾರಿ ಭೂಕಂಪ ಇತರ ದೋಷ ರೇಖೆಗಳಿಗೆ ಶಕ್ತಿಯ ಬಿಡುಗಡೆಗೆ ಕಾರಣವಾಗಿರಬಹುದು ಮತ್ತು ಬಲೂಚಿಸ್ತಾನ ದೋಷ ರೇಖೆಯಲ್ಲಿರುವುದರಿಂದ, ಹೆಚ್ಚಿನ ಕಂಪನಗಳು ಉಂಟಾಗಬಹುದು" ಎಂದು ಲೆಫಾರಿ ಹೇಳಿದರು.

ರಖ್ನಿ, ಕೊಹ್ಲು, ಮುಸಾಖೈಲ್, ಕಿಂಗ್ರಿ ಮತ್ತು ಬರ್ಖಾನ್ ಸೇರಿದಂತೆ ಪ್ರಾಂತ್ಯದ ದೂರದ ಭಾಗಗಳಲ್ಲಿ ಭೂಕಂಪಗಳು ಅನುಭವಕ್ಕೆ ಬಂದವು. ಯುಎಸ್‌ಜಿಎಸ್ ಮಾಹಿತಿ ಪ್ರಕಾರ, ಶುಕ್ರವಾರ ಬೆಳಿಗ್ಗೆ 8.06ಕ್ಕೆ ರಖ್ನಿಯಲ್ಲಿ ಮೊದಲ ಭೂಕಂಪ ಸಂಭವಿಸಿದೆ. ನಂತರ ಹಲವಾರು ನಂತರದ ಕಂಪನಗಳು ಸಂಭವಿಸಿದವು, ಬರ್ಖಾನ್‌ನಲ್ಲಿ ಇತ್ತೀಚಿನ ಭೂಕಂಪವು ರಿಕ್ಟರ್ ಮಾಪಕದಲ್ಲಿ 5.3 ರಷ್ಟಿತ್ತು ಎಂದು ತಿಳಿದುಬಂದಿದೆ.

## ಗಾಜಾ ವಿಷಯದಲ್ಲಿ ಮೋದಿ ಸರ್ಕಾರದ ಮೌನ ಒಪ್ಪಲಾಗದು

**ನವದೆಹಲಿ, ಜೂ.27:** ಗಾಜಾದಲ್ಲಿ ನಡೆಯುತ್ತಿರುವ ಇಸ್ರೇಲ್‌ನ ಮಿಲಿಟರಿ ಕಾರ್ಯಾಚರಣೆ ಕುರಿತು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ತಳೆದಿರುವ ಮೌನ ಮತ್ತು ನಿಷ್ಕ್ರಿಯತೆಯನ್ನು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಟೀಕಿಸಿದ್ದಾರೆ. ಗಾಜಾ ಮೇಲಿನ ಇಸ್ರೇಲ್ ಕ್ರೌರ್ಯದ ವಿಷಯದಲ್ಲಿ ಭಾರತದ ಮೌನವು ದೇಶದ ನೈತಿಕತೆ ಮತ್ತು ರಾಷ್ಟ್ರೀಯ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ವಾದಿಸಿದ್ದಾರೆ. ಇತ್ತೀಚೆಗೆ ಪತ್ರಿಕೆಯೊಂದರಲ್ಲಿ ಈ ಬಗ್ಗೆ ಸೋನಿಯಾ ಅವರ ಲೇಖನ ಪ್ರಕಟವಾಗಿದೆ. ಅದರಲ್ಲ ಗಾಜಾದಲ್ಲಿ ಇಸ್ರೇಲ್ ನಡೆಸಿರುವ ಭೀಕರ ವಿನಾಶದ ಪ್ರಮಾಣ ಮತ್ತು ಅದರ ಕ್ರಮಗಳ ಹಿಂದಿರುವ ಜನಾಂಗೀಯ ಹತ್ಯೆಯ ಉದ್ದೇಶಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.



**ಭಾರತದ ಮೌನ ದೇಶದ ನೈತಿಕತೆ ಮತ್ತು ರಾಷ್ಟ್ರೀಯ ಹಿತಾಸಕ್ತಿಗೆ ವಿರುದ್ಧ: ಸೋನಿಯಾ ಗಾಂಧಿ**

ಗಾಜಾದಲ್ಲಿ ಮಕ್ಕಳು ಸಾವು–ನೋವುಗಳನ್ನು ಅನುಭವಿಸುತ್ತಿದ್ದಾರೆ. ಅಲ್ಲಿ, ಮಕ್ಕಳನ್ನು ಗುರಿಯಾಗಿಸುವುದು ಕೇವಲ ಪ್ರಾಸಂಗಿಕವಲ್ಲ, ಬದಲಿಗೆ ಅದೊಂದು ವ್ಯವಸ್ಥಿತ ಕಾರ್ಯತಂತ್ರದ ಕ್ರೌರ್ಯ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇರಿದಂತೆ ಹಿರಿಯ ಇಸ್ರೇಲಿ ನಾಯಕರು ಗಾಜಾವನ್ನು ಸಂಪೂರ್ಣವಾಗಿ ನಿರ್ನಾಮ ಮಾಡಲು ಕರೆ ನೀಡಿರುವುದು ಜನಾಂಗೀಯ ಹತ್ಯೆಯ ಉದ್ದೇಶವನ್ನು ಬಿಂಬಿಸುತ್ತದೆ ಎಂದು ಸೋನಿಯಾ ಗಾಂಧಿ ಹೇಳಿದ್ದಾರೆ.

ಗಾಜಾ ಮೇಲಿನ ಇಸ್ರೇಲ್ ದಾಳಿಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ಪಾತ್ರವನ್ನು ಟೀಕಿಸಿರುವ ಸೋನಿಯಾ ಗಾಂಧಿ, ಅಮೆರಿಕದ ಬೆಂಬಲದಿಂದಾಗಿ ಇಸ್ರೇಲ್ ಗಾಜಾದಲ್ಲಿ ತನ್ನ ಕ್ರೂರ ಕಾರ್ಯಾಚರಣೆಯನ್ನು ಮುಂದುವರಿಸಲು ಸಾಧ್ಯವಾಗಿದೆ. ಜಾಗತಿಕವಾಗಿ ಹಲವು ದೇಶಗಳು ಈಗಾಗಲೇ ಪ್ಯಾಲೆಸ್ತೀನ್‌ಅನ್ನು ಸ್ವತಂತ್ರ ರಾಷ್ಟ್ರವೆಂದು ಗುರುತಿಸಿದ್ದರೂ, ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ಇಸ್ರೇಲ್‌ನ ನಿಯಮ ಉಲ್ಲಂಘನೆಗಳನ್ನು ಖಂಡಿಸಿದ್ದರೂ, ಭಾರತ ಮಾತ್ರ ಈ ವಿಷಯದಲ್ಲಿ ಮೌನ ವಹಿಸಿರುವುದು ಆಶ್ಚರ್ಯಕರವಾಗಿದೆ. ಗಾಜಾ ವಿಷಯದ ಕುರಿತಾದ ನ್ಯಾ. ಮುರಳೀಧರ್ ಅವರ ವರದಿಯನ್ನು ನರೇಂದ್ರ ಮೋದಿ ಸರ್ಕಾರವು ಸಂಪೂರ್ಣವಾಗಿ ನಿರ್ಲಕ್ಷಿಸಿದೆ ಎಂದು ಅವರು ದೂರಿದ್ದಾರೆ. ಐತಿಹಾಸಿಕವಾಗಿ ಭಾರತವು ವಸಾಹತುಶಾಹಿ ವಿರೋಧಿ ಒಗ್ಗಟ್ಟು, ರಾಷ್ಟ್ರೀಯ ಸಾರ್ವಭೌಮತ್ವ ಹಾಗೂ ಅಂತರರಾಷ್ಟ್ರೀಯ ಶಾಂತಿಯ ಪರವಾಗಿ ನಿಂತಿತ್ತು. ಆದರೆ, ಈಗ ಪ್ಯಾಲೆಸ್ತೀನಿಯನ್ನರ ಸಂಕಷ್ಟದ ಬಗ್ಗೆ ನಿರಂತರ ಉದಾಸೀನತೆ ತೋರುತ್ತಿದೆ ಎಂದು ಸೋನಿಯಾ ಗಾಂಧಿ ಕಿಡಿಕಾರಿದ್ದಾರೆ.

ಗಾಜಾ ಯುದ್ಧದ ಸಮಯದಲ್ಲಿ ಜಾಗತಿಕ ಗಮನ ಸೆಳೆದಿದ್ದ ಐದು ವರ್ಷದ ಬಾಲಕಿ ಹಿಂದ್ ರಜಾಬ್ ಸಾವಿನ ಕಥೆಯನ್ನು ಆಧರಿಸಿದ ಸಿನಿಮಾವನ್ನು ಭಾರತದಲ್ಲಿ ಬಿಡುಗಡೆ ಮಾಡಲು ವಿಳಂಬ ಮಾಡಿದ್ದನ್ನು ಟೀಕಿಸಿದ ಅವರು, ಇಸ್ರೇಲ್‌ನ ಕ್ರೌರ್ಯಕ್ಕೆ ನೀರೆಯುವ ಕಾರಣಕ್ಕಾಗಿ ಸಿನಿಮಾವನ್ನು ತಡೆಯಲಾಗಿತ್ತು. ತೀವ್ರ ಸಾರ್ವಜನಿಕ ಒತ್ತಡದ ನಂತರವಷ್ಟೇ ಅದಕ್ಕೆ ಅನುಮತಿ ನೀಡಲಾಯಿತು ಎಂದು ನೆನಪಿಸಿದ್ದಾರೆ.

## ದ್ವಿಪಕ್ಷೀಯ ಸಂಬಂಧ ಮತ್ತಷ್ಟು ಗಟ್ಟಿಗೊಳಿಸುವ ನಿರೀಕ್ಷೆ
## 3 ದಿನಗಳ ಸೀಶೆಲ್ಸ್ ಪ್ರವಾಸಕ್ಕೆ ತೆರಳಿದ ಪ್ರಧಾನಿ

**ನವದೆಹಲಿ, ಜೂ.27:** ಮೂರು ದಿನಗಳ ಅಧಿಕೃತ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ ಶನಿವಾರ ಸೀಶೆಲ್ಸ್‌ಗೆ 2ಆಗಮಿಸಿದರು. ಭಾರತ ಮತ್ತು ಸೀಶೆಲ್ಸ್ ರಾಜತಾಂತ್ರಿಕ ಸಂಬಂಧಗಳ 50 ವರ್ಷಗಳನ್ನು ಪೂರೈಸುತ್ತಿರುವ ಈ ಸಂದರ್ಭದಲ್ಲಿ ಮೋದಿ ಅವರ ಭೇಟಿ ಮಹತ್ವದ ಘಟ್ಟವಾಗಿದೆ.



ದ್ವೀಪ ರಾಷ್ಟ್ರವನ್ನು ಮೌಲ್ಯಯುತ ಸಮುದ್ರ ಪಾಲುದಾರ ಮತ್ತು ಹಿಂದೂ ಮಹಾಸಾಗರದಲ್ಲಿ ಆಪ್ತ ಸ್ನೇಹಿತ ಎಂದು ಬಣ್ಣಿಸಿದರು. ಹಾಗೂ ಈ ಭೇಟಿಯು ಎರಡೂ ದೇಶಗಳ ನಡುವಿನ ದೀರ್ಘಕಾಲದ ಸಂಬಂಧವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಮೋದಿ ವಿಶ್ವಾಸ ವ್ಯಕ್ತಪಡಿಸಿದರು.

ತಮ್ಮ ಭೇಟಿಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ, ಸೀಶಲಸ್ಸ್‌ನಲ್ಲಿ ತಮಗೆ ನೀಡಿದ ಸ್ವಾಗತಕ್ಕಾಗಿ ಸೀಶೆಲ್ಸ್ ನಾಯಕತ್ವಕ್ಕೆ ಧನ್ಯವಾದ ಅರ್ಪಿಸಿದ್ದಾರೆ. ದ್ವೀಪ ರಾಷ್ಟ್ರದೊಂದಿಗೆ ಭಾರತವು ತನ್ನ ಪಾಲುದಾರಿಕೆಗೆ ನೀಡುವ ಪ್ರಾಮುಖ್ಯವನ್ನು ಪ್ರತಿಪಾದಿಸಿದರು. ಹಾಗೂ ಎರಡೂ ರಾಷ್ಟ್ರಗಳ ಜನರ ಪ್ರಯೋಜನಕ್ಕಾಗಿ ಸಹಕಾರವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಉತ್ಪಾದಕ ಭೇಟಿಯನ್ನು ಎದುರು ನೋಡುತ್ತಿದ್ದೇನೆ ಎಂದು ಅವರು ಹೇಳಿದರು.

ಈ ಭೇಟಿಯ ಸಮಯದಲ್ಲಿ, ಪ್ರಧಾನ ಮಂತ್ರಿಗಳು ದೇಶದ ಸುವರ್ಣ ಮಹೋತ್ಸವ ರಾಷ್ಟ್ರೀಯ ದಿನಾಚರಣೆಯಲ್ಲಿ ಅತಿಥಿಯಾಗಿ ಭಾಗವಹಿಸಲಿದ್ದು, ಸೀಶೆಲ್ಸ್ ನಾಯಕತ್ವದೊಂದಿಗೆ ಕರಾವಳಿ ಭದ್ರತೆ, ರಕ್ಷಣಾ ಸಹಕಾರ, ಅಭಿವೃದ್ಧಿ ಪಾಲುದಾರಿಕೆಗಳು, ಹವಾಮಾನ ಸ್ಥಿತಿಸ್ಥಾಪಕತ್ವ, ಸಾಮರ್ಥ್ಯ ವೃದ್ಧಿ ಮತ್ತು ಹಿಂದೂ ಮಹಾಸಾಗರ ಪ್ರದೇಶದಲ್ಲಿ ಪ್ರಾದೇಶಿಕ ಸ್ಥಿರತೆಯ ಕುರಿತು ಮಾತುಕತೆ ನಡೆಸುವ ನಿರೀಕ್ಷೆಯಿದೆ.

ಭಾರತ ಮತ್ತು ಸೀಶೆಲ್ಸ್ ನಿಕಟ ಐತಿಹಾಸಿಕ ಮತ್ತು ಜನರಿಂದ ಜನರಿಗೆ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ, ನವದೆಹಲಿ ವರ್ಷಗಳಲ್ಲಿ ದ್ವೀಪ ರಾಷ್ಟ್ರದ ಪ್ರಮುಖ ಅಭಿವೃದ್ಧಿ ಪಾಲುದಾರರಲ್ಲಿ ಒಂದಾಗಿ ಹೊರಹೊಮ್ಮುತ್ತಿದೆ. ಸೀಶೆಲ್ಸ್‌ನಲ್ಲಿ ಭಾರತ ಹಲವಾರು ಮೂಲಸೌಕರ್ಯ, ಆರೋಗ್ಯ ರಕ್ಷಣೆ, ಶಿಕ್ಷಣ ಮತ್ತು ಸಾಮರ್ಥ್ಯ ವೃದ್ಧಿ ಯೋಜನೆಗಳನ್ನು ಬೆಂಬಲಿಸಿದೆ, ಆದರೆ ಕಡಲ ಕಣ್ಗಾವಲು ಮತ್ತು ಭದ್ರತೆಯಲ್ಲಿನ ಸಹಕಾರವು ದ್ವಿಪಕ್ಷೀಯ ಸಂಬಂಧಗಳ ಮೂಲಾಧಾರವಾಗಿದೆ. ಹಿಂದೂ ಮಹಾಸಾಗರದ ದೇಶಗಳೊಂದಿಗೆ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು ಮುಕ್ತ, ಮುಕ್ತ, ಸುರಕ್ಷಿತ ಮತ್ತು ಅಂತರ್ಗತ ಕಡಲ ಪ್ರದೇಶವನ್ನು ಉತ್ತೇಜಿಸುವ ತನ್ನ ದೃಷ್ಟಿಕೋನಕ್ಕೆ ಭಾರತದ ಬದ್ಧತೆಯನ್ನು ಈ ಭೇಟಿಯು ಪುನರುಚ್ಚರಿಸುವ ನಿರೀಕ್ಷೆಯಿದೆ. ಈ ಭೇಟಿಯ ಸಮಯದಲ್ಲಿ ನಡೆಯುವ ನಿಶ್ಚಿತಾರ್ಥಗಳು ದ್ವಿಪಕ್ಷೀಯ ಸಹಕಾರಕ್ಕೆ ಹೊಸ ಆವೇಗವನ್ನು ಒದಗಿಸುತ್ತವೆ ಮತ್ತು ಎರಡೂ ದೇಶಗಳ ನಡುವಿನ ಕಾರ್ಯತಂತ್ರದ ಸಂಬಂಧಗಳನ್ನು ಗಾಢಗೊಳಿಸುತ್ತವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಹಿಂದೂ ಮಹಾಸಾಗರದಲ್ಲಿ ಭೌಗೋಳಿಕ ರಾಜಕೀಯ ಆಸಕ್ತಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮೋದಿಯವರ ಸೀಶೆಲ್ಸ್ ಪ್ರವಾಸವನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ. ಭಾರತವು ಭದ್ರತೆ, ಸಂಪರ್ಕ ಮತ್ತು ಸುಸ್ಥಿರ ಅಭಿವೃದ್ಧಿಯ ಕುರಿತು ಪ್ರಾದೇಶಿಕ ಪಾಲುದಾರರೊಂದಿಗೆ ಸಹಕಾರವನ್ನು ವಿಸ್ತರಿಸಲು ಪ್ರಯತ್ನಿಸುತ್ತಿದೆ.

## ಪ್ರಧಾನಿ, ಉತ್ತರ ಪ್ರದೇಶ ಸಿಎಂ ಸ್ಪಷ್ಟನೆ ನೀಡುವಂತೆ ಸಚಿವ ಪ್ರಿಯಾಂಕ್ ಖರ್ಗೆ ಆಗ್ರಹ

**ಬೆಂಗಳೂರು, ಜೂ.27:** ಅಯೋಧ್ಯೆಯ ರಾಮಮಂದಿರದಲ್ಲಿ ದೇಣಿಗೆ ಕಳ್ಳತನ ಆರೋಪಕ್ಕೆ ಸಂಬಂಧಿಸಿದಂತೆ ಹಣದ ದುರುಪಯೋಗದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ ಮೌನ ಮುರಿದು ಸ್ಪಷ್ಟನೆ ನೀಡಬೇಕು ಎಂದು ಗೃಹಸಚಿವ ಪ್ರಿಯಾಂಕ್ ಖರ್ಗೆ ಆಗ್ರಹಿಸಿದ್ದಾರೆ.

ಬೆಂಗಳೂರಿನ ಗೃಹಕಚೇರಿಯಲ್ಲಿ ಶನಿವಾರ ಮಾತನಾಡಿರುವ ಅವರು, ಮಂದಿರ ನಿರ್ಮಾಣಕ್ಕಾಗಿ ಸಾರ್ವಜನಿಕರಿಂದ ಸಂಗ್ರಹಿಸಲಾದ ದೇಣಿಗೆ ಮತ್ತು ದೇವಸ್ಥಾನದಲ್ಲಿ ಸಂಗ್ರಹವಾದ ದೇಣಿಗೆ ಹಣದ ಬಳಕೆಯ ಕುರಿತು ಸಂಪೂರ್ಣ ಪಾರದರ್ಶಕತೆ ಇರಬೇಕಿದ್ದು, ಸಂಬಂಧಿತ ಆರೋಪಗಳ ಬಗ್ಗೆ ಸಮಗ್ರ ತನಿಖೆ ನಡೆಸಿ ಸತ್ಯಾಂಶವನ್ನು ದೇಶದ ಜನರ ಮುಂದಿಡಬೇಕು ಎಂದು ಒತ್ತಾಯಿಸಿದ್ದಾರೆ.ಈ ವಿಷಯದಲ್ಲಿ ಜವಾಬ್ದಾರಿಯುತ ಪ್ರತಿಕ್ರಿಯೆ ನೀಡುವುದು ಕೇಂದ್ರ ಸರ್ಕಾರದ ಕರ್ತವ್ಯವಾಗಿದ್ದು, ಜನರ ವಿಶ್ವಾಸ ಉಳಿಸಿಕೊಳ್ಳಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ.

**ರಾಮಮಂದಿರದಲ್ಲಿ ದೇಣಿಗೆ ದುರುಪಯೋಗ ಆರೋಪ**



ಇದೇ ವೇಳೆ ಬಿಡದಿ ಟೌನ್‌ಶಿಪ್ ಬಹಿರಂಗ ಚರ್ಚೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸರ್ಕಾರದ ನೀತಿ ಸಂಬಂಧಿತ ವಿಚಾರಗಳನ್ನ ಬೀದಿಯಲ್ಲಿ ಚರ್ಚೆ ಮಾಡುವ ಸಂಸ್ಕೃತಿ ಸರಿಯಲ್ಲ. ಸರ್ಕಾರ ಚರ್ಚೆಗೆ ಆಹ್ವಾನಿಸಿದಾಗ ದಿನಾಂಕ ಸರಿಹೊಂದುವುದಿಲ್ಲ ಎನ್ನುವವರು, ಬಳಿಕ ಬೀದಿಯಲ್ಲಿ ಚರ್ಚೆ ನಡೆಸೋಣ ಎನ್ನುವುದು ಎಷ್ಟು ಸರಿ ಎಂದು ಟೀಕಿಸಿದ್ದಾರೆ. ಯಾರದ್ದೇ ಸಮಸ್ಯೆಯಾದರೂ ಅದನ್ನು ಅಧಿಕೃತ ವೇದಿಕೆಯಲ್ಲಿ ಚರ್ಚಿಸುವುದು ಸೂಕ್ತ. ಬೀದಿಯಲ್ಲಿ ಚರ್ಚೆ ನಡೆಸುವ ಪ್ರವೃತ್ತಿ ಪ್ರಜಾಪ್ರಭುತ್ವದ ಸಂಪ್ರದಾಯಕ್ಕೆ ಹೊಂದಿಕೆಯಾಗುವುದಿಲ್ಲ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದ್ದಾರೆ.

## ಬಿಡದಿ ಟೌನ್‌ಶಿಪ್: ಸಿಎಂ ಹಠಬಿಟ್ಟು ವಾಸ್ತವಾಂಶ ಅರಿತು ಕೆಲಸ ಮಾಡುವಂತೆ ಸೋಮಣ್ಣ ಸಲಹೆ

**ದಾವಣಗೆರೆ, ಜೂ.27:** ಯಾವುದೇ ಯೋಜನೆಯನ್ನು ಜನರ ಅನುಕೂಲಕ್ಕಾಗಿ ಮಾಡಬೇಕೇ ಹೊರತು ಹಠಕ್ಕಾಗಿ ಅಲ್ಲ. ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಠಬಿಟ್ಟು, ಅಲ್ಲಿನ ವಾಸ್ತವಾಂಶದ ಮಾಹಿತಿ ತರಿಸಿಕೊಂಡು ಕೆಲಸ ಮಾಡಲಿ. ಜನರ ಭಾವನೆ ಅರ್ಥ ಮಾಡಿಕೊಳ್ಳಲಿ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಸಲಹೆ ನೀಡಿದ್ದಾರೆ.




ಸುದ್ದಿಗಾರರೊಂದಿಗೆ ಶನಿವಾರ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಯಾವುದೋ ಕಾಲದಲ್ಲಿ ನೀವು ಏನು ಬೇಕಾದರೂ ಹಠ ಮಾಡಬಹುದಾಗಿತ್ತು. ಆದರೆ, ಈಗ ನೀವು ರಾಜ್ಯದ ಏಳೂವರೆ ಕೋಟಿ ಕನ್ನಡಿಗರ ಮುಖ್ಯಸ್ಥರಾಗಿದ್ದೀರಿ. ಪತ್ರಿಕೆಗಳಲ್ಲಿ ಅದು ಮಾಡ್ತೀನಿ, ಇದು ಮಾಡ್ತೀನಿ ಎಂದು ಯೋಜನೆಗಳನ್ನು ಘೋಷಿಸುವುದು ನಿಮ್ಮ ವಿವೇಚನೆಗೆ ಬಿಟ್ಟಿದ್ದು. ಆದರೆ, ಬಿಡದಿ ವಿಚಾರದಲ್ಲಿ ಹಠ ಮಾಡಬೇಡಿ. ರಾಜ್ಯದ ಮುಖ್ಯಮಂತ್ರಿಯಾಗಿ 'ನಾನು ಹೇಳಿದ್ದೇ ನಡೆಯಬೇಕು' ಎನ್ನುವುದಕ್ಕಿಂತ ಹೆಚ್ಚಾಗಿ ಜನರ ಭಾವನೆಗಳಿಗೆ, ದುಃಖ–ದುಮ್ಮಾನಗಳಿಗೆ ಮತ್ತು ನಿರೀಕ್ಷೆಗಳಿಗೆ ಸ್ಪಂದಿಸುವುದು ನಿಮ್ಮ ಕರ್ತವ್ಯ ಎಂದರು.

ಈಗಾಗಲೇ ಬಿಡದಿ ಭಾಗದಲ್ಲಿ ಸಾಕಷ್ಟು ಕಾರ್ಖಾನೆಗಳು, ಟೌನ್‌ಶಿಪ್‌ಗಳು ಬಂದಿವೆ. ಬೈರಮಂಗಲ ಕೆರೆಯ ಮಾಲಿನ್ಯದ ಪರಿಸ್ಥಿತಿ ಎಲ್ಲರಿಗೂ ಗೊತ್ತಿದೆ. ಇಂತಹ ಸಂದರ್ಭದಲ್ಲಿ ಜನರೇ ಬೇಡ ಅಂದಾಗ ನಾವು ಇನ್ನೊಂದು 10 ಕಿಲೋಮೀಟರ್ ಮುಂದಕ್ಕೆ ಹೋಗಿ ಯೋಜನೆ ಮಾಡುವುದರಲ್ಲಿ ತಪ್ಪೇನಿಲ್ಲ ಎಂದು ಸೋಮಣ್ಣ ಅಭಿಪ್ರಾಯಿಸಿದರು.

ಕುಮಾರಸ್ವಾಮಿ ಅವರು ಹಿಂದೆ ಯೋಜನೆ ತಂದಿದ್ದು ನಿಜ, ನಂತರ ಜನರಿಗೆ ಬೇಡ ಎಂದಾಗ ಬೇಡ ಎಂದು ತೀರ್ಮಾನಿಸಿದ್ದೂ ನಿಜ. 'ಕುಮಾರಸ್ವಾಮಿ ಮಾಡಿದ್ದನ್ನು ನಾವು ಮಾಡಲ್ಲ ಅಥವಾ ಅವರು ವಿರೋಧಿಸುತ್ತಿದ್ದಾರೆ' ಎಂದು ಹಠಕ್ಕೆ ಬೀಳುವುದು ಸರಿಯಲ್ಲ. ಈ ರಾಜ್ಯವನ್ನು ದೊಡ್ಡ ದೊಡ್ಡ ಮನುಷ್ಯರು ಆಳಿ ಬಿಟ್ಟುಹೋಗಿದ್ದಾರೆ. ನಾವ್ಯಾರೂ ಶಾಶ್ವತ ಅಲ್ಲ. ನಾಯಕರ ವೈಯಕ್ತಿಕ ಕೆಸರೆರಚಾಟದಲ್ಲಿ ಸಾಮಾನ್ಯ ಜನರಿಗೆ ಅನ್ಯಾಯವಾಗಬಾರದು. ಗದ್ದಲ ಬಿಟ್ಟು, ಎಲ್ಲಿ ಸೂಕ್ತ ಜಾಗವಿದೆಯೋ ಅಲ್ಲಿ ಟೌನ್‌ಶಿಪ್ ಮಾಡಿ. ಜನರಿಗೂ ನೆಮ್ಮದಿ ಕೊಡಿ. ನಿಮಗೂ ಬೇರೆ ಕೆಲಸ ಮಾಡಲು ಸಮಯ ಸಿಗುತ್ತದೆ ಎಂದು ಕಿವಿಮಾತು ಹೇಳಿದರು.

## ನಿತ್ಯ ಪಂಚಾಂಗ 28.06.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಶುದ್ಧ, ಚತುರ್ದಶಿ, ಜ್ಯೇಷ್ಠ ನಕ್ಷತ್ರ, ನಾಚರಗುಡಿ ಸತ್ಯಾಭಿನವ ಪುಣ್ಯದಿನ, ಹೊನ್ನುಗ್ಗಿ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಬಿಡದಿ ಟೌನ್‌ಶಿಪ್ ಚರ್ಚೆ: ಸಿಎಂಗೆ ಕುರ್ಚಿ ಕಾದಿರಿಸಿದ್ದ ಎಚ್‌ಡಿಕೆ



**ರಾಮನಗರ, ಜೂ.27:** ಬಿಡದಿ ಟೌನ್‌ಶಿಪ್‌ಗಾಗಿ ರೈತರ ಭೂಸ್ವಾಧೀನಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು, ಈ ವಿಚಾರವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ರೈತರ ಸಮ್ಮುಖದಲ್ಲೇ ಬಹಿರಂಗ ಚರ್ಚೆಗೆ ಸವಾಲು ಹಾಕಿದ್ದಾರೆ.

ಈ ಹಿನ್ನೆಲೆ ಶನಿವಾರದಂದು ಭೈರಮಂಗಲದಲ್ಲಿ ಸಿಎಂ ಆಗಮನಕ್ಕಾಗಿ ಪಕ್ಕದಲ್ಲೇ ಒಂದು ಕುರ್ಚಿ ಮೀಸಲಿಟ್ಟು ಒಂದು ಗಂಟೆಗೂ ಹೆಚ್ಚು ಕಾಲ ಕಾಯುತ್ತಾ ಸ್ಥಳೀಯ ರೈತರು ಹಾಗೂ ವಿವಿಧ ವರ್ಗಗಳ ಜನರ ಅಹವಾಲು ಆಲಿಸಿದರು.

ಈ ವೇಳೆ ಮಾತನಾಡಿದ ಅವರು, ನಾನು ಹುಟ್ಟಿದ್ದು ಹಾಸನದಲ್ಲಿ. ಆದರೆ ಇಲ್ಲಿನ ತಾಯಂದಿರು, ಸಹೋದರಿಯರು ರಾಜಕೀಯ ಜನ್ಮ ಕೊಟ್ಟಿದ್ದಾರೆ. 2004ರ ಚುನಾವಣೆಯಲ್ಲೇ ಮುಂದಿನ ಮುಖ್ಯಮಂತ್ರಿ ಕುಮಾರಸ್ವಾಮಿ ಎಂದು ಘೋಷಣೆ ಕೂಗುತ್ತಿದ್ದರು. ಆದರೆ ನಾನು ಅಧಿಕಾರಕ್ಕಾಗಿ ಸ್ಪರ್ಧಿಸಿಲ್ಲ ಎಂದು ಹೇಳಿದ್ದೆ. ಈ ಭಾಗದ ಜನ ಕಣ್ಣೀರು ಹಾಕದೇ ನೆಮ್ಮದಿಯಿಂದ ಬದುಕಬೇಕು ಎಂಬುದೇ ನನ್ನ ಗುರಿಯಾಗಿತ್ತು. ಮುಂದೆ ಕಾಂಗ್ರೆಸ್–ಜೆಡಿಎಸ್ ಸರ್ಕಾರ ರಚನೆ ಆಯಿತು. ಅಲ್ಲಿನ ಕೆಲವು ಘಟನಾವಳಿಯಿಂದ ಮತ್ತೆ ಬಿಜೆಪಿ–ಜೆಡಿಎಸ್ ಸರ್ಕಾರ ರಚನೆ ಆಯ್ತು. ಬಿಜೆಪಿ ನಾಯಕರ ಒತ್ತಡ ಹಾಗೂ ನಮ್ಮ ಶಾಸಕರ ಒತ್ತಡದಿಂದ ನಾನು ಮುಖ್ಯಮಂತ್ರಿ ಆಗಬೇಕಾಯ್ತು. ಈಗ ನಿಮ್ಮ ಆಶೀರ್ವಾದದಿಂದ ಕೇಂದ್ರದಲ್ಲಿ ಮಂತ್ರಿ ಆಗಿದ್ದೇನೆ ಎಂದರು.

ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಕಿಡಿಕಾರಿದ ಅವರು, ನಾನು ಬೆಂಗಳೂರಿಗೆ ಬಂದಾಗ ಪ್ರತಿದಿನ ನೂರಾರು ಜನ ನಮ್ಮ ಮನೆ ಬಳಿ ಬರುತ್ತಾರೆ. ಅನೇಕ ಜನರು ಕೆಲಸ ಕೇಳಿಕೊಂಡು ಬಂದಿರುತ್ತಾರೆ. ಇವತ್ತಿನ ಪರಿಸ್ಥಿತಿಯಲ್ಲಿ ಯಾರಿಗೂ ಪರ್ಮನೆಂಟ್ ಕೆಲಸ ಕೊಡುತ್ತಿಲ್ಲ. ಒಂದೆರಡು ವರ್ಷ ಹೊರಗುತ್ತಿಗೆ ಅಂತ ದುಡಿಸಿಕೊಂಡು ನಂತರ ನಿಮ್ಮನ್ನು ಮನೆಗೆ ಕಳುಹಿಸುತ್ತಾರೆ. ಅಂತಹ ಕಾರ್ಖಾನೆಗಳಿಗೆ ನಾವು ಭೂಮಿ ಕೊಡಬೇಕಾ ಎಂದು ಪ್ರಶ್ನಿಸಿದರು.


### ಜೋನ್‌ಗಳ ಬಗ್ಗೆ ನನಗಿಂತ ಹೆಚ್ಚು ಮುಖ್ಯಮಂತ್ರಿಗಳಿಗೆ ಗೊತ್ತು

ಬಿಡದಿ ಟೌನ್‌ಶಿಪ್ ನನ್ನ ಕನಸಿನ ಕೂಸು ಎನ್ನುವವರು ಒಂದು ಸತ್ಯ ತಿಳಿದುಕೊಳ್ಳಲಿ. ನಾನು ಬಯಸಿದ್ದರೆ ಆಗಲೇ ನೂರಾರು ಎಕರೆ ಭೂಮಿ ಪಡೆದು ರಿಯಲ್ ಎಸ್ಟೇಟ್ ಮಾಡಬಹುದಿತ್ತು. ಆದರೆ ರೈತರ ಬದುಕಿಗೆ ಧಕ್ಕೆ ತರುವ ಕೆಲಸ ನಾನು ಮಾಡಲಿಲ್ಲ. ರೆಡ್ ಝೋನ್ ವಿವಾದ ಪ್ರಸ್ತಾಪಿಸಿದ ಕುಮಾರಸ್ವಾಮಿ, ರೆಡ್, ಗ್ರೀನ್, ಬ್ಲೂ, ಯೆಲ್ಲೋ ಝೋನ್‌ಗಳ ಬಗ್ಗೆ ನನಗಿಂತ ಈ ರಾಜ್ಯದ ಮುಖ್ಯಮಂತ್ರಿಗೆ ಹೆಚ್ಚು ಗೊತ್ತಿರಬೇಕು. ನನ್ನ ವಿರುದ್ಧ ಧಿಕ್ಕಾರ ಕೂಗಿಸುವ ಪ್ರಯತ್ನ ನಡೆಯುತ್ತಿದೆ. ನೈಸ್ ರಸ್ತೆ ವಿಚಾರದಲ್ಲಿ ಏನಾಯಿತು ಎಂಬುದು ಜನರಿಗೆ ಗೊತ್ತಿದೆ. ರಾಮನಗರವನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡುವ ಅಗತ್ಯವೇನಿತ್ತು ಎಂದು ಎಚ್.ಡಿ. ಕುಮಾರಸ್ವಾಮಿ ಪ್ರಶ್ನಿಸಿದರು.

### ಹೋರಾಟ ಮುಂದುವರಿಯಲಿದೆ

ಬೆಂಗಳೂರು ಅಭಿವೃದ್ಧಿ ಕುರಿತು ಸರ್ಕಾರವನ್ನು ಟೀಕಿಸಿದ ಅವರು, ಬೆಂಗಳೂರು ವಿಶ್ವಮಟ್ಟಕ್ಕೆ ಬೆಳೆದಿದೆ ಎನ್ನುತ್ತಾರೆ. ಆದರೆ ಒಂದೇ ಒಂದು ರಸ್ತೆಗುಂಡಿಯನ್ನೂ ಮುಚ್ಚಿಲ್ಲ. ಗುಂಡಿ ಮುಚ್ಚುವ ಹೆಸರಿನಲ್ಲಿ 1200 ಕೋಟಿ ಲೂಟಿ ಮಾಡಿದ್ದಾರೆ ಎಂದು ಕುಮಾರಸ್ವಾಮಿ ಆರೋಪಿಸಿದರು. ಕುಮಾರಸ್ವಾಮಿ ಭಾಷಣದ ಮಧ್ಯೆ ಮಳೆ ಸುರಿಯಲು ಆರಂಭವಾದರೂ ಜನರು ಸ್ಥಳ ಬಿಟ್ಟು ಕದಲಲಿಲ್ಲ. ಇದನ್ನು ಉಲ್ಲೇಖಿಸಿದ ಎಚ್‌ಡಿಕೆ, ಮಳೆ ಬಂದರೆ ಏನೂ ಆಗಲ್ಲ, ಬೇಕಾದರೆ ನಾನು ಅಲ್ಲಿಗೂ ಬಂದು ಭಾಷಣ ಮಾಡುತ್ತೇನೆ. ಇದು ನಿಮ್ಮ ಹೋರಾಟಕ್ಕೆ ಶುಭ ಸೂಚನೆ. ವರುಣದೇವನೇ ನಿಮ್ಮ ಪರ ನಿಂತಿದ್ದಾನೆ' ಎಂದು ಹೇಳಿದರು. ಮಳೆಯಲ್ಲೇ ನಿಂತು ಭಾಷಣ ಆಲಿಸಿದ ರೈತರನ್ನು ಅಭಿನಂದಿಸಿದ ಅವರು, ರೈತರ ಭೂಮಿ ಉಳಿಸುವ ಹೋರಾಟ ಮುಂದುವರಿಯಲಿದೆ ಎಂದು ಭರವಸೆ ನೀಡಿದರು.

# ಜನರ ದೇಣಿಗೆಯ ಒಂದೊಂದೂ ರೂಪಾಯಿಯ ಲೆಕ್ಕ ಕೊಡಬೇಕು: ಬಿ.ಕೆ. ಹರಿಪ್ರಸಾದ್ ಆಗ್ರಹ



**ಬೆಂಗಳೂರು, ಜೂ.27:** ಶ್ರೀರಾಮನನ್ನು ರಾಜಕೀಯವಾಗಿ ಬಳಸಿಕೊಂಡವರು, ಶ್ರೀರಾಮನ ಹೆಸರಿನಲ್ಲಿ ಒಂದೊಂದು ಮತಗಳನ್ನು ಕೇಳಿ ಪಡೆದವರು, ಅದೇ ಶ್ರೀರಾಮನಿಗೆ ಜನಸಾಮಾನ್ಯರು ನೀಡಿದ ದೇಣಿಗೆಯ ಒಂದೊಂದು ರೂಪಾಯಿಯ ಲೆಕ್ಕಕೊಡಲು ಬಿಜೆಪಿ ನಾಯಕರಿಗೆ ಧೈರ್ಯ ಇಲ್ಲವೇ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಸಾರ್ವಜನಿಕ ಪ್ರಶ್ನೆಗಳಿಗೆ ಉತ್ತರ ಕೊಡದೆ ಇರುವುದು ಸಾರ್ವಜನಿಕ ಭಾಷಾ ಪಂಡಿತರ ಸಾಮಾನ್ಯ ಜ್ಞಾನದ ಪರಿಮಿತಿಗೆ ಬರುವುದಿಲ್ಲವೇ, ರಾಮನ ಹೆಸರನ್ನು ರಾಜಕೀಯಕ್ಕೆ ಬಳಸಬಹುದು, ರಾಮನ ಹೆಸರಿನಲ್ಲಿ ನಡೆದ ಪ್ರತಿಯೊಂದು ರೂಪಾಯಿಯ ಲೆಕ್ಕದಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು 'ಎಕ್ಸ್'ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿರುದ್ಧ ವಾಗ್ದಾಳಿ ನಡೆಸಿರುವ ಬಿ.ಕೆ.ಹರಿಪ್ರಸಾದ್, "ಭಾಷಾ ಪ್ರಖಂಡ ಪಂಡಿತ", "ಜ್ಞಾನ ಭಂಡಾರದ ಶಿಖರ", "ಸಾರ್ವಜನಿಕ ಜೀವನದ ಸಾಕಾರಮೂರ್ತಿಯೇ" ಆಗಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿಯಿಂದ ಸಾಮಾನ್ಯ ಜ್ಞಾನ ಹೇಳಿಸಿಕೊಳ್ಳುವ ದುರ್ಗತಿ ಬಂದಿಲ್ಲ, ಬರುವುದೂ ಇಲ್ಲ ಎಂದು ಹೇಳಿದ್ದಾರೆ.

ಯಡಿಯೂರಪ್ಪನವರು ಪಕ್ಷ ತೊರೆದು, ಹೊಸಪಕ್ಷ ಕಟ್ಟಿದಾಗ ಇದೇ ಜೋಶಿ, ಸಾರ್ವಜನಿಕವಾಗಿ ಆಡಿರುವ ಮಾತುಗಳು ಒಂದೊಂದು ಆಣಿಮುತ್ತುಗಳು ಎಂಬುದನ್ನು ಮರೆತಿದ್ದಾರೆ. ಯಾರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲು ಷಡ್ಯಂತ್ರ ಮಾಡಿದ್ದಿರೋ, ಇಂದು ಅವರೇ ನಿಮ್ಮ ರಾಜಕೀಯದ ಪರಮ ಪೂಜ್ಯರು. ಹಿಂದೆ ಯಾರನ್ನು ರಾಜಕೀಯವಾಗಿ ನೆಲಸಮ ಮಾಡಿದ್ದೀರೋ, ಇಂದು ಅವರ ಪಾದಪೂಜೆ ಮಾಡುತ್ತಿರುವುದು ನಿಮ್ಮ "ಸಾಮಾನ್ಯ ಜ್ಞಾನದ" ಪರಮಾವಧಿಯೇ ಎಂದು ವ್ಯಂಗ್ಯವಾಡಿದ್ದಾರೆ.

ಅಯೋಧ್ಯೆ ಶ್ರೀರಾಮನ ಹೆಸರಿನಲ್ಲಿ ನಿರ್ಮಾಣವಾದ ದೇವಸ್ಥಾನದ ಕಾಮಗಾರಿ ವೆಚ್ಚ ಹಾಗೂ ನಿರ್ವಹಣೆಯಲ್ಲಿ ನಡೆದಿರುವ ಕೋಟ್ಯಂತರ ಭ್ರಷ್ಟಾಚಾರದ ಬಗ್ಗೆ ಸಾರ್ವಜನಿಕ ವಲಯದಲ್ಲಿ ಎದ್ದಿರುವ ಪ್ರಶ್ನೆಗಳಿಗೆ ಉತ್ತರ ನೀಡಲು ಬಿಜೆಪಿ ನಾಯಕರಿಗೆ ಯೋಗ್ಯತೆ ಇದೆಯೇ, "ನಾ ಖಾವೂಂಗಾ, ನಾ ಖಾನೇ ದೂಂಗಾ" ಎಂದು ಬೊಬ್ಬೆ ಹೊಡೆದಿದ್ದವರು ಈಗ ಬಾಯ್ತೆರೆದು ಮಾತಾಡುವುದು ಬಿಡಿ, ಮುಖ ಕೂಡ ತೋರಿಸುತ್ತಿಲ್ಲ ಯಾಕೆ, ಬಾಯಿಬಿಟ್ಟರೆ ಮುಖವಾಡ ಕಳಚುವ ಭಯವೇ ಎಂದು ಪ್ರಶ್ನಿಸಿದ್ದಾರೆ.

# ಪೊಲೀಸ್ ಸೇವೆ ಜನಸ್ನೇಹಿಯಾಗಿಸುವುದು ಅಗತ್ಯ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಪಾದನೆ

### ಪೊಲೀಸ್ ಕಂಪ್ಯೂಟರ್ ವಿಭಾಗದ ಕಾರ್ಯಚಟುವಟಿಕೆಗಳ ಪರಿಶೀಲನೆ




**ಬೆಂಗಳೂರು, ಜೂ.27:** ಮಾಹಿತಿ ತಂತ್ರಜ್ಞಾನದ ಸಮರ್ಪಕ ಬಳಕೆಯ ಮೂಲಕ ಪೊಲೀಸ್ ಸೇವೆಗಳನ್ನು ಇನ್ನಷ್ಟು ಪಾರದರ್ಶಕ, ಪರಿಣಾಮಕಾರಿ ಹಾಗೂ ಜನಸ್ನೇಹಿಯಾಗಿ ರೂಪಿಸುವ ಅಗತ್ಯವಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಪಾದಿಸಿದರು.

ನಗರದ ಬಹುಮಹಡಿ ಕಟ್ಟಡದಲ್ಲಿರುವ ಪೊಲೀಸ್ ಕಂಪ್ಯೂಟರ್ ವಿಭಾಗಕ್ಕೆ ಶನಿವಾರ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿ, ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಾಂತ್ರಿಕ ಸಾಮರ್ಥ್ಯವನ್ನು ಇನ್ನಷ್ಟು ಬಲಪಡಿಸುವುದು, ಆಧುನಿಕ ತಂತ್ರಜ್ಞಾನಗಳ ಅಳವಡಿಕೆ ಹಾಗೂ ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸುವತ್ತ ಹೆಚ್ಚಿನ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.


ಅಲ್ಲದೆ, ಪೊಲೀಸ್ ಇಲಾಖೆಯ ಡಿಜಿಟಲ್ ಸೇವೆಗಳು ಮತ್ತು ಮಾಹಿತಿ ವ್ಯವಸ್ಥೆಗಳನ್ನು ಮತ್ತಷ್ಟು ಕಾರ್ಯಕ್ಷಮತೆಗೊಳಿಸುವ ಮೂಲಕ ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಉತ್ತರದಾಯಿತ್ವ ಹೆಚ್ಚಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಡಾ.ಎಂ.ಎ.ಸಲೀಂ ಹಾಗೂ ಪೊಲೀಸ್ ಕಂಪ್ಯೂಟರ್ ವಿಭಾಗದ ಹಿರಿಯ ಅಧಿಕಾರಿಗಳು ಸಚಿವರಿಗೆ ವಿಭಾಗದ ವಿವಿಧ ಕಾರ್ಯತಂತ್ರಗಳು, ತಾಂತ್ರಿಕ ಮೂಲಸೌಕರ್ಯ ಮತ್ತು ಪ್ರಗತಿಯ ಕುರಿತು ವಿವರವಾದ ಮಾಹಿತಿ ನೀಡಿದರು.

ಪೊಲೀಸ್ ಕಂಪ್ಯೂಟರ್ ವಿಭಾಗವು ರಾಜ್ಯ ಪೊಲೀಸ್ ಇಲಾಖೆಯ ತಾಂತ್ರಿಕ ಬೆನ್ನೆಲುಬಾಗಿದ್ದು, ಇಲಾಖೆಯ ವಿವಿಧ ಡಿಜಿಟಲ್ ಜಾಲತಾಣಗಳು, ಮಾಹಿತಿ ನಿರ್ವಹಣಾ ವ್ಯವಸ್ಥೆಗಳು, ಸಾಫ್ಟ್‌ವೇರ್ ವೇದಿಕೆಗಳು ಹಾಗೂ ಮಾಹಿತಿ ತಂತ್ರಜ್ಞಾನ ಸಂಬಂಧಿತ ಸೇವೆಗಳ ಸಮನ್ವಯ ಮತ್ತು ನಿರ್ವಹಣೆಯನ್ನು ಕೈಗೊಳ್ಳುತ್ತಿದೆ. ಇದರೊಂದಿಗೆ, ಸೈಬರ್ ಅಪರಾಧ ವಿಭಾಗವು ಆನ್‌ಲೈನ್ ವಂಚನೆ, ಕ್ರಿಪ್ಟೋಕರೆನ್ಸಿ ವಂಚನೆ, ಹ್ಯಾಕಿಂಗ್ ಸೇರಿದಂತೆ ವಿವಿಧ ರೀತಿಯ ಸೈಬರ್ ಅಪರಾಧಗಳ ತನಿಖೆಯನ್ನು ಪರಿಣಾಮಕಾರಿಯಾಗಿ ನಡೆಸುತ್ತಿದೆ. ಸೈಬರ್ ಫೋರೆನ್ಸಿಕ್ ಘಟಕವು ಡಿಜಿಟಲ್ ಸಾಕ್ಷ್ಯಗಳನ್ನು ವೈಜ್ಞಾನಿಕವಾಗಿ ಸಂಗ್ರಹಿಸಿ ವಿಶ್ಲೇಷಿಸುವುದರ ಜೊತೆಗೆ ರಾಜ್ಯದ ವಿವಿಧ ಪೊಲೀಸ್ ಠಾಣೆಗಳಿಗೆ ಅಗತ್ಯ ತಾಂತ್ರಿಕ ನೆರವನ್ನು ಒದಗಿಸುತ್ತಿದೆ.

ಈ ಪರಿಶೀಲನಾ ಸಭೆಯಲ್ಲಿ ಕಂಪ್ಯೂಟರ್ ವಿಭಾಗದ ಐಜಿಪಿ ಹಾಗೂ ಗೃಹ ಸಚಿವರ ವಿಶೇಷಾಧಿಕಾರಿ ಲಾಬು ರಾಮ್ ಹಾಗೂ ಪೊಲೀಸ್ ಕಂಪ್ಯೂಟರ್ ವಿಭಾಗ, ರಾಜ್ಯ ಅಪರಾಧ ದಾಖಲೆಗಳ ಬ್ಯೂರೋ, ಸೈಬರ್ ಅಪರಾಧ ವಿಭಾಗ ಹಾಗೂ ಸೈಬರ್ ಫೋರೆನ್ಸಿಕ್ ಘಟಕದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.


# ಸಿದ್ದರಾಮಯ್ಯ ಜತೆ ಭಿನ್ನಾಭಿಪ್ರಾಯವಿಲ್ಲ: ಸತೀಶ್ ಜಾರಕಿಹೊಳಿ ಸ್ಪಷ್ಟನೆ



**ಬೆಳಗಾವಿ, ಜೂ.27:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು ಸಿದ್ದರಾಮಯ್ಯ ಜೊತೆಗಿನ ಸಂಬಂಧದಲ್ಲಿ ಯಾವುದೇ ಬಿಕ್ಕಟ್ಟಿಲ್ಲ, ಒಗ್ಗಟ್ಟಿನಿಂದ ಇದ್ದೇವೆ, ಯಾವುದೇ ಭಿನ್ನಾಭಿಪ್ರಾಯವಿಲ್ಲ. ಭವಿಷ್ಯದಲ್ಲೂ ಒಟ್ಟಿಗೆ ಇರುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಕರ್ನಾಟಕ ಕಾಂಗ್ರೆಸ್ ಘಟಕದೊಳಗಿನ ಆಂತರಿಕ ಭಿನ್ನಾಭಿಪ್ರಾಯಗಳು, ವಿಶೇಷವಾಗಿ ಸಿದ್ದರಾಮಯ್ಯ ಅವರಿಗೆ ನಿಷ್ಠರಾಗಿರುವ ಹಿರಿಯ ನಾಯಕರ ಮತ್ತು ಅವರ ನಡುವಿನ ಭಿನ್ನಾಭಿಪ್ರಾಯಗಳ ಬಗ್ಗೆ ಹರಡುತ್ತಿರುವ ಊಹಾಪೋಹಗಳ ಮಧ್ಯೆ ಸತೀಶ್ ಸ್ಪಷ್ಟನೆ ನೀಡಿದ್ದಾರೆ. ಜಿಲ್ಲಾ ಉಸ್ತುವಾರಿಯಾಗಿ ನಮಗೆ ತಾತ್ಕಾಲಿಕ ಜವಾಬ್ದಾರಿ ನೀಡಿಸಲಾಗಿದೆ ಎಂದು ಹೇಳಿದರು.

# ಎಂಸಿಸಿ ಬ್ಯಾಂಕ್, 114 ವರ್ಷಗಳ ಇತಿಹಾಸ, 1,535 ಕೋಟಿ ರೂ. ವ್ಯವಹಾರ

## 22ನೇ ಶಾಖೆ ದೇರಳಕಟ್ಟೆ - 23ನೇ ಶಾಖೆ ಕಟಪಾಡಿಯಲ್ಲಿ ಉದ್ಘಾಟನೆ




**ಮುಂಬಯಿ, ಜೂ.27:** 114 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿರುವ ಎಂಸಿಸಿ ಬ್ಯಾಂಕ್ ಲಿಮಿಟೆಡ್, 31 ಮಾರ್ಚ್ 2026ಕ್ಕೆ ಅಂತ್ಯಗೊಂಡ ಹಣಕಾಸು ವರ್ಷದಲ್ಲಿ ಎಲ್ಲಾ ಪ್ರಮುಖ ವ್ಯವಹಾರ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ.

ಬ್ಯಾಂಕ್ ಒಟ್ಟು ವ್ಯವಹಾರದಲ್ಲಿ 22.89% ಬೆಳವಣಿಗೆಯೊಂದಿಗೆ ರೂ. 1,535 ಕೋಟಿ ಮೈಲಿಗಲ್ಲನ್ನು ತಲುಪಿದೆ. ಬ್ಯಾಂಕಿನ ನಿವ್ವಳ ಮೌಲ್ಯ ರೂ. 83.76 ಕೋಟಿಯಿಂದ ರೂ. 91.80 ಕೋಟಿಗೆ ಏರಿಕೆಯಾಗಿದ್ದು, ಎನ್‌ಆರ್‌ಐ ಗ್ರಾಹಕರ ಬೆಂಬಲ ಬ್ಯಾಂಕಿನ ಬೆಳವಣಿಗೆಗೆ ಪ್ರಮುಖ ಶಕ್ತಿಯಾಗಿದೆ.

ಪ್ರಸ್ತುತ ಆಡಳಿತ ಮಂಡಳಿಯ ನೇತೃತ್ವದಲ್ಲಿ ಎಂಸಿಸಿ ಬ್ಯಾಂಕಿನ ಕಾರ್ಯವ್ಯಾಪ್ತಿ ಸಂಪೂರ್ಣ ಕರ್ನಾಟಕ ರಾಜ್ಯಕ್ಕೆ ವಿಸ್ತರಿಸಿದ್ದು, ಬ್ಯಾಂಕ್ ಸಂಪೂರ್ಣ ಕೋರ್ ಬ್ಯಾಂಕಿಂಗ್ ತಂತ್ರಜ್ಞಾನದ ಮೂಲಕ ಕಾರ್ಯನಿರ್ವಹಿಸುತ್ತಿದೆ. ಖಾಸಗಿ ಮತ್ತು ಸಾರ್ವಜನಿಕ ವಲಯದ ಬ್ಯಾಂಕುಗಳಿಗೆ ಸಮಾನವಾಗಿ ವಿವಿಧ ಹಣಕಾಸು ಉತ್ಪನ್ನಗಳು ಹಾಗೂ ಸೇವೆಗಳನ್ನು ಒದಗಿಸುತ್ತಿರುವ ಬ್ಯಾಂಕ್, ರಾಜ್ಯಾದ್ಯಂತ ಶಾಖಾ ಜಾಲ ವಿಸ್ತರಣೆಗೆ ಆದ್ಯತೆ ನೀಡುತ್ತಿದೆ.

2018ರಲ್ಲಿ ಸಹಕಾರ ರತ್ನ ಅನಿಲ್ ಲೋಬೊ ಮತ್ತು ಅವರ ತಂಡ ಆಡಳಿತ ವಹಿಸಿಕೊಂಡ ನಂತರ ಬ್ಯಾಂಕ್ ಗಮನಾರ್ಹ ಬೆಳವಣಿಗೆಯನ್ನು ಕಂಡಿದೆ. ಠೇವಣಿಗಳು ರೂ. 304 ಕೋಟಿಯಿಂದ ರೂ. 876 ಕೋಟಿಗೆ ಏರಿಕೆಯಾಗಿದ್ದು, 188% ಬೆಳವಣಿಗೆ ದಾಖಲಿಸಿದೆ. ಸಾಲ ಮತ್ತು ಮುಂಗಡಗಳು ರೂ. 191 ಕೋಟಿಯಿಂದ ರೂ. 657 ಕೋಟಿಗೆ ಏರಿಕೆಯಾಗಿದ್ದು, 243% ಪ್ರಗತಿ ಸಾಧಿಸಿದೆ.

ಷೇರು ಬಂಡವಾಳ ರೂ. 13 ಕೋಟಿಯಿಂದ ರೂ. 34 ಕೋಟಿಗೆ ಏರಿಕೆಯಾಗಿದ್ದು, 161% ಬೆಳವಣಿಗೆ ಕಂಡಿದೆ. ಮೀಸಲು ನಿಧಿ ರೂ. 29 ಕೋಟಿಯಿಂದ ರೂ. 85 ಕೋಟಿಗೆ ಏರಿಕೆಯಾಗಿದೆ. ವ್ಯವಹಾರ ವಹಿವಾಟು ರೂ. 496 ಕೋಟಿಯಿಂದ ರೂ. 1,535 ಕೋಟಿಗೆ ತಲುಪಿ 209% ಬೆಳವಣಿಗೆ ದಾಖಲಿಸಿದೆ. ಸಿಆರ್‌ಎಆರ್ ಅನುಪಾತವು 11.70% ರಿಂದ 16.55%ಕ್ಕೆ ಸುಧಾರಿಸಿದ್ದು, ಆಸ್ತಿಗಳ ಮೇಲಿನ ಆದಾಯ 0.56% ರಿಂದ 1.40%ಕ್ಕೆ ಏರಿಕೆಯಾಗಿದೆ.

ದಕ್ಷ ಆಡಳಿತ ಮಂಡಳಿ, ಸಮರ್ಪಿತ ಸಿಬ್ಬಂದಿ ಮತ್ತು ಸಮರ್ಥ ಕಾರ್ಯತಂತ್ರದ ಯೋಜನೆಯಿಂದ ಬ್ಯಾಂಕ್ ಭಾರತೀಯ ರಿಸರ್ವ್ ಬ್ಯಾಂಕ್ ವಿಧಿಸಿರುವ ಎಲ್ಲಾ ನಿಯಮಗಳನ್ನು ಯಶಸ್ವಿಯಾಗಿ ಪೂರೈಸಿದೆ. 22 ವರ್ಷಗಳ ನಂತರ ಬ್ಯಾಂಕ್ ಬ್ರಹ್ಮಾವರ, ಬೆಳ್ತಂಗಡಿ, ಬೆಳ್ಮಣ್, ಬೈಂದೂರು ಮತ್ತು ಸಂತೆಕಟ್ಟೆಯಲ್ಲಿ ಹೊಸ ಶಾಖೆಗಳನ್ನು ಆರಂಭಿಸುವ ಮೂಲಕ ವಿಸ್ತರಣೆಗೆ ಚಾಲನೆ ನೀಡಿದೆ.

ಬ್ಯಾಂಕಿನ ಅಧ್ಯಕ್ಷರಾದ ಅನಿಲ್ ಲೋಬೊ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಎಂಸಿಸಿ ಬ್ಯಾಂಕಿನ 22ನೇ ದೇರಳಕಟ್ಟೆ ಶಾಖೆಯನ್ನು ಜೂನ್ 28, 2026ರಂದು ಹಾಗೂ 23ನೇ ಕಟಪಾಡಿ, ಉಡುಪಿ ಶಾಖೆಯನ್ನು ಆಗಸ್ಟ್ 2, 2026ರಂದು ಉದ್ಘಾಟಿಸಲಾಗುವುದು ಎಂದು ತಿಳಿಸಿದರು.

ದೇರಳಕಟ್ಟೆ ಶಾಖೆಯ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನಿಲ್ ಲೋಬೊ ವಹಿಸಲಿದ್ದಾರೆ. ಪಾನೀರ್ ಅವರ್ ಲೇಡಿ ಆಫ್ ಮರ್ಸಿ ಚರ್ಚ್‌ನ ಧರ್ಮಗುರು ವಂ. ವಿಕ್ಟರ್ ಡಿಮೆಲ್ಲೊ ಅವರು ಆಶೀರ್ವದಿಸಲಿದ್ದಾರೆ. ಕರ್ನಾಟಕದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ. ಆರ್ಸುಲಾಯ್ನ್ ಫ್ರಾನ್ಸಿಸ್ಕನ್ ಸಭೆಯ ಸುಪೀರಿಯರ್ ಜನರಲ್ ಸಿಸ್ಟರ್ ಮಿಲ್ಲಿ ಫೆರ್ನಾಂಡಿಸ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ವಂ. ನಿಲೇಶ್ ಕ್ರಾಸ್ತಾ, ಆಡಳಿತಾಧಿಕಾರಿ, ಫಾದರ್ ಮುಲ್ಲರ್ ಹೋಮಿಯೋಪತಿ ಕಾಲೇಜು, ದಿವ್ಯಾ ಸತೀಶ್ ಶೆಟ್ಟಿ, ಅಧ್ಯಕ್ಷರು, ಕೋಟೆಕಾರ್ ಪಟ್ಟಣ ಪಂಚಾಯತ್ ಹಾಗೂ ಸಿ.ಎಂ. ಸತ್ತಾರ್, ಮಾಜಿ ಅಧ್ಯಕ್ಷರು, ಬೆಳ್ಮ ಗ್ರಾಮ ಪಂಚಾಯತ್ ಗೌರವಾನ್ವಿತ ಅತಿಥಿಗಳಾಗಿ ಉಪಸ್ಥಿತರಿರಲಿದ್ದಾರೆ.

ದೇರಳಕಟ್ಟೆಯಲ್ಲಿ ಬ್ಯಾಂಕಿನ 16ನೇ ಎಟಿಎಂ ಕೂಡ ಅಂದು ಉದ್ಘಾಟನೆಗೊಳ್ಳಲಿದೆ. ಮೋರ್ಗನ್ಸ್ ಗೇಟ್ ಶಾಖೆಯನ್ನು ಜುಲೈ 25ರಂದು, ಮೂಡಬಿದಿರೆ ಶಾಖೆಯನ್ನು ಆಗಸ್ಟ್ 22ರಂದು ಸ್ಥಳಾಂತರಿಸಿ, ಕಾರ್ಕಳ ಶಾಖೆಯನ್ನು ಆಗಸ್ಟ್ 26, 2026ರಂದು ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲಾಗುವುದು.

ಎಂಸಿಸಿ ಬ್ಯಾಂಕ್ ಕಡಿಮೆ ವೆಚ್ಚದ ಲಾಕರ್ ಸೌಲಭ್ಯ, ದೇಶೀ ಹಾಗೂ ವಿದೇಶಿ ಶಿಕ್ಷಣಕ್ಕಾಗಿ ಶಿಕ್ಷಣ ಸಾಲ, ಎಂಎಸ್‌ಎಂಇ ಸಾಲ, ವಾಹನ ಸಾಲ, ಗೃಹ ಸಾಲ, ಮನೆ ದುರಸ್ತಿ, ವಿವಾಹ ಹಾಗೂ ಗೃಹೋಪಯೋಗಿ ವಸ್ತುಗಳ ಖರೀದಿ ಸಾಲ ಸೇರಿದಂತೆ ಹಲವು ಹಣಕಾಸು ಸೇವೆಗಳನ್ನು ನೀಡುತ್ತಿದೆ. ಯಾವುದೇ ಪ್ರೊಸೆಸಿಂಗ್ ಶುಲ್ಕವಿಲ್ಲದೆ ಚಿನ್ನದ ಸಾಲ ಸೌಲಭ್ಯ ಹಾಗೂ ಉಚಿತ ಎಟಿಎಂ ಮತ್ತು ಮೊಬೈಲ್ ಬ್ಯಾಂಕಿಂಗ್ ಸೇವೆಗಳನ್ನು ಒದಗಿಸುತ್ತಿದೆ. ಬ್ಯಾಂಕಿನ ಠೇವಣಿಗಳು ಆರ್‌ಬಿಐ ಮಾರ್ಗಸೂಚಿಯಂತೆ ಡಿಐಸಿಜಿಸಿ ಅಡಿಯಲ್ಲಿ ವಿಮೆಗೊಂಡಿವೆ.

ಪತ್ರಿಕಾಗೋಷ್ಠಿಯಲ್ಲಿ ಎಂಸಿಸಿ ಬ್ಯಾಂಕ್ ಅಧ್ಯಕ್ಷ ಅನಿಲ್ ಲೋಬೊ, ಉಪಾಧ್ಯಕ್ಷ ಜೆರಾಲ್ಡ್ ಜೂಡ್ ಡಿಸಿಲ್ವಾ, ನಿರ್ದೇಶಕರಾದ ಆ್ಯಂಡ್ರೂ ಡಿಸೋಜಾ, ಡಾ। ಜೆರಾಲ್ಡ್ ಪಿಂಟೊ, ಅನಿಲ್ ಪತ್ರಾವೊ, ಜೆ.ಪಿ. ರೊಡ್ರಿಗಸ್, ಡೇವಿಡ್ ಡಿಸೋಜಾ, ಎಲ್ರಾಯ್ ಕಿರಣ್ ಕ್ರಾಸ್ಟೊ, ಹೆರಾಲ್ಡ್ ಮೊಂತೇರೊ, ರೋಶನ್ ಡಿಸೋಜಾ, ಮೆಲ್ವಿನ್ ವಾಸ್, ವಿನ್ಸೆಂಟ್ ಲಸ್ರಾದೊ, ಸಿ.ಜಿ. ಪಿಂಟೊ, ಸುಶಾಂತ್ ಸಲ್ಡಾನ್ಹಾ, ಐರಿನ್ ರೆಬೆಲ್ಲೊ, ಡಾ. ಫ್ರೀಡಾ ಡಿಸೋಜಾ, ನ್ಯಾ. ಆಲ್ವಿನ್ ಮೊಂತೇರೊ, ಫೆಲಿಕ್ಸ್ ಡಿಕ್ರೂಜ್, ಶರ್ಮಿಳಾ ಮಿನೇಜಸ್ ಹಾಗೂ ಪ್ರಧಾನ ವ್ಯವಸ್ಥಾಪಕ ಸುನಿಲ್ ಮಿನೇಜಸ್ ಉಪಸ್ಥಿತರಿದ್ದರು.




517ನೇ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆಯ ಸಂದರ್ಭದಲ್ಲಿ ಶನಿವಾರ ಬೆಂಗಳೂರಿನ ಕಡಬಗೆರೆ ಕ್ರಾಸ್ (ಮಾಗಡಿ ರಸ್ತೆ) ನಿಂದ ಚಲ್ಲಘಟ್ಟ ಮೆಟ್ರೋ ನಿಲ್ದಾಣ (ಮೈಸೂರು ರಸ್ತೆ) ಗೆ ಸಂಪರ್ಕ ಕಲ್ಪಿಸುವ ಹೊಸದಾಗಿ ನಿರ್ಮಿಸಲಾದ ಎಸ್.ಎಂ. ಕೃಷ್ಣ ರಸ್ತೆಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಿದರು.

# ಕಾಂಗ್ರೆಸ್‌ನವರು ಅನೈತಿಕ ಮಾರ್ಗದಿಂದ ಅಡ್ಡಮತದಾನ ಮಾಡಿಸಿದ್ದಾರೆ: ಸಿ.ಟಿ.ರವಿ

### ಬಿಜೆಪಿ ರಾಜ್ಯಾಧ್ಯಕ್ಷರಿಗೆ ವರದಿ ಸಲ್ಲಿಸಿದ ಸತ್ಯಶೋಧನಾ ಸಮಿತಿ ಅಧ್ಯಕ್ಷ ಸಿ.ಟಿ. ರವಿ



**ಬೆಂಗಳೂರು, ಜೂ.27:** ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್‌ನವರು ಅನೈತಿಕ ಮಾರ್ಗದಿಂದ ಅಡ್ಡಮತದಾನ ಮಾಡಿಸಿದ್ದಾರೆ ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಆರೋಪಿಸಿದ್ದಾರೆ.

ವಿಧಾನಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ಕುರಿತು ಆಂತರಿಕ ತನಿಖಾ ವರದಿಯನ್ನು ಇಂದು ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಸಲ್ಲಿಸಿದ ನಂತರ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಅಡ್ಡಮತದಾನ ಆಗಿರುವುದು ಕಾಂಗ್ರೆಸ್ ಮೇಲಿನ ಅಭಿಮಾನಕ್ಕೆ ಅಂತ ಕಾಂಗ್ರೆಸ್ ನಾಯಕರು ಭಾವಿಸಬಾರದು. ಬೇರೆ ರಾಜ್ಯಗಳಲ್ಲಿ ಅಡ್ಡಮತದಾನ ಆದಾಗ ಕಾಂಗ್ರೆಸ್‌ನವರು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧ ಎಂದು ಉಪದೇಶ ಮಾಡುತ್ತಾರೆ. ಆದರೆ ಈಗ ಅಡ್ಡಮತದಾನದ ಮೂಲಕ ಪ್ರಜಾಪ್ರಭುತ್ವವನ್ನು ಅಪಮೌಲ್ಯಗೊಳಿಸಿದ್ದಾರೆ. ಆದ್ದರಿಂದ ಇನ್ನು ಮುಂದೆ ಅವರಿಗೆ ಅಡ್ಡ ಮತದಾನ ಆದರೆ ಪ್ರಶ್ನಿಸುವ ಯಾವುದೇ ನೈತಿಕತೆ ಇಲ್ಲ ಎಂದರು.

ಚುನಾವಣೆಯಲ್ಲಿ ಯಾವ ಎಚ್ಚರಿಕೆ ವಹಿಸಬೇಕಿತ್ತು ಯಾವ ಎಚ್ಚರಿಕೆ ವಹಿಸಿಲ್ಲ ಎಂಬುದು ವರದಿಯಲ್ಲಿ ಇದೆ. ಇದು ಆಂತರಿಕ ತನಿಖೆ ಆಗಿರುವುದರಿಂದ ಹೆಚ್ಚಿನ ಮಾಹಿತಿ ನೀಡಲಾಗದು ಎಂದು ಹೇಳಿದರು.ಅಡ್ಡಮತದಾನದ ಕುರಿತು ಆಂತರಿಕ ತನಿಖೆ ಮಾಡಲು ನನ್ನೊಂದಿಗೆ ಮಾಜಿ ಸಚಿವ ಎನ್. ಮಹೇಶ್, ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಹಾಗೂ ಹಾಗೂ ಶಾಸಕ ಮಹೇಶ್ ಟೆಂಗಿನಕಾಯಿ ಅವರು ಸೇರಿದ ಮೂರು ಜನರ ಸಮಿತಿ ಮಾಡಿದ್ದರು. ಆದಷ್ಟು ಬೇಗ ಆಂತರಿಕವಾಗಿ ತನಿಖೆ ನಡೆ ವರದಿ ನೀಡಿ ಎಂದು ರಾಜ್ಯಾಧ್ಯಕ್ಷರು ನಿರ್ದೇಶನ ನೀಡಿದ್ದರು. ಮೂವರು ಚರ್ಚೆ ಮಾಡಿ ಮೂವರಿಗೆ ಸಮ್ಮತವಾದ ಅಂಶಗಳನ್ನು ಮಾತ್ರ ವರದಿಯಲ್ಲಿ ಉಲ್ಲೇಖ ಮಾಡಿ ವರದಿ ಸಿದ್ಧಪಡಿಸಿದ್ದೇವೆ ಎಂದಿದ್ದಾರೆ.

ಅಡ್ಡಮತದಾನ ಮಾಡಿದವರ ಬಗ್ಗೆ ಮಾಧ್ಯಮ ಮತ್ತು ಸಾರ್ವಜನಿಕ ವಲಯದಲ್ಲಿ ಅನುಮಾನ ಕಂಡು ಬಂದವರ ಪಟ್ಟಿ ಮಾಡಿ ಅವರೊಂದಿಗೆ ಚರ್ಚೆ ಮಾಡಿದ್ದೇವೆ. ಅಭ್ಯರ್ಥಿಗಳ ಜೊತೆ ಮಾತುಕತೆ ನಡೆಸಿ ಸಭಿಪ್ರಾಯ ಸಂಗ್ರಹಿಸಿದ್ದೇವೆ. ಜೆಡಿಎಸ್ ಮುಖಂಡರು, ವಿರೋಧ ಪಕ್ಷದ ಮುಖಂಡರು, ಮುಖ್ಯ ಸಚೇತಕರು, ಮಾಧ್ಯಮದವರೊಂದಿಗೆ ಸಮಾಲೋಚನೆ ಮಾಡಿದ್ದೇವೆ. ಸ್ಥಳೀಯ ಮಾಹಿತಿ ಸಂಗ್ರಹಿಸಿದ್ದೇವೆ, ಸಾಂದರ್ಭಿಕವಾಗಿ ಮಾಹಿತಿ ಪಡೆದಿದ್ದೇವೆ ಎಂದರು.

### ಬಿಜೆಪಿಯ 1 ಮತ ಅಸಿಂಧು ಸೇರಿ 4 ಅಡ್ಡಮತದಾನ

ವಿಧಾನಪರಿಷತ್ ಚುನಾವಣೆಯಲ್ಲಿ ಒಟ್ಟು 12 ಅಡ್ಡಮತದಾನ ಆಗಿದೆ. ಕಾಂಗ್ರೆಸ್ ಪಕ್ಷಕ್ಕೆ 11 ಹೆಚ್ಚುವರಿ ಮತಗಳು ಬಂದಿದ್ದು, ಒಂದು ಮತ ಅಸಿಂಧುವಾಗಿದೆ. ಈ ಸಂಬಂಧ ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ನೇತೃತ್ವದಲ್ಲಿ ಬಿಜೆಪಿ ರಚಿಸಿದ್ದ ಸತ್ಯಶೋಧನಾ ಸಮಿತಿ ರಾಜ್ಯಾಧ್ಯಕ್ಷರಿಗೆ ಶನಿವಾರ ವರದಿ ಸಲ್ಲಿಸಿದೆ. ಒಟ್ಟು ಮೂರು ಪುಟಗಳ ವರದಿ ಇದಾಗಿದೆ. ಮುಚ್ಚಿದ ಲಕೋಟೆಯಲ್ಲಿ ವರದಿ ಸಲ್ಲಿಕೆ ಮಾಡಲಾಗಿದೆ. ವಿಧಾನಪರಿಷತ್ ಚುನಾವಣೆಯಲ್ಲಿ ಮೈತ್ರಿ ಪಕ್ಷಗಳಿಂದ ಅಡ್ಡ ಮತದಾನ ಮಾಡಿದ ಒಟ್ಟು ಶಾಸಕರು 12 ಎಂದು ವರದಿಯಲ್ಲಿ ಉಲ್ಲೇಖ ಮಾಡಲಾಗಿದೆ. ಈ ಪೈಕಿ 1 ಅಸಿಂದು ಮತವಾಗಿದೆ. ಬಿಜೆಪಿಯಿಂದ 1 ಅಸಿಂಧು ಸೇರಿ ಒಟ್ಟು 4 ಅಡ್ಡ ಮತ ಆಗಿದ್ದರೆ, ಉಳಿದಿದ್ದು ಜೆಡಿಎಸ್‌ನಿಂದಾದ ಅಡ್ಡ ಮತಗಳು ಎಂಬ ಅಂಶವನ್ನು ವರದಿಯಲ್ಲಿ ತಿಳಿಸಲಾಗಿದೆ. ಅಡ್ಡ ಮತ ಚಲಾಯಿಸಿದ ಶಾಸಕರ ಹೆಸರನ್ನು ಉಲ್ಲೇಖಿಸಿಲ್ಲ ಎನ್ನಲಾಗಿದೆ. ಅಡ್ಡಮತಗಳ ಸಂಖ್ಯೆ ಮಾತ್ರ ಉಲ್ಲೇಖಿಸಿರುವ ಸಮಿತಿ, ಕೆಲವರ ಬಗ್ಗೆ ಅನುಮಾನ ವ್ಯಕ್ತಪಡಿಸಿದೆ.

Chief reporter : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಭೂಮಾಲೀಕರ ತ್ಯಾಗ ಸ್ಮರಣೆಗೆ ವಾಲ್ ಆಫ್ ಗ್ರ್ಯಾಟಿಟ್ಯೂಡ್: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್



**ಬೆಂಗಳೂರು, ಜೂ.27:** ಕೈಗಾರಿಕಾ ಪ್ರದೇಶ, ಶಾಲೆಗಳು, ಕೆರೆ, ರಸ್ತೆ ನಿರ್ಮಾಣ ಸೇರಿ ಜನಪರ ಯೋಜನೆಗಳಿಗೆ ಯಾವುದೇ ತಕರಾರು ಮಾಡದೇ ಜಾಗ ನೀಡುವ ಭೂಮಾಲೀಕರ ಹೆಸರನ್ನು ವಾಲ್ ಆಫ್ ಗ್ರಾಟಿಟ್ಯೂಡ್ (ಕೃತಜ್ಞತಾ ಫಲಕ) ನಲ್ಲಿ ಸೇರಿಸಲು ಸರ್ಕಾರ ತೀರ್ಮಾನಿಸಿದೆ. ಆ ಮೂಲಕ ಭೂಮಾಲೀಕರ ತ್ಯಾಗ ಸ್ಮರಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಕಟಿಸಿದ್ದಾರೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೂತನವಾಗಿ ನಿರ್ಮಿಸುತ್ತಿರುವ ಕೆಂಪೇಗೌಡ ಬಡಾವಣೆಯಲ್ಲಿ ಶನಿವಾರ ನಡೆದ 517ನೇ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ನಾವು ಎಸ್.ಎಂ. ಕೃಷ್ಣ ಹೆಸರಿನಲ್ಲಿ 10 ಪಥಗಳ ರಸ್ತೆಗೆ ಚಾಲನೆ ನೀಡಿದ್ದೇವೆ. ಈ ರಸ್ತೆ 11 ಕಿ.ಮೀ.ಗೆ ನಿಲ್ಲುವುದಿಲ್ಲ. ಮುಂದೆ ಇದು 123 ಕಿ.ಮೀ ರಸ್ತೆಯಾಗಿ ವಿಸ್ತರಣೆಯಾಗಲಿದೆ. ಈ ರಸ್ತೆಯಲ್ಲಿ ವಾಲ್ ಆಪ್ ಗ್ರಾಟಿಟ್ಯೂಡ್ (ಉಪಕಾರ ಸ್ಮರಣೆ) ನಿರ್ಮಿಸಲು ಮುಂದಾಗಿದ್ದೇವೆ. ಆ ಮೂಲಕ ಈ ರಸ್ತೆಗಾಗಿ ಜಮೀನು ನೀಡಿದವರ ಹೆಸರನ್ನು ಶಾಶ್ವತವಾಗಿ ಉಳಿಸುವ ಕೆಲಸವನ್ನು ಕರ್ನಾಟಕ ಸರ್ಕಾರ ಮಾಡಲಿದೆ. ಇದನ್ನು ಎಲ್ಲಾ ಕಡೆಗಳಲ್ಲೂ ಮಾಡಲಾಗುವುದು ಎಂದು ತಿಳಿಸಿದರು.

ಎಲ್ಲಿ ಶ್ರಮ ಇದೆಯೋ ಅಲ್ಲಿ ಫಲವಿದೆ. ಯಾವುದೇ ಜಮೀನು ಉಳುಮೆ ಮಾಡದೇ ಮಟ್ಟ ಮಾಡಲು ಸಾಧ್ಯವಿಲ್ಲ. ಭೂಮಿ ಕಳೆದುಕೊಂಡವರ ಬಗ್ಗೆ ಕಾಳಜಿ ಇದೆ. ಕೆಂಗೇರಿ ಹಾಗೂ ಯಲಹಂಕ ಪಟ್ಟಣ ನಿರ್ಮಾಣ ಮಾಡಿದ್ದು ಹೇಗೆ, ಪರಮೇಶ್ವರ್ ಅವರು ತುಮಕೂರಿನಲ್ಲಿ ಟೌನ್‌ಶಿಪ್ ಮಾಡಲು ಮುಂದಾಗಿದ್ದಾರೆ. ಅವು ಭೂಮಿಯಲ್ಲವೇ, ಮನುಷ್ಯನ ಹುಟ್ಟು ಆಕಸ್ಮಿಕ, ಸಾವು ಅನಿವಾರ್ಯ. ಈ ಹುಟ್ಟು ಸಾವಿನ ಮಧ್ಯೆ ನಾವು ಏನು ಸಾಧನೆ, ತ್ಯಾಗ ಮಾಡುತ್ತೇವೆ ಎಂಬುದು ಮುಖ್ಯ. ಈ 10 ಪಥದ ರಸ್ತೆಗೆ ಭೂಮಿ ತ್ಯಾಗಮಾಡಿದ ಎಲ್ಲರಿಗೂ ಸಾಷ್ಟಾಂಗ ನಮಸ್ಕಾರಗಳು ಎಂದರು.

ಹಸಿರು ಬೆಂಗಳೂರು ಕಟ್ಟಬೇಕು, ಆ ಮೂಲಕ ಕೆಂಪೇಗೌಡರ ದೂರದೃಷ್ಟಿ ಉಳಿಯಬೇಕು ಎಂದು ಬಿಡಿಎ ವತಿಯಿಂದ ಇಂದು 15 ಲಕ್ಷ ಸಸಿಗಳನ್ನು ನೆಡಲಾಗಿದೆ. ಇದು ದಾಖಲೆಯ ತೀರ್ಮಾನ. ಬಾಲಗಂಗಾಧರ ಸ್ವಾಮೀಜಿಗಳು ಕೃಷ್ಣ ಅವರ ಕಾಲದಲ್ಲಿ 5 ಕೋಟಿ ಸಸಿಗಳನ್ನು ನೆಡಲು ಸಂಕಲ್ಪ ಮಾಡಿದ್ದನ್ನು ನಾವು ಮರೆಯಲು ಸಾಧ್ಯವಿಲ್ಲ. ಇದೇ ರೀತಿ ಬೆಂಗಳೂರಿನಲ್ಲಿ ಪ್ರತಿ ಶಾಲೆಗಳು ಒಂದೊಂದು ಪ್ರದೇಶದ ಉಸ್ತುವಾರಿ ವಹಿಸಿಕೊಂಡು ಅಲ್ಲಿ ಮಕ್ಕಳಿಂದ ಗಿಡ ನೆಡೆಸಿ ಬೆಳೆಸುವ ಕಾರ್ಯಕ್ರಮ ಮಾಡಬೇಕು. ಈ ವಿಚಾರದಲ್ಲಿ ಜಿಬಿಎ ವತಿಯಿಂದ ಸ್ಪರ್ಧೆ ಏರ್ಪಡಿಸಲಾಗುವುದು? ಎಂದು ತಿಳಿಸಿದರು.

ಈ ಹಿಂದೆ ಸರ್ಕಾರ ಪೆರಿಫೆರಲ್ ರಿಂಗ್ ರಸ್ತೆ ಮಾಡಲು ತೀರ್ಮಾನಿಸಿತ್ತು. ಆದರೆ ಕಾರ್ಯರೂಪಕ್ಕೆ ತಂದಿರಲಿಲ್ಲ. ನಾನು ಬೆಂಗಳೂರು ನಗರದ ಜವಾಬ್ದಾರಿ ವಹಿಸಿಕೊಂಡ ಬಳಿಕ ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ ಎಂದು ಹೇಳಿ ಈ ಯೋಜನೆ ಜಾರಿಗೆ ಮುಂದಾಗಿದ್ದೇವೆ. ನಾವು ಕೆಂಪೇಗೌಡರು, ಕೆಂಗಲ್ ಹನುಮಂತಯ್ಯ ಹಾಗೂ ಕೃಷ್ಣ ಅವರು ಸಾಕ್ಷಿಗುಡ್ಡೆ ಬಿಟ್ಟು ಹೋಗಿರುವ ಹಿನ್ನೆಲೆಯಲ್ಲಿ ನಾವು ಇಂದು ಈ ಮೂವರನ್ನು ಸ್ಮರಿಸುತ್ತಿದ್ದೇವೆ ಎಂದರು. 123 ಕಿ.ಮೀ ಉದ್ದದ ಬೆಂಗಳೂರು ಬಿಸಿನೆಸ್ ಕಾರಿಡಾರ್ ರಸ್ತೆ ನಿರ್ಮಾಣ ಪ್ರಕ್ರಿಯೆ ಚಾಲನೆಯಲ್ಲಿದ್ದು, ಟೆಂಡರ್ ಕರೆಯಲಾಗಿದೆ. ಎಲೆಕ್ಟ್ರಾನಿಕ್ ಸಿಟಿಯಿಂದ ಮೈಸೂರು ರಸ್ತೆ ಸೇರುವ ಹಂತಕ್ಕೂ ಅಂತಿಮ ಅಧಿಸೂಚನೆ ಸಧ್ಯದಲ್ಲೇ ಹೊರಡಿಸುತ್ತೇವೆ. ಈ ರಸ್ತೆ ಇಲ್ಲವಾದರೆ ಬೆಂಗಳೂರು ಉಳಿಯಲು ಸಾಧ್ಯವಿಲ್ಲ. ಹೀಗಾಗಿ ನಾನು ದಿಟ್ಟ ತೀರ್ಮಾನ ಮಾಡಲಿದ್ದೇನೆ.

ಭೂಮಿ ಕಳೆದುಕೊಳ್ಳುವ ಜಮೀನು ಮಾಲೀಕರಿಗೆ 35% ವಾಣಿಜ್ಯ ಭೂಮಿ, 40% ವಸತಿ ಪ್ರದೇಶ ಭೂಮಿ, ಟಿಡಿಆರ್ ನೀಡಲು ಸರ್ಕಾರ ಮುಂದಾಗಿದೆ.

ಭೂ ಮಾಲೀಕರು ತಮಗೆ ಯಾವ ಆಯ್ಕೆ ಬೇಕೋ ಅದನ್ನು ತೆಗೆದುಕೊಳ್ಳಬಹುದು ಎಂದು ವಿವರಿಸಿದರು.

### ಬೆಂ.ವಿವಿಯಲ್ಲಿ ಕೆಂಪೇಗೌಡ ಅಧ್ಯಯನ ಕೇಂದ್ರ

ಬೆಂಗಳೂರು ವಿವಿಯಲ್ಲಿ ಕೆಂಪೇಗೌಡ ಅಧ್ಯಯನ ಕೇಂದ್ರ ಸ್ಥಾಪಿಸಲು ತೀರ್ಮಾನಿಸಲಾಗಿದೆ. ಕೆ.ಎಚ್.ಮುನಿಯಪ್ಪನವರು ತಮ್ಮ ಕ್ಷೇತ್ರದಲ್ಲಿ 9.5 ಎಕರೆ ಜಾಗ ನೀಡಿದ್ದು, ಅಲ್ಲಿ ಕೆಂಪೇಗೌಡ ಅಧ್ಯಯನ ಕೇಂದ್ರ ಸ್ಥಾಪಿಸಲು ತೀರ್ಮಾನಿಸಲಾಗಿದೆ. ಹುತ್ರಿದುರ್ಗದಲ್ಲಿ 10 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ. ಆದರ್ಶ ಇಲ್ಲದೆ ಬದುಕಿದರೆ ಬದುಕಿಗೆ ಅಪಮಾನ, ಸಾಧನೆ ಇಲ್ಲದೆ ಸತ್ತರೆ ಸಾವಿಗೆ ಅಪಮಾನ. ಆ ದೃಷ್ಟಿಯಿಂದ ಕೃಷ್ಣ ಅವರ ಸಾಧನೆ ಸ್ಮರಿಸುತ್ತಾ ಈ ರಸ್ತೆಗೆ ಅವರ ಹೆಸರು ಇಟ್ಟಿದ್ದೇವೆ. ಅರ್ಕಾವತಿ ಬಡಾವಣೆ, ಕೆಂಪೇಗೌಡ ಬಡಾವಣೆ, ಶಿವರಾಂ ಕಾರಂತ ಬಡಾವಣೆ, ವಿಕಾಸ ಸೌಧ ನಿರ್ಮಿಸಿದವರು ಎಸ್.ಎಂ ಕೃಷ್ಣ ಅವರು ಎಂದು ಡಿ.ಕೆ. ಶಿವಕುಮಾರ್ ಎಂದು ಸ್ಮರಿಸಿದರು. ನಾಡಪ್ರಭು ಕೆಂಪೇಗೌಡರು ದೂರದೃಷ್ಟಿಯ ಮಹಾನ್ ಚೇತನ, ಕೆರಗಳನ್ನು ಕಟ್ಟಿದ ಭಗೀರಥ, ದೇವಾಲಯಗಳನ್ನು ನಿರ್ಮಿಸಿದ ದೈವಭಕ್ತ, ವಿವಿಧ ಪೇಟೆಗಳನ್ನು ನಿರ್ಮಿಸಿ ಎಲ್ಲಾ ಸಮುದಾಯದವರಿಗೆ ಆದ್ಯತೆ ನೀಡಿ ಆರ್ಥಿಕ ಶಕ್ತಿ ತುಂಬಿದ, ಕೆಚ್ಚೆದೆಯ ಹಾಗೂ ಸರ್ವ ಜನಾಂಗದ ನಾಯಕರು ಎಂದು ಬಣ್ಣಿಸಿದರು. ಈ ಕಾರ್ಯಕ್ರಮ ಕೆಂಪೇಗೌಡರ ಮೇಲಿನ ಪ್ರೀತಿಯ ಕಾರ್ಯಕ್ರಮ ಎಂಬುದಕ್ಕಿಂತ ಕೆಂಪೇಗೌಡರ ನೀತಿಯನ್ನು ಅಳವಡಿಸಿಕೊಳ್ಳುವ ಕಾರ್ಯಕ್ರಮವಾಗಿದೆ. ಕೆಂಪೇಗೌಡರು ಹಾಕಿದ ಅಡಿಪಾಯದ ಮೇಲೆ ನಾವು ಕಾರ್ಯಕ್ರಮ ರೂಪಿಸುತ್ತಿದ್ದೇವೆ. ಅವರ ಸಾಧನೆ, ದೂರದೃಷ್ಟಿ ತೀರ್ಮಾನ, ತ್ಯಾಗವನ್ನು ನಾವು ಸ್ಮರಿಸಬೇಕು. ಅವರ ಹೆಸರು ಶಾಶ್ವತವಾಗಿ ಉಳಿಯಲಿ ಎಂದು ನಾವು ಅನೇಕ ಯೋಜನೆ ರೂಪಿಸಿದ್ದೇವೆ ಎಂದು ತಿಳಿಸಿದರು.

### ಮೂರು 'ಕೆ' ಗಳು ಸದಾ ಸ್ಮರಿಸಬೇಕು

ಬೆಂಗಳೂರಿಗರು ಮೂರು ಕೆ ಗಳನ್ನು ನೆನಪಿನಲ್ಲಿ ಇಟ್ಟುಕೊಳ್ಳಬೇಕು. ಬೆಂಗಳೂರು ಕಟ್ಟಿದ ಕೆಂಪೇಗೌಡರು, ವಿಧಾನಸೌಧ ಕಟ್ಟಿದ ಕೆಂಗಲ್ ಹನುಮಂತಯ್ಯ ಹಾಗೂ ಬೆಂಗಳೂರನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ದ ಎಸ್.ಎಂ. ಕೃಷ್ಣ. ನಿರ್ಮಲಾನಂದ ಸ್ವಾಮೀಜಿ ಹಾಗೂ ನಂಜಾವಧೂತ ಸ್ವಾಮೀಜಿ ಸೇರಿ ಜೂನ್ 27ರಂದು ಕೆಂಪೇಗೌಡ ಜಯಂತಿ ಆಚರಣೆ ಮಾಡಬೇಕು ಎಂದು ತೀರ್ಮಾನ ಮಾಡಿದ ಬಳಿಕ ನಾವು ಕೆಂಪೇಗೌಡ ಜಯಂತಿ ಆಚರಿಸಿಕೊಂಡು ಬರುತ್ತಿದ್ದೇವೆ. ಆ ಸಮಯದಲ್ಲಿ ನನಗೆ ಬೆಂಬಲವಾಗಿ ನಿಂತ ರೇವಣ್ಣ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

# ಕೆಂಪೇಗೌಡರ ದೂರದೃಷ್ಟಿ ಫಲವಾಗಿ ಬೆಂಗಳೂರಿಗೆ ವಿಶ್ವಮಾನ್ಯತೆ: ಡಿಸಿಎಂ ಪರಮೇಶ್ವರ್ ಅಭಿಮತ



ಬೆಂಗಳೂರು, ಜೂ.27: ಮಾಗಡಿ ಕೆಂಪೇಗೌಡರು ಶತಮಾನಗಳ ದೂರದೃಷ್ಟಿ ಇಟ್ಟುಕೊಂಡು ಬೆಂಗಳೂರು ನಗರ ನಿರ್ಮಾಣ ಮಾಡಿದ್ದಾರೆ. ಅವರ ದೂರ ದೃಷ್ಟಿಯ ಫಲವಾಗಿಯೇ ಬೆಂಗಳೂರು ನಗರ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಹೇಳಿದರು.

ಚಲ್ಲಘಟ್ಟದ ಕೆಂಪೇಗೌಡ ಬಡಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ದಶಪಥ ರಸ್ತೆಯ ಲೋಕಾರ್ಪಣೆ, ಶ್ರೀ ಕೆಂಪೇಗೌಡರ ಸ್ಮಾರಕ ಅನಾವರಣ ಹಾಗೂ ಬೃಹತ್ ಹಸಿರು ಅಭಿಯಾನಕ್ಕೆ ಮುಖ್ಯಮಂತ್ರಿ ಅವರೊಂದಿಗೆ ಚಾಲನೆ ನೀಡಿದ ಬಳಿಕ ನಡೆದ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆಂಪೇಗೌಡರು ಜನಿಸದೇ ಇದ್ದಿದ್ದರೆ ಮತ್ತು ಆ ಕಾಲಘಟ್ಟದಲ್ಲೇ ಯೋಜಿತ ನಗರ ನಿರ್ಮಾಣದ ದೂರದೃಷ್ಟಿ ಹೊಂದದೇ ಇದ್ದಿದ್ದರೆ, ಇಂದಿನ ಬೆಂಗಳೂರು ಈ ಮಟ್ಟಕ್ಕೆ ಬೆಳೆಯುತ್ತಿತ್ತೇ ಎಂಬ ಪ್ರಶ್ನೆ ಮೂಡುತ್ತದೆ ಎಂದು ಅವರು ಹೇಳಿದರು.

ರೈತರ ಅನುಕೂಲಕ್ಕಾಗಿ ಮಾರುಕಟ್ಟೆಗಳನ್ನು ನಿರ್ಮಿಸುವುದು, ಕುಡಿಯುವ ನೀರಿನ ಅಗತ್ಯ ಪೂರೈಸಲು ನೂರಾರು ಕೆರೆ–ಕಟ್ಟೆಗಳನ್ನು ನಿರ್ಮಿಸುವುದು ಹಾಗೂ ಜನರ ನೆಮ್ಮದಿಯ ಬದುಕಿಗೆ ಅಗತ್ಯವಾದ ಮೂಲಸೌಕರ್ಯ ಕಲ್ಪಿಸುವ ಮೂಲಕ ಕೆಂಪೇಗೌಡರು ಆಧುನಿಕ ನಗರ ನಿರ್ಮಾಣಕ್ಕೆ ಭದ್ರ ಅಡಿಪಾಯ ಹಾಕಿದ್ದರು ಎಂದು ಅವರು ಪ್ರಶಂಸಿಸಿದರು.

ಇಂದಿನ ಬೆಂಗಳೂರು ವಿಶ್ವಮಟ್ಟದಲ್ಲಿ ಗುರುತಿಸಿಕೊಳ್ಳಲು ಕೆಂಪೇಗೌಡರಿಂದ ಹಿಡಿದು ಅನೇಕ ಮಹನೀಯರ ಪರಿಶ್ರಮ ಮತ್ತು ಕೊಡುಗೆ ಕಾರಣವಾಗಿದೆ ಎಂದು ಅವರು ಹೇಳಿದರು.

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಸಚಿವ ಸಂಪುಟದಲ್ಲಿ ನಾನು ಮತ್ತು ಡಿ.ಕೆ. ಶಿವಕುಮಾರ್ ಸಚಿವರಾಗಿ ಕಾರ್ಯನಿರ್ವಹಿಸಿದ್ದು ನಮ್ಮ ಪುಣ್ಯ ಎಂದು ಹೇಳಿದ ಪರಮೇಶ್ವರ ಅವರು, ಎಸ್.ಎಂ. ಕೃಷ್ಣ ಅವರ ಆಡಳಿತಾವಧಿಯಲ್ಲಿ ಬೆಂಗಳೂರಿನಲ್ಲಿ ಐಟಿ ಕ್ರಾಂತಿ ಸಂಭವಿಸಿತು. ಪ್ರತಿದಿನ 50ಕ್ಕೂ ಹೆಚ್ಚು ಕಂಪನಿಗಳು ನೋಂದಣಿಯಾಗುತ್ತಿದ್ದವು. ವಿಶ್ವದ ಪ್ರಮುಖ ಕಂಪನಿಗಳು ಬೆಂಗಳೂರಿನಲ್ಲಿ ತಮ್ಮ ಕಚೇರಿಗಳನ್ನು ಆರಂಭಿಸಿದ್ದು, ಲಕ್ಷಾಂತರ ಯುವಕರಿಗೆ ಉದ್ಯೋಗಾವಕಾಶಗಳು ದೊರೆತಿವೆ. ದೇಶದ ಸುಮಾರು ಶೇ. 40ರಷ್ಟು ಸಾಫ್ಟ್‌ವೇರ್ ಉತ್ಪಾದನೆ ಬೆಂಗಳೂರಿನಲ್ಲೇ ನಡೆಯುತ್ತಿದೆ ಎಂದು ತಿಳಿಸಿದರು.

ಬೆಂಗಳೂರು ಇನ್ನಷ್ಟು ಅಭಿವೃದ್ಧಿಯಾಗಬೇಕಿದ್ದು, ಸಾರಿಗೆ ದಟ್ಟಣೆ, ರಸ್ತೆ ಸಮಸ್ಯೆ ಹಾಗೂ ಕುಡಿಯುವ ನೀರಿನ ಕೊರತೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ ಎಂದು ಹೇಳಿದರು.

ಗ್ಲೋಬಲ್ ಇನ್‌ವೆಸ್ಟ್ ಮೀಟ್‌ನಲ್ಲಿ 10.25 ಲಕ್ಷ ಕೋಟಿ ಹೂಡಿಕೆಗೆ ಒಪ್ಪಂದವಾಗಿದ್ದು, ಈಗಾಗಲೇ 5 ಲಕ್ಷ ಕೋಟಿ ಹೂಡಿಕೆ ರಾಜ್ಯಕ್ಕೆ ಬಂದಿದೆ. ಇನ್ನೂ ಅನೇಕ ದೊಡ್ಡ ಕಂಪನಿಗಳು ಬೆಂಗಳೂರಿನಲ್ಲಿ ಹೂಡಿಕೆ ಮಾಡಲು ಆಸಕ್ತಿ ತೋರಿಸುತ್ತಿವೆ ಎಂದು ತಿಳಿಸಿದರು.

ಹೈದರಾಬಾದ್ ಮೂಲದ ಉದ್ಯಮಿಯೊಬ್ಬರು "ಎಷ್ಟೇ ಪ್ರಯತ್ನ ಮಾಡಿದರೂ ಜನ ಬೆಂಗಳೂರನ್ನೇ ಆಯ್ಕೆ ಮಾಡುತ್ತಾರೆ" ಎಂದು ಹೇಳಿದ್ದನ್ನು ಉಲ್ಲೇಖಿಸಿದ ಅವರು, ಬೆಂಗಳೂರಿನ ಪರಿಸರ, ಮೂಲಸೌಕರ್ಯ ಹಾಗೂ ಉದ್ಯೋಗಾವಕಾಶಗಳೇ ಈ ಆಕರ್ಷಣೆಗೆ ಪ್ರಮುಖ ಕಾರಣ ಎಂದು ಪರಮೇಶ್ವರ ಅವರು ಹೇಳಿದರು.

ಬೆಂಗಳೂರು ಅಭಿವೃದ್ಧಿಗೆ ಸಂಬಂಧಿಸಿದ ಹಲವು ಯೋಜನೆಗಳಿಗೆ ವಿರೋಧ ಪಕ್ಷಗಳು ಅನಗತ್ಯ ವಿರೋಧ ವ್ಯಕ್ತಪಡಿಸುತ್ತಿವೆ. ಸಿದ್ದರಾಮಯ್ಯ ಅವರು ಹೆಬ್ಬಾಳದಿಂದ ಚಾಲುಕ್ಯ ವೃತ್ತದವರೆಗೆ ಸ್ಟೀಲ್ ಬ್ರಿಡ್ಜ್ ಯೋಜನೆ ಮಾಡಲು ಮುಂದಾದಾಗ ವಿರೋಧಿಸಿದ್ದರು.

ಬೆಂಗಳೂರು ನಗರದ ಮೇಲಿನ ಒತ್ತಡ ಕಡಿಮೆ ಮಾಡಬೇಕು ಎಂಬ ನಿಟ್ಟಿನಲ್ಲಿ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರು ಸುಂದರವಾದ ಬಿಡದಿ ಟೌನ್‌ಶಿಪ್ ನಿರ್ಮಾಣ ಮಾಡಲು ಹೊರಟಿದ್ದಾರೆ. ಅದಕ್ಕೂ ವಿರೋಧಿಸುತ್ತಿದ್ದಾರೆ. ಬೆಂಗಳೂರು ಅಭಿವೃದ್ಧಿಯಾಗಬಾರದೇ ನಿಮಗೆ ಯಾವ ಉದ್ದೇಶ ಇದೆ ಎಂದು ವಿರೋಧ ಪಕ್ಷದವರನ್ನು ಪ್ರಶ್ನಿಸಿದರು.

ವಿರೋಧ ಪಕ್ಷದವರು ಸರ್ಕಾರಕ್ಕೆ, ಅಭಿವೃದ್ಧಿ ಕಾರ್ಯಗಳಿಗೆ ಪೂರಕವಾದ ಸಲಹೆ–ಸೂಚನೆಗಳನ್ನು ನೀಡಬೇಕು. ಬೆಂಗಳೂರಿನ ಬೆಳವಣಿಗೆ ಮತ್ತು ಕರ್ನಾಟಕದ ಅಭಿವೃದ್ಧಿಗೆ ಸಹಕಾರ ನೀಡುವ ಮನೋಭಾವವನ್ನು ಜನರು ನಿರೀಕ್ಷಿಸುತ್ತಿದ್ದಾರೆ. ವಿನಾಕಾರಣ ಅಭಿವೃದ್ಧಿ ಕಾರ್ಯಗಳಿಗೆ ವಿರೋಧಿಸುವ ನಿಮ್ಮ ಚಿಂತನೆಗಳನ್ನು ರಾಜ್ಯದ ಜನ ಒಪ್ಪುವುದಿಲ್ಲ ಎಂದು ಅವರು ಹೇಳಿದರು.

# ಹೆಬ್ಬಾಳ ಜಂಕ್ಷನ್–ಯುಎಎಸ್ ಕ್ವಾರ್ಟರ್ಸ್ ಸುರಂಗ ರಸ್ತೆ ನಿರ್ಮಾಣಕ್ಕೆ ಇಂದು ಸಿಎಂ ಚಾಲನೆ: ಸಚಿವ ಬೈರತಿ ಸುರೇಶ್



**ಬೆಂಗಳೂರು, ಜೂ.27:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೆಬ್ಬಾಳ ಜಂಕ್ಷನ್‌ನಿಂದ ಯುಎಎಸ್ ಕ್ವಾರ್ಟರ್ಸ್‌ವರೆಗಿನ ಸುರಂಗ ರಸ್ತೆ ನಿರ್ಮಾಣಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾನುವಾರ (ಜೂ.28) ಭೂಮಿಪೂಜೆ ನೆರವೇರಿಸಲಿದ್ದಾರೆ.

ಈ ಸಂಬಂಧ ಶನಿವಾರ ಮಾತನಾಡಿದ ಹೆಬ್ಬಾಳ ಶಾಸಕ ಹಾಗೂ ಸಾರಿಗೆ ಸಚಿವ ಬೈರತಿ ಸುರೇಶ್, ಭಾನುವಾರ ಬೆಳಗ್ಗೆ 9.30ಕ್ಕೆ ಹೆಬ್ಬಾಳ ಜಂಕ್ಷನ್‌ನಲ್ಲಿ ಮುಖ್ಯಮಂತ್ರಿಗಳು ಯೋಜನೆಗೆ ಚಾಲನೆ ನೀಡಲಿದ್ದಾರೆ. ಮೇಕ್ರಿ ವೃತ್ತದಿಂದ ಹೆಬ್ಬಾಳ ಜಂಕ್ಷನ್‌ವರೆಗೆ ಸಾಕಷ್ಟು ಸಂಚಾರ ದಟ್ಟಣೆ ಉಂಟಾಗುತ್ತಿತ್ತು. ಇದರಿಂದ ವಿಮಾನ ನಿಲ್ದಾಣ ಸೇರಿ ಇತರೆಡೆಗೆ ಹೋಗುವುದು ಕಷ್ಟವಾಗುತ್ತಿತ್ತು. ಈ ಸಮಸ್ಯೆ ನಿವಾರಣೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಸುರಂಗ ರಸ್ತೆ ನಿರ್ಮಾಣಕ್ಕೆ ನಿರ್ಧರಿಸಿದೆ ಎಂದರು.

ವಿರೋಧ ಪಕ್ಷಗಳಿರುವುದೇ ವಿರೋಧ ಮಾಡಲಿಕ್ಕೆ. ಆದರೆ, ಲಕ್ಷಾಂತರ ಜನರ ಉಪಯೋಗಕ್ಕಾಗಿ ಈ ಯೋಜನೆ ಜಾರಿಗೆ ಮಾಡಲಾಗುತ್ತಿದೆ ಎಂದರು.

### ಸುರಂಗ ರಸ್ತೆಯ ವಿಶೇಷತೆಗಳು

ಉದ್ದ – 2.228 ಕಿಲೋಮೀಟರ್, ಹೆಬ್ಬಾಳ ಜಂಕ್ಷನ್‌ನಿಂದ ಯುಎಎಸ್ ಸಿಬ್ಬಂದಿ ಕ್ವಾರ್ಟರ್ಸ್‌ವರೆಗೆ.

ಆಳ – ಸುಮಾರು 60 ಅಡಿ, 6 ಪಥದ ರಸ್ತೆ, ತಲಾ ಒಂದು ಮಾರ್ಗ ತಲಾ 3.5 ಮೀಟರ್ ಅಗಲ

ಅಂದಾಜು ವೆಚ್ಚ: 1139 ಕೋಟಿ ರೂ. 18 ತಿಂಗಳಲ್ಲಿ ಕಾಮಗಾರಿ ಪೂರ್ಣ. ಯಾವುದೇ ಖಾಸಗಿ ಜಾಗದ ಸ್ವಾಧೀನವಿಲ್ಲ ನಾಗರಿಕರಿಗೆ ಉಪಯೋಗ

### ಬಸ್ ಪ್ರಯಾಣದರ ಏರಿಕೆಗೆ ಚಿಂತನೆ

ದಿನದಿಂದ ದಿನಕ್ಕೆ ಪೆಟ್ರೋಲ್, ಡೀಸೆಲ್ ದರಗಳು ಹೆಚ್ಚಾಗುತ್ತಿವೆ. ಎಲ್ಲಾ ಸಾರಿಗೆ ನಿಗಮಗಳಿಗೆ ಸುಮಾರು 5 ಸಾವಿರ ಕೋಟಿ ರೂಪಾಯಿ ನಷ್ಟವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಬಸ್ ಪ್ರಯಾಣ ದರ ಏರಿಕೆ ಮಾಡುವ ಬಗ್ಗೆ ಚಿಂತನೆ ನಡೆಸಲಾಗಿದೆ. ಆದರೆ, ಸರ್ಕಾರಕ್ಕೆ ಇಲಾಖೆಯಿಂದ ಇದುವರೆಗೆ ಯಾವುದೇ ಪ್ರಸ್ತಾವನೆ ಸಲ್ಲಿಸಿಲ್ಲ. ಮುಂದಿನ ಸಂಪುಟ ಸಭೆಗಳಲ್ಲಿ ಈ ಬಗ್ಗೆ ಪ್ರಸ್ತಾವನೆ ಮಂಡಿಸಲಾಗುತ್ತದೆ. ಮುಖ್ಯಮಂತ್ರಿಗಳು ಮತ್ತು ಸರ್ಕಾರ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದೆ. ಆದಾಗ್ಯೂ, ಜನಸಾಮಾನ್ಯರಿಗೆ ಹೊರೆ ಆಗದ ರೀತಿಯಲ್ಲಿ ಪ್ರಯಾಣ ದರ ಹೆಚ್ಚಳ ಮಾಡುವ ಚರ್ಚೆಗಳು ನಡೆದಿವೆ ಎಂದು ಸಚಿವ ಬೈರತಿ ಸುರೇಶ್ ಸ್ಪಷ್ಟಪಡಿಸಿದರು.

# ಬೆಂಗಳೂರು ಜಾಗತಿಕ ಮನ್ನಣೆ ಪಡೆಯಲು ಕೆಂಪೇಗೌಡರು ಕಾರಣ: ಬಿ.ವೈ. ವಿಜಯೇಂದ್ರ



**ಬೆಂಗಳೂರು: ಜೂ.27:** ಬೆಂಗಳೂರು ನಗರವನ್ನು ರಾಷ್ಟ್ರಮಟ್ಟ ಮಾತ್ರವಲ್ಲದೇ, ಅಂತರರಾಷ್ಟ್ರೀಯ ಮಟ್ಟದಲ್ಲೂ ಗುರುತಿಸುವಂತೆ ಮಾಡುವಲ್ಲಿ ನಾಡಪ್ರಭು ಕೆಂಪೇಗೌಡರೇ ಕಾರಣ ಎನ್ನಲು ಹೆಮ್ಮೆ ಎನಿಸುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದ ವತಿಯಿಂದ ಸದಾಶಿವನಗರದ ಕೆಂಪೇಗೌಡ ಗಡಿ ಗೋಪುರ ಉದ್ಯಾನವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, 517 ವರ್ಷಗಳ ನಂತರದಲ್ಲೂ ನಾಡಪ್ರಭು ಕೆಂಪೇಗೌಡರನ್ನು ನಾವು ನೆನಪಿಸುತ್ತಿದ್ದೇವೆ ಎಂದರೆ, ಅವರು ಬೆಂಗಳೂರು ನಗರ– ನಾಡಿಗೆ ಕೊಟ್ಟ ಕೊಡುಗೆಯನ್ನು ಊಹಿಸಲು ಸಾಧ್ಯ ಎಂದು ನುಡಿದರು.

ನಾಡಪ್ರಭು ಕೆಂಪೇಗೌಡರ ಹೆಸರು ಕೇವಲ ಕರ್ನಾಟಕ, ದೇಶ ಮಾತ್ರವಲ್ಲದೇ ಇಡೀ ವಿಶ್ವದಲ್ಲಿ ಚರ್ಚೆ ಅಗುವಂತೆ ಆಗಬೇಕೆಂಬ ಸದುದ್ದೇಶದಿಂದ ಹಿಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಅಧ್ಯಯನ ಕೇಂದ್ರಕ್ಕೆ 50 ಕೋಟಿ ಕೊಟ್ಟಿದ್ದರು. ಪ್ರತಿಮೆ ನಿರ್ಮಾಣಕ್ಕೆ ಹಣ ಕೊಟ್ಟದ್ದಲ್ಲದೇ, ಪಾರ್ಕ್ ನಿರ್ಮಿಸಲು ತಿಳಿಸಿದ್ದರು. ಅಷ್ಟೇ ಅಲ್ಲ; ಬೆಂಗಳೂರು ಅಂತರರಾಷ್ಟ್ರೀಯ ವಿಮಾನನಿಲ್ದಾಣಕ್ಕೆ ಹೆಸರು ಇಡುವ ಚರ್ಚೆ ಆಗುವ ಸಂದರ್ಭದಲ್ಲಿ ಈ ವಿಮಾನನಿಲ್ದಾಣಕ್ಕೆ ನಾಡಪ್ರಭು ಕೆಂಪೇಗೌಡರ ಹೆಸರೇ ಶ್ರೇಷ್ಠ ಎಂದು ತೀರ್ಮಾನ ತೆಗೆದುಕೊಂಡವರು ಆಗಿನ ಸಿಎಂ ಯಡಿಯೂರಪ್ಪನವರು ಎಂದು ವಿವರಿಸಿದರು.

ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ಮಾತನಾಡಿ, ನಾಡಪ್ರಭು ಕೆಂಪೇಗೌಡರ ಪ್ರೇರೇಪಣೆ ನಮ್ಮೆಲ್ಲರ ಮೇಲಿರಲಿ ಎಂದು ಆಶಿಸಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ವಿಮಾನನಿಲ್ದಾಣಕ್ಕೆ ಕೆಂಪೇಗೌಡರ ಹೆಸರು ನಾಮಕರಣ ಮಾಡಿದ್ದ ವಿಚಾರವನ್ನು ಪ್ರಸ್ತಾಪಿಸಿ ಮೆಚ್ಚುಗೆ ಸೂಚಿಸಿದರು.

ಯಡಿಯೂರಪ್ಪನವರು ಎರಡನೇ ಬಾರಿ ಅವರು ಸಿಎಂ ಆಗಿದ್ದಾಗ ವಿಮಾನನಿಲ್ದಾಣದ ಬಳಿ ಕೆಂಪೇಗೌಡರ ಪ್ರತಿಮೆ ನಿರ್ಮಾಣಕ್ಕೆ ಒಪ್ಪಿಗೆ ಸೂಚಿಸಿದರು. 108 ಅಡಿಯ ಪ್ರತಿಮೆಗೆ 65 ಕೋಟಿ, ಥೀಮ್ ಪಾರ್ಕಿಗೆ 20 ಕೋಟಿ, ನಾಡಪ್ರಭು ಕೆಂಪೇಗೌಡರ ವೀರಸಮಾಧಿಗೆ ಜಮೀನು ಸ್ವಾಧೀನಕ್ಕೆ 10 ಕೋಟಿ ನೀಡಿದ್ದರು ಎಂದು ವಿವರಿಸಿದರು.

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಕೇಂದ್ರಕ್ಕೆ ಅವಶ್ಯಕ ಹಣ ಬಿಡುಗಡೆ ಮಾಡಿದ್ದರು ಎಂದು ತಿಳಿಸಿದರು. ಪ್ರತಿ ಗ್ರಾಮದಿಂದ ಮೃತ್ತಿಕೆಯನ್ನೂ ತರಲಾಗಿತ್ತು. ಇದು ಯಡಿಯೂರಪ್ಪನವರ ನೇತೃತ್ವ; ಮಾತ್ರವಲ್ಲದೇ ಹೃದಯವಂತಿಕೆಯ ಕೆಲಸ ಎಂದು ತಿಳಿಸಿದರು.

# ದೇಶಾದ್ಯಂತ ಕಿಡ್ನಿ ಕಸಿ ಪ್ರಕ್ರಿಯೆ ಫಲಿತಾಂಶಗಳ ಬಹಿರಂಗಕ್ಕೆ ಸೂಚನೆ

## ಕೇಂದ್ರ ಆರೋಗ್ಯ ಇಲಾಖೆಯಿಂದ ಸಂಸದ ಕ್ಯಾ. ಬ್ರಿಜೇಶ್ ಚೌಟ ಪತ್ರಕ್ಕೆ ಮನ್ನಣೆ



ನವದೆಹಲಿ: ದೇಶದಲ್ಲಿ ಮೂತ್ರಪಿಂಡ (ಕಿಡ್ನಿ) ಸೇರಿದಂತೆ ಅಂಗಾಂಗ ಕಸಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆ ಮತ್ತು ಆಸ್ಪತ್ರೆಗಳ ಹೊಣೆಗಾರಿಕೆಯನ್ನು ಹೆಚ್ಚಿಸಲು ರಾಷ್ಟ್ರೀಯ ಅಂಗ ಮತ್ತು ಅಂಗಾಂಶ ಕಸಿ ಸಂಸ್ಥೆ ಮಹತ್ವದ ಕ್ರಮ ಕೈಗೊಂಡಿದೆ. ದೇಶದ ಎಲ್ಲಾ ನೋಂದಾಯಿತ ಅಂಗಾಂಗ ಕಸಿ ಆಸ್ಪತ್ರೆಗಳು ತಮ್ಮ ವೆಬ್‌ಸೈಟ್‌ಗಳ ಮುಖಪುಟದಲ್ಲಿ ಕಸಿ ಪ್ರಕ್ರಿಯೆಯ ಫಲಿತಾಂಶಗಳ ದತ್ತಾಂಶಗಳನ್ನು ಕಡ್ಡಾಯವಾಗಿ ದಾಖಲು ಮಾಡಬೇಕು ಎಂದು ಕೇಂದ್ರ ಆರೋಗ್ಯ ಇಲಾಖೆ ವ್ಯಾಪ್ತಿಯ ನೋಟೋ ಸಂಸ್ಥೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಕರ್ನಾಟಕದ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಸದಸ್ಯ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಅಂಗಾಂಗ ಕಸಿ ಪ್ರಕರಣಗಳಲ್ಲಿ ಪಾರದರ್ಶಕತೆ ತರಲು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಮತ್ತು ರಾಷ್ಟ್ರೀಯ ಅಂಗ ಮತ್ತು ಅಂಗಾಂಶ ಕಸಿ ಸಂಸ್ಥೆ ನಿರ್ದೇಶಕ ಡಾ. ಅನಿಲ್ ಕುಮಾರ್ ಅವರಿಗೆ ಪತ್ರ ಬರೆದ ಪರಿಣಾಮ ದೇಶದ ಎಲ್ಲಾ ನೋಂದಾಯಿತ ಅಂಗಾಂಗ ಕಸಿ ಆಸ್ಪತ್ರೆಗಳಿಗೆ ಹೊಸ ನಿಯಮ ಅನ್ವಯವಾಗಲಿದೆ. ಡಾ. ಅನಿಲ್ ಕುಮಾರ್ ಅವರು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸೂಕ್ತ ಪ್ರಾಧಿಕಾರಗಳಿಗೆ ಸಂಸದ ಚೌಟ ಅವರ ಪತ್ರ ಉಲ್ಲೇಖಿಸಿ ಈ ಕುರಿತ ಅಧಿಕೃತ ಆದೇಶ ನೀಡಿದ್ದಾರೆ.

ಮಂಗಳೂರಿನ ಆರೋಗ್ಯ ತಜ್ಞರಾದ ಶ್ಯಾಮ್ ಕಾಮತ್ ಮತ್ತು ಡಾ. ಲಿಯೋನೆಲ್ ಡಿಸೋಜಾ ಅವರು ಸಲ್ಲಿಸಿದ ಸಮಗ್ರ ವರದಿಯೊಂದನ್ನು ಆಧರಿಸಿ ಪತ್ರ ಸಂಸದ ಕ್ಯಾ. ಚೌಟ ಪತ್ರ ಬರೆದಿದ್ದರು. ಅಂಗಾಂಗ ಕಸಿ ಪ್ರಕ್ರಿಯೆಗಳ ನಂತರದ ಮರಣ ಪ್ರಮಾಣ ಮತ್ತು ದೀರ್ಘಕಾಲೀನ ನಿಗಾ ವ್ಯವಸ್ಥೆಯಲ್ಲಿರುವ ನ್ಯೂನತೆಗಳನ್ನು ಈ ವರದಿ ಎತ್ತಿ ತೋರಿಸಿತ್ತು.

**ನೋಟೋ ಸೂಚನೆಯಲ್ಲಿ ಏನೇನಿದೆ?**

ಸದ್ಯ ದೇಶಾದ್ಯಂತ 824 ಕಸಿ ಕೇಂದ್ರಗಳು ನೋಟೋ ಸಂಸ್ಥೆಯ ರಿಜಿಸ್ಟ್ರಿಯೊಂದಿಗೆ ಲಿಂಕ್ ಆಗಿದ್ದು, ರೋಗಿಗಳ ಮತ್ತು ದಾನಿಗಳ ದತ್ತಾಂಶಗಳನ್ನು ನಮೂದಿಸುವುದು ಕಡ್ಡಾಯ. ಪ್ರತಿ ಆಸ್ಪತ್ರೆ ಕೂಡ ಅಲ್ಲಿ ಮಾಡಿದ ಕಸಿ ಚಿಕಿತ್ಸೆಗಳ ಫಲಿತಾಂಶದ ಡೇಟಾ ವೆಬ್ಸೈಟ್ ನಲ್ಲಿ ದಾಖಲಿಸಬೇಕು. ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದ 6 ತಿಂಗಳು, 1 ವರ್ಷ, 3 ವರ್ಷ ಮತ್ತು 5 ವರ್ಷಗಳ ಅವಧಿಯಲ್ಲಿ ಎಷ್ಟು ರೋಗಿಗಳು ಜೀವಂತವಾಗಿದ್ದಾರೆ, ಎಷ್ಟು ಜನ ಮೃತಪಟ್ಟಿದ್ದಾರೆ ಮತ್ತು ಎಷ್ಟು ಜನರಲ್ಲಿ ಕಸಿ ವಿಫಲವಾಗಿದೆ ಎಂಬ ವಿವರಗಳನ್ನು ಇಲ್ಲಿ ನಮೂದಿಸಬೇಕಾಗುತ್ತದೆ. ಕಸಿ ಪ್ರಕ್ರಿಯೆಗೆ ಮುನ್ನ ರೋಗಿ ಮತ್ತವರ ಕುಟುಂಬಕ್ಕೆ ಅದರಲ್ಲಿರುವ ಅಪಾಯಗಳು ಹಾಗೂ ಫಲಿತಾಂಶಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ರಾಜ್ಯ ಸರ್ಕಾರಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಸಿ ಆಸ್ಪತ್ರೆಗಳು ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮತ್ತು ರಾಷ್ಟ್ರೀಯ ನೋಂದಣಿಗೆ ಸಕಾಲದಲ್ಲಿ ಸಂಪೂರ್ಣ ದತ್ತಾಂಶ ಸಲ್ಲಿಸುವಂತೆ ನೋಡಿಕೊಳ್ಳಬೇಕು ಎಂದು ನೋಟೋ ಆದೇಶ ನೀಡಿದೆ.

**ಸಂಸದರ ಪತ್ರದಲ್ಲೇನಿತ್ತು?**

ಅಂಗಾಂಗ ಕಸಿ ಯಶಸ್ವಿಯಾಗಬೇಕು ಎಂದು ಸಾರ್ವಜನಿಕರು ಬಯಸುತ್ತಾರೆ. ಆದರೆ ಕಸಿ ಪ್ರಕ್ರಿಯೆಯಲ್ಲಿನ ದೀರ್ಘಕಾಲೀನ ತೊಡಕುಗಳು, ವೈಫಲ್ಯಗಳು ಮತ್ತು ಕಸಿ ನಂತರದ ಸಾವುಗಳನ್ನು ಸಮರ್ಪಕವಾಗಿ ಪತ್ತೆಹಚ್ಚಲು ಸಾಧ್ಯವಾಗುತ್ತಿಲ್ಲ. ಕಿಡ್ನಿ ಕಸಿಯ ಅಲ್ಪಾವಧಿಯ ಯಶಸ್ಸನ್ನು ಮಾತ್ರ ಬಿಂಬಿಸಲಾಗುತ್ತಿದ್ದು, ರೋಗಿಗಳು ದೀರ್ಘಕಾಲದವರೆಗೆ ಎದುರಿಸುವ ಸವಾಲುಗಳನ್ನು ನಿರ್ಲಕ್ಷಿಸಲಾಗುತ್ತಿದೆ. ಕಸಿ ನಂತರ ನೀಡಲಾಗುವ ರೋಗ ನಿರೋಧಕ ಚಿಕಿತ್ಸೆಗಳಿಂದಾಗಿ ರೋಗಿಗಳು ತೀವ್ರ ಆರೋಗ್ಯ ತೊಂದರೆ, ದೀರ್ಘಕಾಲದ ವಿಷತ್ವ, ಶಾರೀರಿಕ ದೌರ್ಬಲ್ಯ ಮತ್ತು ಮಾರಕ ಸೋಂಕುಗಳಿಗೆ ಒಳಗಾಗುತ್ತಿದ್ದಾರೆ. ಕಸಿ ಪ್ರಕ್ರಿಯೆಯ ದೀರ್ಘಾವಧಿ ಪರಿಣಾಮದ ಮೇಲ್ವಿಚಾರಣೆ ಮಾಡಲು ರಾಷ್ಟ್ರೀಯ ನೋಂದಾವಣೆ ವ್ಯವಸ್ಥೆ ಇಲ್ಲ. ಡಿಸ್ಚಾರ್ಜ್ ಆದ ನಂತರದ ದೀರ್ಘಕಾಲದ ಬದುಕುಳಿಯುವಿಕೆ ಮತ್ತು ಮರಣದ ಕಾರಣಗಳನ್ನು ಪತ್ತೆಹಚ್ಚಲು ಕೇಂದ್ರೀಕೃತ ರಾಷ್ಟ್ರೀಯ ವ್ಯವಸ್ಥೆಯ ಕೊರತೆಯಿದೆ. ಆಸ್ಪತ್ರೆಗಳ ಹೊಣೆಗಾರಿಕೆ ಮತ್ತು ಪಾರದರ್ಶಕತೆ ಹೆಚ್ಚಿಸಲು ಹಾಗೂ ರೋಗಿಗಳು ತಿಳುವಳಿಕೆಯುಳ್ಳ ನಿರ್ಧಾರಗಳನ್ನು ತೆಗೆದುಕೊಳ್ಳಲು ದತ್ತಾಂಶ ದಾಖಲೀಕರಣ ಸಹಾಯ ಮಾಡುತ್ತದೆ ಎಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ತಮ್ಮ ಪತ್ರದಲ್ಲಿ ವಿವರಿಸಿದ್ದರು.

### ಇದೊಂದು ಮೈಲಿಗಲ್ಲು

"ಮೇ 22ರಂದು ನಾನು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಮತ್ತು ಓಔಖಖಔ ನಿರ್ದೇಶಕರಿಗೆ ಪತ್ರ ಬರೆದಿದ್ದೆ. ಪತ್ರಕ್ಕೆ ತಕ್ಷಣ ಸ್ಪಂದಿಸಿ ಆರೋಗ್ಯ ಇಲಾಖೆ ಅಗತ್ಯ ಕ್ರಮ ಕೈಗೊಂಡಿರುವುದು ನಿಜಕ್ಕೂ ಶ್ಲಾಘನಾರ್ಹ. ಸಾರ್ವಜನಿಕರಿಗೆ ಸಂಬಂಧಿಸಿದ ವಿಚಾರಗಳಲ್ಲಿ ನಮ್ಮ ಕೇಂದ್ರ ಸರ್ಕಾರ ತ್ವರಿತಗತಿಯ ತೀರ್ಮಾನಗಳನ್ನು ಹೇಗೆ ಕೈಗೊಳ್ಳುತ್ತದೆ ಎಂಬುದಕ್ಕೆ ಇದೊಂದು ಉದಾಹರಣೆ. ಆಸ್ಪತ್ರೆಗಳ ಹೊಣೆಗಾರಿಕೆ ಮತ್ತು ಪಾರದರ್ಶಕತೆ ಹೆಚ್ಚಿಸುವ ನಿಟ್ಟಿನಲ್ಲಿ ಇದೊಂದು ಮೈಲಿಗಲ್ಲು ಎಂದು ನಾನು ಭಾವಿಸುತ್ತೇನೆ"

–ಕ್ಯಾ. ಬ್ರಿಜೇಶ್ ಚೌಟ,
ಸಂಸದರು, ದಕ್ಷಿಣ ಕನ್ನಡ

# ರಾಮಮಂದಿರ ದೇಣಿಗೆ ಲೂಟಿ ಆರೋಪದ ಬಗ್ಗೆ ಪ್ರಧಾನಿ ಮೋದಿ ಅವರ ಮೌನಕ್ಕೆ ಕಾಂಗ್ರೆಸ್ ಪ್ರಶ್ನೆ




**ನವದೆಹಲಿ, ಜೂ.27:** ಅಯೋಧ್ಯೆಯ ರಾಮಮಂದಿರದಲ್ಲಿ ದೇಣಿಗೆಗಳ ನಿರ್ವಹಣೆಯಲ್ಲಿ ಅಕ್ರಮಗಳು ನಡೆದಿವೆ ಎಂಬ ಆರೋಪದ ಮೇಲೆ ಕೇಂದ್ರ ಮತ್ತು ಉತ್ತರ ಪ್ರದೇಶದ ಭಾರತೀಯ ಜನತಾ ಪಕ್ಷದ ನೇತೃತ್ವದ ಸರ್ಕಾರಗಳ ವಿರುದ್ಧ ಕಾಂಗ್ರೆಸ್ ಶನಿವಾರ ತನ್ನ ದಾಳಿಯನ್ನು ತೀವ್ರಗೊಳಿಸಿದೆ, ಈ ವಿಷಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಮೌನವನ್ನು ಪ್ರಶ್ನಿಸಿದೆ ಮತ್ತು ಗಂಭೀರ ಆರೋಪಗಳನ್ನು ಎದುರಿಸುತ್ತಿರುವ ಎಲ್ಲಾ ಟ್ರಸ್ಟ್ ಸದಸ್ಯರನ್ನು ಬಂಧಿಸಬೇಕೆಂದು ಒತ್ತಾಯಿಸಿದೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಕಾಂಗ್ರೆಸ್ ನಾಯಕ ಅಖಿಲೇಶ್ ಪ್ರತಾಪ್ ಸಿಂಗ್, ದೇಶ, ವಿಶೇಷವಾಗಿ ಸನಾತನ ಧರ್ಮದ ಭಕ್ತರು, ರಾಮಮಂದಿರದಲ್ಲಿ ಸಂಗ್ರಹಿಸಿದ ಸಾವಿರಾರು ಕೋಟಿ ರೂ. ದೇಣಿಗೆಗಳ ಕಳ್ಳತನದ ಬಗ್ಗೆ ಉತ್ತರಗಳಿಗಾಗಿ ಕಾಯುತ್ತಿದ್ದಾರೆ ಎಂದು ಹೇಳಿದರು.

"ಇಡೀ ರಾಷ್ಟ್ರ, ವಿಶೇಷವಾಗಿ ಸನಾತನ ಧರ್ಮದಲ್ಲಿ ಆಳವಾದ ನಂಬಿಕೆ ಹೊಂದಿರುವವರು, ಸಾವಿರಾರು ಕೋಟಿ ರೂಪಾಯಿಗಳ ದೇಣಿಗೆಗಳನ್ನು ಯಾರು ಕದ್ದಿದ್ದಾರೆಂದು ತಿಳಿಯಲು ಬಯಸುತ್ತಾರೆ" ಎಂದು ಸಿಂಗ್ ಹೇಳಿದರು, ಈ ವಿಷಯದ ಬಗ್ಗೆ ಸಂಪೂರ್ಣ ಮತ್ತು ನಿಷ್ಪಕ್ಷಪಾತ ತನಿಖೆಗಾಗಿ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಿದರು.

ರಾಮ ಮಂದಿರವನ್ನು ನಿರ್ವಹಿಸುವ ಟ್ರಸ್ಟ್ ಅನ್ನು ವಿಸರ್ಜಿಸಬೇಕೆಂದು ಕಾಂಗ್ರೆಸ್ ನಾಯಕರು ಕರೆ ನೀಡಿದರು ಮತ್ತು ಮೇಲ್ನೋಟಕ್ಕೆ ಕೃತ್ಯದಲ್ಲಿ ಭಾಗಿಯಾಗಿರುವ ಎಲ್ಲ ವ್ಯಕ್ತಿಗಳನ್ನು ಬಂಧಿಸಬೇಕೆಂದು ಒತ್ತಾಯಿಸಿದರು.

ಪ್ರಧಾನಿಯವರು ರಾಮ ಮಂದಿರ ಯೋಜನೆಯ ಬಗ್ಗೆ ತೀವ್ರ ಆಸಕ್ತಿ ವಹಿಸಿದ್ದಾರೆ ಮತ್ತು ಹಲವಾರು ಸಂದರ್ಭಗಳಲ್ಲಿ ದೇವಾಲಯಕ್ಕೆ ಭೇಟಿ ನೀಡಿದ್ದಾರೆ ಎಂದು ಹೇಳುತ್ತಾ, ವಿವಾದದ ಬಗ್ಗೆ ಮೋದಿಯವರ ಮೌನ ಎಂದು ವಿವರಿಸಿದ್ದಕ್ಕೆ ಸಿಂಗ್ ಆಶ್ಚರ್ಯ ವ್ಯಕ್ತಪಡಿಸಿದರು.

"ಟ್ರಸ್ಟ್ ಅನ್ನು ಮೋದಿ ಸರ್ಕಾರದ ಅಡಿಯಲ್ಲಿ ರಚಿಸಲಾಯಿತು ಮತ್ತು ದೇವಾಲಯದ ವ್ಯವಹಾರಗಳನ್ನು ನಿರ್ವಹಿಸುವ ಜವಾಬ್ದಾರಿಯನ್ನು ವಹಿಸಿಕೊಂಡಿರುವ ಜನರನ್ನು ಅದರ ಕಣ್ಗಾವಲಿನಲ್ಲಿ ಆಯ್ಕೆ ಮಾಡಲಾಯಿತು. ಈ ಜವಾಬ್ದಾರಿಯನ್ನು ವಹಿಸಲಾದವರ ವಿರುದ್ಧ ಗಂಭೀರ ಆರೋಪಗಳು ಕೇಳಿಬರುತ್ತಿರುವಾಗ, ಪ್ರಧಾನಿ ಈಗ ಏಕೆ ಮೌನವಾಗಿದ್ದಾರೆ" ಎಂದು ಅವರು ಕೇಳಿದರು.

ದೇವಾಲಯ ನಿರ್ಮಾಣದ ಆರಂಭದಿಂದಲೂ ಭ್ರಷ್ಟಾಚಾರದ ವರದಿಗಳು ಹೊರಹೊಮ್ಮಿವೆ ಎಂದು ಸಿಂಗ್ ಆರೋಪಿಸಿದರು.

ಹಿಂದಿನ ವಿವಾದಗಳನ್ನು ಉಲ್ಲೇಖಿಸಿ, ರಾಮ ಮಂದಿರ ಯೋಜನೆಗೆ ಸಂಬಂಧಿಸಿದ ಪ್ರಮುಖ ಭೂಸ್ವಾಧೀನ ಹಗರಣ ನಡೆದಿದೆ ಮತ್ತು ನಿರ್ಮಾಣ ಮುಂದುವರೆದಂತೆ ಭ್ರಷ್ಟಾಚಾರ ಹೆಚ್ಚಾಗಿದೆ ಎಂದು ಅವರು ಆರೋಪಿಸಿದರು.

ಕಳ್ಳತನ ಆರೋಪದ ವರದಿಗಳು ಸಾರ್ವಜನಿಕ ವಿಶ್ವಾಸದ ಮೇಲೆ ಪರಿಣಾಮ ಬೀರಿವೆ ಎಂದು ಅವರು ಹೇಳಿಕೊಂಡರು, ದೇವಾಲಯಕ್ಕೆ ದೈನಂದಿನ ದೇಣಿಗೆ ರೂ. 10 ಲಕ್ಷದಿಂದ ರೂ. 15 ಲಕ್ಷದವರೆಗೆ ಇದ್ದದ್ದು ಸುಮಾರು ರೂ. 80,000 ಕ್ಕೆ ಇಳಿದಿದೆ ಎಂದು ವರದಿಯಾಗಿದೆ. ರಾಮ ಮಂದಿರವನ್ನು ನಿರ್ವಹಿಸುವ ಟ್ರಸ್ಟ್ ಜನರ ವಿಶ್ವಾಸವನ್ನು ಕಳೆದುಕೊಂಡಿದೆ ಮತ್ತು ಅದನ್ನು ವಿಸರ್ಜಿಸಬೇಕು, ಎಂದು ಅವರು ಹೇಳಿದರು.

ವಿರೋಧ ಪಕ್ಷದ ನಾಯಕರನ್ನು ಒಳಗೊಂಡ ತನಿಖೆಗಳೊಂದಿಗೆ ಹೋಲಿಸಿದ ಸಿಂಗ್, ಸಿಬಿಐ ಮತ್ತು ಜಾರಿ ನಿರ್ದೇಶನಾಲಯದಂತಹ ಕೇಂದ್ರ ಸಂಸ್ಥೆಗಳು ರಾಜಕೀಯ ವಿರೋಧಿಗಳ ವಿರುದ್ಧ ಸಣ್ಣಪುಟ್ಟ ಅನುಮಾನಗಳಿದ್ದರೂ ಸಹ ತ್ವರಿತವಾಗಿ ಕಾರ್ಯನಿರ್ವಹಿಸುತ್ತವೆ ಎಂದು ಆರೋಪಿಸಿದರು.

ಆದರೆ ರಾಮ ಮಂದಿರ ದಾನ ಪ್ರಕರಣಕ್ಕೆ ಸಂಬಂಧಿಸಿದವರ ವಿರುದ್ಧ ಪ್ರಾಥಮಿಕ ಪ್ರಕರಣವೆಂದು ಅವರು ವಿವರಿಸಿದ್ದರೂ ಅವರನ್ನು ಬಂಧಿಸಲಾಗಿಲ್ಲ.

# ದೇಣಿಗೆ ಹಗರಣದ ಬೆನ್ನಲ್ಲೇ ಟ್ರಸ್ಟ್ ವಿಸರ್ಜನೆಗೆ ಸಿದ್ಧತೆ ತಿರುಪತಿ ಅಥವಾ ವೈಷ್ಣೋದೇವಿ ದೇವಸ್ಥಾನ ಮಾದರಿ ಆಡಳಿತ?

**ಲಖನೌ,ಜೂ.27:** ರಾಮ ಮಂದಿರದಲ್ಲಿ ದೇಣಿಗೆ ಮತ್ತು ಕಾಣಿಕೆಗಳ ಕಳ್ಳತನವಾದ ನಂತರ ಶ್ರೀರಾಮಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಆಡಳಿತ ರಚನೆಯಲ್ಲಿ ಪ್ರಮುಖ ಬದಲಾವಣೆಗಳ ಕುರಿತು ಚರ್ಚೆಗಳು ತೀವ್ರಗೊಂಡಿವೆ.

ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ಮತ್ತು ಟ್ರಸ್ಟಿ ಡಾ.ಅನಿಲ್ ಮಿಶ್ರಾ ಅವರ ರಾಜೀನಾಮೆ ಈ ಚರ್ಚೆಯನ್ನು ಮತ್ತಷ್ಟು ಹೆಚ್ಚಿಸಿವೆ. ಈಗಾಗಲೇ ಖಾಲಿ ಇರುವ ಒಂದು ಟ್ರಸ್ಟಿ ಸ್ಥಾನದೊಂದಿಗೆ ಈ ರಾಜೀನಾಮೆಗಳು ಮೂರು ಪ್ರಮುಖ ಹುದ್ದೆಗಳನ್ನು ಖಾಲಿ ಬಿಡುತ್ತವೆ. ಇಂತಹ ಪರಿಸ್ಥಿತಿಯಲ್ಲಿ, ಪ್ರಸ್ತುತ ಟ್ರಸ್ಟ್ ವಿಸರ್ಜಿಸಿ ಪುನರ್‌ರಚಿಸಬಹುದು ಎನ್ನಲಾಗುತ್ತಿದೆ.

ಫೆಬ್ರವರಿ 2020ರಲ್ಲಿ ಸುಪ್ರೀಂ ಕೋರ್ಟ್ ತೀರ್ಪಿನ ಅನುಸಾರವಾಗಿ ಕೇಂದ್ರ ಸರ್ಕಾರವು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ರಚಿಸಿತು. ಮಹಾಂತ ನೃತ್ಯಗೋಪಾಲ ದಾಸ್ ಟ್ರಸ್ಟ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರೆ, ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ದಿನನಿತ್ಯದ ಆಡಳಿತಾತ್ಮಕ ಕಾರ್ಯಾಚರಣೆಗಳು ಮತ್ತು ಪ್ರಮುಖ ನಿರ್ಧಾರಗಳನ್ನು ನಿರ್ವಹಿಸುತ್ತಾರೆ. ಟ್ರಸ್ಟಿ ಡಾ. ಅನಿಲ್ ಮಿಶ್ರಾ ಕೂಡ ಪ್ರಮುಖ ನಿರ್ಧಾರಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಎರಡೂ ಹುದ್ದೆಗಳು ಖಾಲಿ ಇರುವುದರಿಂದ, ಟ್ರಸ್ಟ್‌ನ ಕಾರ್ಯಾಚರಣೆಗಳ ಪ್ರಸ್ತುತ ಸಮತೋಲನದ ಮೇಲೆ ಪರಿಣಾಮ ಬೀರುವ ನಿರೀಕ್ಷೆಯಿದೆ.

ರಾಮ ಮಂದಿರದ ಕಾರ್ಯಗಳು, ದಿನನಿತ್ಯದ ಕೋಟ್ಯಂತರ ರೂಪಾಯಿಗಳ ದೇಣಿಗೆ, ಸಾವಿರಾರು ಭಕ್ತರ ನಿರ್ವಹಣೆ, ಭದ್ರತಾ ವ್ಯವಸ್ಥೆ, ನಿರ್ಮಾಣ ಕಾರ್ಯ, ಸಂಗ್ರಹಣೆ, ಲೆಕ್ಕಪತ್ರ ನಿರ್ವಹಣೆ ಮತ್ತು ಮಾನವ ಸಂಪನ್ಮೂಲಗಳು ಅತ್ಯಂತ ವಿಸ್ತಾರವಾಗಿವೆ. ಹೀಗಾಗೀ ಹೊಣೆಗಾರಿಕೆ, ಪಾರದರ್ಶಕತೆ ಮತ್ತು ಆರ್ಥಿಕ ಮೇಲ್ವಿಚಾರಣೆಯನ್ನು ಮತ್ತಷ್ಟು ಬಲಪಡಿಸಲು ಆಡಳಿತ ರಚನೆಯಲ್ಲಿ ಬದಲಾವಣೆಗಳ ಅಗತ್ಯ ಹೆಚ್ಚುತ್ತಿದೆ. ಮೂಲಗಳ ಪ್ರಕಾರ ಟ್ರಸ್ಟ್‌ನ ಪುನರ್‌ರಚನೆಯು ತಿರುಪತಿ ಮತ್ತು ವೈಷ್ಣೋ ದೇವಿ ದೇವಾಲಯ ಮಂಡಳಿಗಳಂತೆಯೇ ಹೆಚ್ಚು ವೃತ್ತಿಪರ ಆಡಳಿತ ವ್ಯವಸ್ಥೆಗೆ ಕಾರಣವಾಗಬಹುದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕ ಮಾಡಬಹುದು ಎನ್ನಲಾಗುತ್ತಿದೆ.

ಜೀವಾವಧಿ ಶಿಕ್ಷೆಯ ಸೆಕ್ಷನ್ ಬಳಸಿದ ಪೊಲೀಸರು

ರಾಮಮಂದಿರ ದೇಣಿಗೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಮಂದಿಯ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಪೊಲೀಸರು ವಶಕ್ಕೆ ಪಡೆದು ನ್ಯಾಯಂಗ ಬಂಧನಕ್ಕೆ ಒಪ್ಪಿಸಿದೆ. ಸೋಮವಾರದವರೆಗೂ ನ್ಯಾಯಂಗ ಬಂಧನಕ್ಕೆ ಕೋರ್ಟ್ ಆದೇಶಿಸಿದ್ದು ಇದು ಮುಂದುವರಿಸುವ ಸಾಧ್ಯತೆ ಇದೆ. ಈ ನಡುವೆ ಎಂಟು ಆರೋಪಿಗಳ ವಿರುದ್ಧ ಬಿಎನ್‌ಎಸ್ ನ ಆರು ಸೆಕ್ಷನ್ ಗಳಲ್ಲಿ ಪ್ರಕರಣ ದಾಖಲಿಸಿದ್ದ ಜೀವಾವಧಿ ಶಿಕ್ಷೆಗೆ ಗುರಿಪಡಿಸುವ ಸೆಕ್ಷನ್ ಬಳಸಿದೆ.

ಬಿಎನ್‌ಎಸ್ 305 ಪೂಜಾಸ್ಥಳದಲ್ಲಿ ಕಳ್ಳತನ 7 ವರ್ಷಗಳವರೆಗೆ ಜೈಲುಶಿಕ್ಷೆ, ಬಿಎನ್‌ಎಸ್ 306 ಉದ್ಯೋಗಿ/ಸೇವಕನಿಂದ ಕಳ್ಳತನ 7 ವರ್ಷಗಳವರೆಗೆ ಜೈಲು ಶಿಕ್ಷೆ, ಬಿಎನ್‌ಎಸ್ 316(5) ಕ್ರಿಮಿನಲ್ ನಂಬಿಕೆ ದ್ರೋಹ ಜೀವಾವಧಿ ಶಿಕ್ಷೆ ಅಥವಾ 10 ವರ್ಷ ಜೈಲುಶಿಕ್ಷೆ, ಬಿಎನ್‌ಎಸ್ 317 ಪುನರಾವರ್ತಿತ ಕಳ್ಳತನ ಜೀವಾವಧಿ ಶಿಕ್ಷೆ ಅಥವಾ 10 ವರ್ಷ ಜೈಲು ಶಿಕ್ಷೆ, ಬಿಎನ್‌ಎಸ್ 61 ಕ್ರಿಮಿನಲ್ ಪಿತೂರಿ 7 ವರ್ಷಗಳವರೆಗೆ ಜೈಲುಶಿಕ್ಷೆ, ಬಿಎನ್‌ಎಸ್ 3(5) ಸಾಮೂಹಿಕವಾಗಿ ಅಪರಾಧ ಮಾಡುವುದು, ಎಲ್ಲರಿಗೂ ಒಂದೇ ಶಿಕ್ಷೆಯಡಿ ಪ್ರಕರಣ ದಾಖಲಾಗಿದೆ.



### ಮಾತಾ ವೈಷ್ಣೋದೇವಿ ದೇವಸ್ಥಾನ ಆಡಳಿತ

- ದೇವಸ್ಥಾನವನ್ನು ಶ್ರೀಮಾತಾ ವೈಷ್ಣೋದೇವಿ ಕ್ಷೇತ್ರದ ಮಂಡಳಿ ನಿರ್ವಹಿಸುತ್ತದೆ
- ಈ ಮಂಡಳಿಯನ್ನು 1986ರಲ್ಲಿ ವಿಶೇಷ ಕಾನೂನಿನ ಮೂಲಕ ರಚಿಸಲಾಯಿತು
- ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮಂಡಳಿಯ ಪದನಿಮಿತ್ತ ಅಧ್ಯಕ್ಷರಾಗಿರುತ್ತಾರೆ
- ಮಂಡಳಿಯಲ್ಲಿ ವಿವಿಧ ಕ್ಷೇತ್ರಗಳ ಪರಿಣಿತರನ್ನು ಸದಸ್ಯರಾಗಿ ನೇಮಿಸಲಾಗುತ್ತದೆ
- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (CEO) ಮತ್ತು ಇತರ ಅಧಿಕಾರಿಗಳು ದಿನನಿತ್ಯದ ಆಡಳಿತ ನೋಡಿಕೊಳ್ಳುತ್ತಾರೆ
- ಯಾತ್ರಿಕರ ಸುರಕ್ಷತೆ, ವಸತಿ, ಆರೋಗ್ಯ, ಮೂಲಸೌಕರ್ಯ ಮತ್ತು ದೇವಸ್ಥಾನದ ಹಣಕಾಸಿನ ನಿರ್ವಹಣೆಯನ್ನು ಮಂಡಳಿ ವಹಿಸುತ್ತದೆ

### ತಿರುಪತಿ ದೇವಸ್ಥಾನ ಆಡಳಿತ

- ದೇವಸ್ಥಾನದ ಆಡಳಿತವನ್ನು ತಿರುಮಲ–ತಿರುಪತಿ ದೇವಸ್ಥಾನಂ (ಟಿಟಿಡಿ) ನಿರ್ವಹಿಸುತ್ತದೆ
- ಟಿಟಿಡಿ ಅನ್ನು ಆಂಧ್ರ ಪ್ರದೇಶ ಸರ್ಕಾರ ನೇಮಿಸುವ ಟ್ರಸ್ಟ್ ಮಂಡಳಿ ನಡೆಸುತ್ತದೆ
- ಮಂಡಳಿಯಲ್ಲಿ ಅಧ್ಯಕ್ಷರು ಹಾಗೂ ಸರ್ಕಾರ ನೇಮಿಸುವ ಸದಸ್ಯರು ಇರುತ್ತಾರೆ
- ದಿನನಿತ್ಯದ ಆಡಳಿತವನ್ನು IAS ಅಧಿಕಾರಿ ಕಾರ್ಯನಿರ್ವಾಹಣಾಧಿಕಾರಿ ನೋಡಿಕೊಳ್ಳುತ್ತಾರೆ
- ದೇವಸ್ಥಾನದ ಆದಾಯ, ದೇಣಿಗೆ, ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಅನ್ನದಾನ, ಗೋಶಾಲೆಗಳು ಮತ್ತು ಇತರೆ ಧಾರ್ಮಿಕ ಸೇವೆಗಳನ್ನೂ, TTD ನಿರ್ವಹಿಸುತ್ತದೆ

# ಮುಂಬಯಿ ಸಿದ್ಧಿವಿನಾಯಕ ದೇವಸ್ಥಾನಕ್ಕೆ ಕರ್ನಾಟಕ ಮುಖ್ಯಮಂತ್ರಿ ಡಿಕೆಶಿ ಭೇಟಿ



**ಮುಂಬಯಿ,ಜೂ.27:** ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜೂ. 20 ರಂದು ಮುಂಬಯಿ ಪ್ರಭಾದೇವಿಯಲ್ಲಿರುವ ಪ್ರಸಿದ್ಧ ಶ್ರೀ ಸಿದ್ಧಿವಿನಾಯಕ ಗಣಪತಿ ದೇವಸ್ಥಾನಕ್ಕೆ ಭೇಟಿ ನೀಡಿ, ಶ್ರೀ ಗಣೇಶನ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ತಮ್ಮ ಅಧಿಕೃತ ಮುಂಬೈ ಪ್ರವಾಸದ ಅಂಗವಾಗಿ ದೇವಸ್ಥಾನಕ್ಕೆ ಆಗಮಿಸಿದ ಅವರು ರಾಜ್ಯದ ಸುಭಿಕ್ಷತೆ, ಜನರ ಒಳಿತಿಗಾಗಿ ಹಾಗೂ ದೇಶದ ಶಾಂತಿ–ಸಮೃದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು.

ಮುಖ್ಯಮಂತ್ರಿಗಳ ದೇವಸ್ಥಾನ ಭೇಟಿಯ ಸಂದರ್ಭದಲ್ಲಿ ಜಯಶ್ರೀಕೃಷ್ಣ ಪರಿಸರ ಪ್ರೇಮಿ ಸಮಿತಿ (ಎನ್‌ಜಿಬಿ) ಸಂಸ್ಥಾಪಕ ತೋನ್ಸೆ ಜಯಕೃಷ್ಣ ಎ. ಶೆಟ್ಟಿ ಹಾಗೂ ಚಿಣ್ಣರ ಬಿಂಬದ ಅಧ್ಯಕ್ಷರಾದ ಪ್ರಕಾಶ್ ಭಂಡಾರಿ ಅವರು ಉಪಸ್ಥಿತರಿದ್ದರು ಮುಂಬೈನ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ಶ್ರೀ ಸಿದ್ಧಿವಿನಾಯಕ ದೇವಸ್ಥಾನಕ್ಕೆ ದೇಶದ ವಿವಿಧ ಭಾಗಗಳಿಂದ ರಾಜಕೀಯ ನಾಯಕರು, ಗಣ್ಯರು ಹಾಗೂ ಸಾವಿರಾರು ಭಕ್ತರು ಆಗಮಿಸಿ ಶ್ರೀ ಗಣೇಶನ ದರ್ಶನ ಪಡೆಯುವುದು ವಿಶೇಷವಾಗಿದೆ.

# ಉಪಚುನಾವಣೆ ಅಖಾಡಕ್ಕಿಳಿದ ಎಂ.ಕೆ.ಸ್ಟಾಲಿನ್, ಪ್ರಶಾಂತ್ ಕಿಶೋರ್



**ನವದೆಹಲಿ, ಜೂ.27:** ದೇಶದ ರಾಜಕೀಯ ವಲಯದಲ್ಲಿ ಮುಂಬರುವ ಎರಡು ಪ್ರಮುಖ ಉಪಚುನಾವಣೆಗಳು ತೀವ್ರ ಕುತೂಹಲ ಕೆರಳಿಸಿವೆ. ಬಿಹಾರದ ಬಾಂಕೀಪುರ ವಿಧಾನಸಭಾ ಕ್ಷೇತ್ರ ಹಾಗೂ ದಕ್ಷಿಣದ ತಮಿಳುನಾಡಿನ ತಿರುಚ್ಚಿ ಪೂರ್ವ ಕ್ಷೇತ್ರಗಳಲ್ಲಿ ನಡೆಯಲಿರುವ ಉಪಚುನಾವಣೆಗಳು ಹೊಸ ರಾಜಕೀಯ ಲೆಕ್ಕಾಚಾರಗಳಿಗೆ ಸಾಕ್ಷಿಯಾಗುತ್ತಿವೆ. ಈ ಎರಡೂ ಕ್ಷೇತ್ರಗಳ ಕಣದಲ್ಲಿ ಘಟಾನುಘಟಿ ನಾಯಕರು ಮುಖಾಮುಖಿಯಾಗುತ್ತಿದ್ದು, ಸಾರ್ವಜನಿಕರು ಹಾಗೂ ರಾಜಕೀಯ ವಿಶ್ಲೇಷಕರ ಗಮನ ರಾಷ್ಟ್ರಮಟ್ಟದಲ್ಲಿ ಈ ಕಡೆ ನೆಟ್ಟಿದೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರ ಸ್ವಕ್ಷೇತ್ರ ಬಿಹಾರದ ಬಂಕೀಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಜನ ಸುರಾಜ್ ಪಕ್ಷದ ಸಂಸ್ಥಾಪಕ ಹಾಗೂ ಚುನಾವಣಾ ತಂತ್ರಗಾರ ಪ್ರಶಾಂತ್ ಕಿಶೋರ್ ಸ್ಪರ್ಧಿಸುವುದು ಖಚಿತವಾಗಿದೆ. ಸುದೀರ್ಘ ಕಾಲ ತೆರೆಯ ಹಿಂದಿನ ರಾಜಕೀಯ ತಂತ್ರಗಾರಿಕೆ ರೂಪಿಸುತ್ತಿದ್ದ ಅವರು, ಈಗ ಅಧಿಕೃತವಾಗಿ ಚುನಾವಣಾ ಅಖಾಡಕ್ಕೆ ಧುಮುಕಿದ್ದಾರೆ. ಇದು ಬಿಹಾರದ ಸಾಂಪ್ರದಾಯಿಕ ರಾಜಕಾರಣದಲ್ಲಿ ಬಹುದೊಡ್ಡ ಸಂಚಲನ ಮೂಡಿಸಿದ್ದು, ಜನ ಸುರಾಜ್ ಪಕ್ಷದ ನೆಲೆ ವಿಸ್ತರಣೆಯ ದೃಷ್ಟಿಯಿಂದ ಈ ಚುನಾವಣೆ ಅತ್ಯಂತ ನಿರ್ಣಾಯಕವಾಗಿದೆ.

ಇತ್ತ ದಕ್ಷಿಣ ಭಾರತದ ತಮಿಳುನಾಡಿನಲ್ಲಿಯೂ ಉಪಚುನಾವಣೆಯ ಕಾವು ರಂಗೇರಿದೆ. ಇತ್ತೀಚೆಗಷ್ಟೇ ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿರುವ ಜನಪ್ರಿಯ ನಾಯಕ ಜೋಸೆಫ್ ವಿಜಯ್ ಅವರು ತಿರುಚ್ಚಿ ಪೂರ್ವ ವಿಧಾನಸಭಾ ಕ್ಷೇತ್ರವನ್ನು ತೆರವುಗೊಳಿಸಿದ್ದಾರೆ. ಎರಡು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದ ಕಾರಣ, ಸಾಂವಿಧಾನಿಕ ನಿಯಮಗಳ ಅನ್ವಯ ಅವರು ಈ ನಿರ್ಧಾರ ಕೈಗೊಂಡಿದ್ದು, ಇದೀಗ ಆ ಕ್ಷೇತ್ರಕ್ಕೆ ಅನಿವಾರ್ಯವಾಗಿ ಉಪಚುನಾವಣೆ ಎದುರಾಗಿದೆ.

ಮುಖ್ಯಮಂತ್ರಿ ವಿಜಯ್ ಅವರು ಖಾಲಿ ಮಾಡಿರುವ ಈ ಪ್ರತಿಷ್ಠಿತ ತಿರುಚ್ಚಿ ಪೂರ್ವ ಕ್ಷೇತ್ರದಿಂದ ಹಿರಿಯ ನಾಯಕ ಎಂ.ಕೆ. ಸ್ಟಾಲಿನ್ ಅವರು ತೀವ್ರ ಪೈಪೋಟಿಗೆ ಇಳಿಯುವ ಸಂಭವ ದಟ್ಟವಾಗಿದೆ. ಆಡಳಿತಾರೂಢ ವಿಜಯ್ ಅವರ ಪ್ರಾಬಲ್ಯವನ್ನು ಅವರದೇ ಭದ್ರಕೋಟೆಯಲ್ಲಿ ಕುಗ್ಗಿಸಲು ಮತ್ತು ತಮ್ಮ ಪಕ್ಷದ ವರ್ಚಸ್ಸನ್ನು ಮರಳಿ ಸ್ಥಾಪಿಸಲು ಸ್ಟಾಲಿನ್ ಅವರು ಈ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಈ ದಿಢೀರ್ ಬೆಳವಣಿಗೆಯು ತಮಿಳುನಾಡು ರಾಜಕೀಯದಲ್ಲಿ ಹೈವೋಲ್ಟೇಜ್ ಕದನಕ್ಕೆ ಮುನ್ನುಡಿ ಬರೆದಿದೆ.

ಉತ್ತರ ಭಾರತದ ಬಿಹಾರದಲ್ಲಿ ಪ್ರಶಾಂತ್ ಕಿಶೋರ್ ಅವರ ನೇರ ರಾಜಕೀಯ ಪ್ರವೇಶವು ಹೊಸ ಮನ್ವಂತರದ ನಿರೀಕ್ಷೆ ಹುಟ್ಟುಹಾಕಿದ್ದರೆ, ತಮಿಳುನಾಡಿನಲ್ಲಿ ಮುಖ್ಯಮಂತ್ರಿ ವಿಜಯ್ ತೆರವುಗೊಳಿಸಿದ ಸ್ಥಾನಕ್ಕೆ ಸ್ಟಾಲಿನ್ ಅವರ ಸ್ಪರ್ಧೆಯ ಸಾಧ್ಯತೆಗಳು ಚುನಾವಣಾ ಕಣದ ಕಾವು ಹೆಚ್ಚಿಸಿವೆ. ಮುಂಬರುವ ದಿನಗಳಲ್ಲಿ ನಡೆಯಲಿರುವ ಈ ಎರಡು ಪ್ರಮುಖ ಉಪಚುನಾವಣೆಗಳ ಫಲಿತಾಂಶವು ಆಯಾ ರಾಜ್ಯಗಳ ಭವಿಷ್ಯದ ರಾಜಕೀಯ ದಿಕ್ಕನ್ನು ನಿರ್ಧರಿಸುವ ದಿಕ್ಸೂಚಿಯಾಗಲಿವೆ ಎಂದು ವಿಶ್ಲೇಷಿಸಲಾಗುತ್ತಿದೆ.

## ನ್ಯಾಯಮೂರ್ತಿಗಳ ವಿರುದ್ಧ ಪೂರ್ವಗ್ರಹ ಪೀಡಿತ, ಪಕ್ಷಪಾತ ಆಕ್ಷೇಪ ಎತ್ತಿ ಪ್ರಮಾಣಪತ್ರ ಸಲ್ಲಿಸಿದ್ದ ಕೇಜ್ರಿವಾಲ್

# ನ್ಯಾ.ಸ್ವರ್ಣಕಾಂತ ಪೀಠದಲ್ಲಿದ್ದ ಶಾಸಕರು, ಸಂಸದರ ಕೇಸ್ ವಾಪಸ್




**ನವದೆಹಲಿ,27:** ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರೀವಾಲ್ ಅವರ ಪ್ರಕರಣದ ವಿಚಾರಣೆ ವೇಳೆ ತೀವ್ರ ರಾಜಕೀಯ ವಿವಾದದ ಕೊಂಡಿಯಾಗಿದ್ದ ದೆಹಲಿ ಹೈಕೋರ್ಟ್‌ನ ಪ್ರಮುಖ ನ್ಯಾಯಮೂರ್ತಿ ಸ್ವರ್ಣಕಾಂತ ಶರ್ಮಾ ಅವರ ನ್ಯಾಯಪೀಠದಲ್ಲಿದ್ದ ಸಂಸದರು ಮತ್ತು ಶಾಸಕರಿಗೆ ಸಂಬಂಧಿಸಿದ ಕ್ರಿಮಿನಲ್ ಮೊಕದ್ದಮೆಗಳ ವಿಚಾರಣೆಯನ್ನು ವಾಪಸ್ ಪಡೆಯಲಾಗಿದೆ.

ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳು ಪ್ರಕಟಿಸಿರುವ ವಾರ್ಷಿಕ ರೋಸ್ಟರ್ (ಪ್ರಕರಣಗಳ ಹಂಚಿಕೆ ಪಟ್ಟಿ) ಬದಲಾವಣೆಯ ಭಾಗವಾಗಿ ಈ ನಿರ್ಧಾರ ಹೊರಬಿದ್ದಿದೆ. ಜುಲೈ 1ರಿಂದಲೇ ಈ ಬದಲಾವಣೆ ಜಾರಿಗೆ ಬರಲಿದೆ. ಸುಮಾರು ಮೂರು ವರ್ಷಗಳಿಂದ ಈ ರಾಜಕೀಯ ಸೂಕ್ಷ್ಮ ಪ್ರಕರಣಗಳ ವಿಚಾರಣೆಯನ್ನು ನಡೆಸುತ್ತಿದ್ದ ನ್ಯಾಯಮೂರ್ತಿ ಸ್ವರ್ಣಕಾಂತ ಶರ್ಮಾ ಅವರ ಬದಲಿಗೆ, ಇನ್ನು ಮುಂದೆ ನ್ಯಾಯಮೂರ್ತಿ ಮನೋಜ್ ಜೈನ್ ಅವರು ಹಾಲಿ ಮತ್ತು ಮಾಜಿ ಜನಪ್ರತಿನಿಧಿಗಳ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ ನಡೆಸಲಿದ್ದಾರೆ. ರೋಸ್ಟರ್ ಬದಲಾವಣೆಯ ಅನ್ವಯ, ನ್ಯಾಯಮೂರ್ತಿ ಸ್ವರ್ಣಕಾಂತ ಶರ್ಮಾ ಅವರಿಗೆ ಸಿವಿಲ್ ವಿಭಾಗದ ಪ್ರಮುಖ ಜವಾಬ್ದಾರಿಗಳನ್ನು ವಹಿಸಲಾಗಿದೆ. ಇನ್ನು ಮುಂದೆ ಉದ್ಯೋಗದ ಸ್ಥಳಗಳಲ್ಲಿ ಲೈಂಗಿಕ ಕಿರುಕುಳ, ಮಾಹಿತಿ ಹಕ್ಕು ಕಾಯ್ದೆ ವ್ಯಾಜ್ಯಗಳು, ದೆಹಲಿ ಸಾರಿಗೆ ಸಂಸ್ಥೆ, ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ, ದೆಹಲಿ ನಗರ ಕಲಾ ಆಯೋಗ ಹಾಗೂ ಗಣಿ ಇಲಾಖೆಗೆ ಸಂಬಂಧಿಸಿದ ಶಾಸನಬದ್ಧ ಪ್ರಾಧಿಕಾರಗಳ ವಿವಾದಗಳ ಸಿವಿಲ್ ರಿಟ್ ಅರ್ಜಿಗಳ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಿದ್ದಾರೆ.

ನ್ಯಾಯಮೂರ್ತಿ ಸ್ವರ್ಣಕಾಂತ ಶರ್ಮಾ ಇತ್ತೀಚೆಗೆ ತೀವ್ರ ವಿವಾದದ ಧೂಳೆಬ್ಬಿಸಿದ್ದವರು. ದೆಹಲಿ ಅಬಕಾರಿ ನೀತಿ ಹಗರಣದಲ್ಲಿ ಅರವಿಂದ್ ಕೇಜ್ರಿವಾಲ್ ಮತ್ತು ಇತರ ಆಪ್ ನಾಯಕರನ್ನು ವಿಚಾರಣಾ ನ್ಯಾಯಾಲಯವು ಖುಲಾಸೆಗೊಳಿಸಿದ್ದನ್ನು ಪ್ರಶ್ನಿಸಿ ಸಿಬಿಐ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಜಡ್ಜ್ ಸ್ವರ್ಣಕಾಂತ ಶರ್ಮಾ ನಡೆಸುತ್ತಿದ್ದರು. ಈ ವೇಳೆ ಕೇಜ್ರಿವಾಲ್ ಅವರು ನ್ಯಾಯಮೂರ್ತಿಗಳ ವಿರುದ್ಧ ಪೂರ್ವಾಗ್ರಹ ಪೀಡಿತ ಹಾಗೂ ಪಕ್ಷಪಾತದ ಆಕ್ಷೇಪವೆತ್ತಿ, ಅವರು ಈ ಕೇಸಿನಿಂದ ಹಿಂದೆ ಸರಿಯಬೇಕು ಎಂದು ಅಫಿಡವಿಟ್ ಸಲ್ಲಿಸಿದ್ದರು. ಕೇಜ್ರಿವಾಲ್ ಅವರು ನ್ಯಾಯಮೂರ್ತಿ ಸ್ವರ್ಣಕಾಂತ ಅವರ ವಿರುದ್ಧ ನ್ಯಾಯಾಲಯದಲ್ಲೇ ನೇರವಾದ ಆರೋಪಗಳನ್ನು ಮುಂದಿಟ್ಟಿದ್ದರು. ನ್ಯಾಯಮೂರ್ತಿಗಳ ಮಗ ಮತ್ತು ಮಗಳು ಇಬ್ಬರೂ ಕೇಂದ್ರ ಸರ್ಕಾರದ ಪ್ಯಾನಲ್ ವಕೀಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಹೀಗಾಗಿ ಹಿತಾಸಕ್ತಿ ಸಂಘರ್ಷ ಏರ್ಪಡುತ್ತದೆ ಎಂದು ಕೇಜ್ರಿವಾಲ್ ವಾದಿಸಿದ್ದರು.

ಅಷ್ಟು ಮಾತ್ರವಲ್ಲದೆ ನ್ಯಾಯಮೂರ್ತಿ ಸ್ವರ್ಣಕಾಂತ ಶರ್ಮಾ ಅವರು ಆರ್‌ಎಸ್‌ಎಸ್ನ ಕಾನೂನು ವಿಭಾಗ ಆಯೋಜಿಸಿದ್ದ ನಾಲ್ಕು ಪ್ರತ್ಯೇಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಆರ್‌ಎಸ್‌ಎಸ್ ಸಿದ್ಧಾಂತವನ್ನು ತಾವೂ ಮತ್ತು ತಮ್ಮ ಪಕ್ಷದವರು ತೀವ್ರವಾಗಿ ವಿರೋಧಿಸುವುದರಿಂದ, ಈ ಪೀಠದಿಂದ ತಮಗೆ ನ್ಯಾಯ ಸಿಗುವುದಿಲ್ಲ ಎಂಬ ಆತಂಕವಿದೆ ಎಂದು ಕೇಜ್ರಿವಾಲ್ ಕೋರ್ಟ್‌ಗೆ ತಿಳಿಸಿದ್ದರು.

ಈ ಅರ್ಜಿಯನ್ನು ತಿರಸ್ಕರಿಸಿದ್ದ ನ್ಯಾಯಮೂರ್ತಿಗಳು, ಆಪ್ ನಾಯಕರ ನಡೆ ನ್ಯಾಯಾಂಗದ ಘನತೆಗೆ ಧಕ್ಕೆ ತರುವಂತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದರಲ್ಲದೆ, ಅವರ ವಿರುದ್ಧ ಸ್ವಯಂಪ್ರೇರಿತ ನ್ಯಾಯಾಂಗ ನಿಂದನೆ ಪ್ರಕ್ರಿಯೆಯನ್ನೂ ಆರಂಭಿಸಿದ್ದರು. ತದನಂತರ ಈ ಹಗರಣದ ಮುಖ್ಯ ಪ್ರಕರಣವನ್ನು ನ್ಯಾಯಮೂರ್ತಿ ಮನೋಜ್ ಜೈನ್ ಅವರ ಪೀಠಕ್ಕೆ ವರ್ಗಾಯಿಸಲಾಗಿತ್ತು. ರಾಜಕೀಯ ನಾಯಕರು ಮತ್ತು ನ್ಯಾಯಾಂಗದ ನಡುವಿನ ಈ ನೇರ ಸಂಘರ್ಷವು ಭಾರತೀಯ ಕಾನೂನು ವಲಯದಲ್ಲಿ ನ್ಯಾಯಾಂಗದ ಸ್ವಾತಂತ್ರ್ಯ ಮತ್ತು ರಾಜಕೀಯ ಪ್ರಭಾವದ ಕುರಿತು ದೊಡ್ಡ ಮಟ್ಟದ ಚರ್ಚೆಯನ್ನು ಹುಟ್ಟುಹಾಕಿತ್ತು.



ಕೇರಳದ ವಯನಾಡ್ ಜಿಲ್ಲೆಯ ಕಲ್ಪೆಟ್ಟಾದ ವೆಂಗಪ್ಪಳ್ಳಿಯ ಓಡಮೂಟ್ಟಿಲ್‌ನಲ್ಲಿ ಶನಿವಾರ ನಡೆದ ಸ್ಮಾರ್ಟ್ ಅಂಗನವಾಡಿಯನ್ನು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಸಂಸದೆ ಪ್ರಿಯಾಂಕಾ ಗಾಂಧಿ ಉದ್ಘಾಟಿಸಿದರು.

# ಪ.ಬಂಗಾಳ: ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗೆ ಶೇ.62 ಅನುದಾನ ಕಡಿತ!

**ಕೋಲ್ಕತ್ತಾ, ಜೂ.27:** ಪಶ್ಚಿಮ ಬಂಗಾಳದಲ್ಲಿ ಸುವೇಂದು ಅಧಿಕಾರಿ ನೇತೃತ್ವದ ನೂತನ ಬಿಜೆಪಿ ಸರ್ಕಾರ ತನ್ನ ಮೊದಲ ಪೂರ್ಣ ಬಜೆಟ್‌ನಲ್ಲಿ ಅಲ್ಪಸಂಖ್ಯಾತ ವ್ಯವಹಾರಗಳು ಮತ್ತು ಮದರಸಾ ಶಿಕ್ಷಣ (ಎಂಎಎಂಇ) ಇಲಾಖೆಯ ಅನುದಾನವನ್ನು ಬರೋಬ್ಬರಿ 62% ಕಡಿತಗೊಳಿಸುವ ಮೂಲಕ ಭಾರೀ ಚರ್ಚೆಗೆ ನಾಂದಿ ಹಾಡಿದೆ.

ಫೆಬ್ರವರಿಯಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಸರ್ಕಾರ ಮಂಡಿಸಿದ್ದ ಮಧ್ಯಂತರ ಬಜೆಟ್‌ನಲ್ಲಿ ಈ ಇಲಾಖೆಗೆ 5,713.61 ಕೋಟಿ ರೂಪಾಯಿ ಮೀಸಲಿಡಲಾಗಿತ್ತು. ಆದರೆ, ಈಗಿನ ಸರ್ಕಾರ ಅದನ್ನು 2,175.43 ಕೋಟಿ ರೂಪಾಯಿಗೆ ಇಳಿಸಿದೆ. ಮುಖ್ಯವಾಗಿ ಐಕ್ಯಶ್ರೀ ವಿದ್ಯಾರ್ಥಿವೇತನದಡಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗಾಗಿ ನೀಡಲಾಗುತ್ತಿದ್ದ ಈ ಯೋಜನೆಯ ಅನುದಾನವನ್ನು 50%ಕ್ಕಿಂತ ಹೆಚ್ಚು ಕಡಿತಗೊಳಿಸಲಾಗಿದೆ. ಕಳೆದ ವರ್ಷ 741 ಕೋಟಿ ರೂ. ಇದ್ದ ಅನುದಾನ ಈಗ 250 ಕೋಟಿ ರೂ.ಗೆ ಕುಸಿದಿದೆ. ಮತ್ತೊಂದೆಡೆ ಸಬೂಜ್ ಸಾಥಿ ಯೋಜನೆಯಡಿ ಮದರಸಾ ವಿದ್ಯಾರ್ಥಿಗಳೂ ಸೇರಿದಂತೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸೈಕಲ್ ವಿತರಿಸುವ ಈ ಯೋಜನೆಯ ನಿಧಿಯನ್ನು 100 ಕೋಟಿ ರೂ.ನಿಂದ ಕೇವಲ 15.5 ಕೋಟಿ ರೂ.ಗೆ ತಗ್ಗಿಸಲಾಗಿದೆ. ಜತೆಗೆ ನಿರ್ಗತಿಕ ಅಲ್ಪಸಂಖ್ಯಾತ ಮಹಿಳೆಯರ ವಸತಿ ಯೋಜನೆಗೆ ಈ ಬಾರಿ ಯಾವುದೇ ಅನುದಾನ ನೀಡಿಲ್ಲ. ಹಾಗೆಯೇ ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳಿಗಾಗಿ ಮೀಸಲಿದ್ದ ಮೊತ್ತವನ್ನು 103 ಕೋಟಿ ರೂ.ನಿಂದ 21 ಕೋಟಿ ರೂ.ಗೆ ಇಳಿಸಲಾಗಿದೆ.

ವಿಧಾನಸಭೆಯಲ್ಲಿ ಈ ಬಗ್ಗೆ ಪ್ರತಿಕ್ರಿಯಿಸಿದ ಹಣಕಾಸು ಸಚಿವ ಸ್ವಪನ್ ದಾಸ್‌ಗುಪ್ತ, ಹಿಂದಿನ ಸರ್ಕಾರ ಅಲ್ಪಸಂಖ್ಯಾತ ಇಲಾಖೆಗೆ 5,000 ಕೋಟಿ ರೂ.ಗಿಂತ ಹೆಚ್ಚು ತೋರಿಸಿ, ವಾಸ್ತವದಲ್ಲಿ ಕೇವಲ 2,500 ಕೋಟಿ ರೂ. ಮಾತ್ರ ಖರ್ಚು ಮಾಡುತ್ತಿತ್ತು. ನಾವು ವಾಸ್ತವಿಕ ಮೊತ್ತವನ್ನು ಮಾತ್ರ ನಿಗದಿಪಡಿಸಿದ್ದೇವೆ ಎಂದು ಅನುದಾನ ಕಡಿತ ನಡೆಯನ್ನು ಸಮರ್ಥಿಸಿಕೊಂಡಿದ್ದಾರೆ. ಅಲ್ಲದೆ, ಮುಖ್ಯಮಂತ್ರಿ ಸುವೇಂದು ಅಧಿಕಾರಿ, ಮಕ್ಕಳನ್ನು ಮದರಸಾಗಳಿಗೆ ಕಳುಹಿಸುವ ಬದಲು ವೈದ್ಯರು ಅಥವಾ ಇಂಜಿನಿಯರ್‌ಗಳನ್ನಾಗಿ ಮಾಡಲು ಉತ್ತೇಜಿಸಬೇಕು ಎಂದು ಹೇಳಿದ್ದಾರೆ.

### ಸರ್ಕಾರದ ಪ್ರತಿಷ್ಠೆಗೆ ಪೆಟ್ಟು

ಬಿಜೆಪಿಯ ಈ ನಿರ್ಧಾರವನ್ನು ತೃಣಮೂಲ ಕಾಂಗ್ರೆಸ್ ಸೇರಿದಂತೆ ಹಲವು ಪಕ್ಷಗಳು ತೀವ್ರವಾಗಿ ಖಂಡಿಸಿವೆ. ಟಿಎಂಸಿಯ ರಿತಬ್ರತಾ ಬ್ಯಾನರ್ಜಿ, ಈ ನಿರ್ಧಾರದ ವಿರುದ್ಧ ನಾವು ವಿಧಾನಸಭೆಯಲ್ಲಿ ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಸಿದ್ದಾರೆ.

ಐಎಸ್‌ಎಫ್‌ನ ನೌಶಾದ್ ಸಿದ್ದಿಕಿ, ಬಿಜೆಪಿಯು ಎಲ್ಲರನ್ನೂ ಒಗ್ಗೂಡಿಸುವುದಾಗಿ ಹೇಳುತ್ತದೆ, ಆದರೆ ವಾಸ್ತವದಲ್ಲಿ ಅಲ್ಪಸಂಖ್ಯಾತರನ್ನು ಹತ್ತಿಕ್ಕುತ್ತಿದೆ. ಅಲ್ಪಸಂಖ್ಯಾತರು ಎಂದರೆ ಕೇವಲ ಮುಸ್ಲಿಮರಲ್ಲ, ಜೈನರು, ಕ್ರಿಶ್ಚಿಯನ್ನರು ಮತ್ತು ಬೌದ್ಧರೂ ಇದ್ದಾರೆ, ಅವರೆಲ್ಲರಿಗೂ ಈ ಕಡಿತ ಹೊಡೆತ ನೀಡುತ್ತದೆ ಎಂದಿದ್ದಾರೆ. ಎಜೆಯುಪಿಯ ಹುಮಾಯುನ್ ಕಬೀರ್, ಅಲ್ಪಸಂಖ್ಯಾತರ ಅಭಿವೃದ್ಧಿಯ ನಿಧಿಯನ್ನು ಕಡಿತಗೊಳಿಸುವ ಈ ನಿರ್ಧಾರವು ಸರ್ಕಾರದ ಪ್ರತಿಷ್ಠೆಯನ್ನು ಹಾಳು ಮಾಡಲಿದೆ ಎಂದು ಟೀಕಿಸಿದ್ದಾರೆ. ಓಬಿಸಿ ಪಟ್ಟಿಯಿಂದ ಮುಸ್ಲಿಂ ಸಮುದಾಯಗಳನ್ನು ಕೈಬಿಟ್ಟ ಬೆನ್ನಲ್ಲೇ, ಈಗ ಇಲಾಖೆಯ ಅನುದಾನದಲ್ಲಿ ಭಾರೀ ಕಡಿತ ಮಾಡಿರುವುದು, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರವು ತನ್ನ ವೋಟ್ ಬ್ಯಾಂಕ್ ರಾಜಕಾರಣವನ್ನು ಮೀರಿ, ಸೈದ್ಧಾಂತಿಕ ನೆಲೆಯಲ್ಲಿ ಧ್ರುವೀಕರಣದ ಹಾದಿ ಹಿಡಿದಿದೆಯೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ.

ಇದು ಮುಂಬರುವ ದಿನಗಳಲ್ಲಿ ತೃಣಮೂಲ ಕಾಂಗ್ರೆಸ್ ಮತ್ತು ಬಿಜೆಪಿ ನಡುವಿನ ಸಂಘರ್ಷವನ್ನು ಮತ್ತಷ್ಟು ತೀವ್ರಗೊಳಿಸಲಿದೆ.

# ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಪ್ರತಿ ಶಿಶುವಿಗೆ 1 ಗ್ರಾಂ ಚಿನ್ನದ ಉಂಗುರ

**ಚೆನ್ನೈ,ಜೂ.27:** ತಮಿಳುನಾಡು ಸರ್ಕಾರವು ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ನವಜಾತ ಶಿಶುಗಳಿಗೆ ತೂಕ 1 ಗ್ರಾಂ ಚಿನ್ನದ ಉಂಗುರ ನೀಡುವ ತಾಯಿಮಾಮನ್ ತಂಗ ಮೋಧಿರ ತಿಟ್ಟಂ ಯೋಜನೆಯನ್ನು ಜಾರಿಗೆ ತರುತ್ತಿದೆ. ಈ ಯೋಜನೆಗೆ ವಾರ್ಷಿಕ 755.83 ಕೋಟಿ ರೂಪಾಯಿ ಹಣವನ್ನು ಮೀಸಲಿಟ್ಟಿದೆ.

ಮಾಜಿ ಮುಖ್ಯಮಂತ್ರಿ ಸಿ.ಎನ್. ಅಣ್ಣಾದೊರೈ ಅವರ ಜನ್ಮದಿನವಾದ ಸೆಪ್ಟೆಂಬರ್ 15ರಂದು ಔಪಚಾರಿಕವಾಗಿ ಉದ್ಘಾಟನೆ ನಡೆಯಲಿದ್ದು, ಮುಖ್ಯಮಂತ್ರಿ ವಿಜಯ್ ಅವರು ಈ ಯೋಜನೆಗೆ ಚಾಲನೆ ನೀಡಲಿದ್ದಾರೆ. ಜೂನ್ 22ರಿಂದಲೇ ಪೂರ್ವಾನ್ವಯವಾಗಿ ಯೋಜನೆ ಜಾರಿಗೆ ಬರಲಿದೆ.

ತಮಿಳುನಾಡಿನ ಶಾಶ್ವತ ನಿವಾಸಿಗಳಾದ ಪೋಷಕರ ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಶಿಶುಗಳಿಗೆ ಮಾತ್ರ ಈ ಉಂಗುರ ನೀಡಲಾಗುತ್ತದೆ. ತಾಯಿ ಮತ್ತು ಮಗುವಿನ ಆರೋಗ್ಯವನ್ನು ಗೌರವಿಸುವುದು ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆಯನ್ನು ಪ್ರೋತ್ಸಾಹಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಸರ್ಕಾರ ತಿಳಿಸಿದೆ.

ಯೋಜನೆಯು ಟಿವಿಕೆ ನೇತೃತ್ವದ ಸರ್ಕಾರದ ಪ್ರಣಾಳಿಕೆಯ ಪ್ರಮುಖ ಭಾಗವಾಗಿದೆ. ವಿಧಾನಸಭೆ ಚುನಾವಣೆಗೆ ಮುನ್ನ ವಿಜಯ್ ಈ ಯೋಜನೆಯನ್ನು ಜಾರಿಗೆ ತರುವುದಾಗಿ ಭರವಸೆ ನೀಡಿದ್ದರೂ, ಚಿನ್ನದ ಉಂಗುರದ ತೂಕವನ್ನು ಆಗ ನಿರ್ದಿಷ್ಟಪಡಿಸಿರಲಿಲ್ಲ.

ಈಗಾಗಲೇ ರಾಜ್ಯದಲ್ಲಿ ಗರ್ಭಿಣಿಯರಿಗೆ ಆರ್ಥಿಕ ನೆರವು, ಉಚಿತ ಹೆರಿಗೆ ಸೌಲಭ್ಯ, ನವಜಾತ ಶಿಶು ಆರೈಕೆ, ಪೌಷ್ಟಿಕಾಂಶ ಕಾರ್ಯಕ್ರಮಗಳು ಮತ್ತು PICME ಸಾಫ್ಟ್‌ವೇ ರ್ ಮೂಲಕ ಮೇಲ್ವಿಚಾರಣೆಯಂತಹ ಹಲವು ಯೋಜನೆಗಳು ಯಶಸ್ವಿಯಾಗಿ ಜಾರಿಯಲ್ಲಿವೆ. ಇವುಗಳಿಂದ ತಾಯಿ–ಮಕ್ಕಳ ಆರೋಗ್ಯ ಸೂಚ್ಯಂಕಗಳಲ್ಲಿ ಗಮನಾರ್ಹ ಸುಧಾರಣೆಯಾಗಿದೆ ಎಂದು ಸರ್ಕಾರದ ಪ್ರಕಟಣೆಯಲ್ಲಿ ಹೇಳಲಾಗಿದೆ.

# ಇಸ್ಲಾಂಗೆ ಮತಾಂತರಗೊಂಡರೆ ಹಿಂದುಳಿದ ವರ್ಗದಡಿ ಮೀಸಲಾತಿ ಪಡೆಯಲು ಸಾಧ್ಯವಿಲ್ಲ

**ಚೆನ್ನೈ, ಜೂ.27:** ಧಾರ್ಮಿಕ ಮತಾಂತರಕ್ಕೆ ಸಂಬಂಧಿಸಿದ ಪ್ರಕರಣವೊಂದರಲ್ಲಿ ಮದ್ರಾಸ್ ಹೈಕೋರ್ಟ್ ಪ್ರಮುಖ ತೀರ್ಪು ನೀಡಿದೆ. ಹಿಂದೂ ಧರ್ಮದಿಂದ ಇಸ್ಲಾಂಗೆ ಮತಾಂತರಗೊಂಡವರು ಹಿಂದುಳಿದ ವರ್ಗ (ಬಿಸಿಎಂ) ಕೋಟಾದಡಿಯಲ್ಲಿ ಮೀಸಲಾತಿ ಪಡೆಯಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಹೇಳಿದೆ. ಮತಾಂತರದ ನಂತರ ಅವರು ಕೇವಲ ಮುಸ್ಲಿಂ ಮತ್ತು ಇನ್ನೇನೂ ಅಲ್ಲ. ಹಿಂದುಳಿದ ವರ್ಗಗಳಿಗೆ ಮತಾಂತರಗೊಂಡವರಿಗೆ ಮೀಸಲಾತಿ ನೀಡುವ ತಮಿಳುನಾಡು ಸರ್ಕಾರದ 2024ರ ಆದೇಶವನ್ನು ನ್ಯಾಯಾಲಯವು ಅಸಂವಿಧಾನಿಕ ಎಂದು ಘೋಷಿಸಿದೆ.

ಹಿಂದೂ ಧರ್ಮದಿಂದ ಇಸ್ಲಾಂಗೆ ಮತಾಂತರಗೊಂಡಿದ್ದ ವ್ಯಕ್ತಿಯೊಬ್ಬ 2016ರಲ್ಲಿ ಮುಸ್ಲಿಂ ಪದ್ಧತಿಗಳ ಪ್ರಕಾರ ವಿವಾಹವಾದರು. ಅವರಿಗೆ ಇಬ್ಬರು ಮಕ್ಕಳಿದ್ದಾರೆ. ಸ್ವಲ್ಪ ಸಮಯದ ನಂತರ, ಅವರು ಮುಸ್ಲಿಂ ಲೆಬ್ಬೈ ಸಮುದಾಯದಿಂದ ಪ್ರಮಾಣಪತ್ರಕ್ಕಾಗಿ ಅರ್ಜಿ ಸಲ್ಲಿಸಿದರು. ಆದರೆ ಕಾಯಥಾರ್ನ ತಹಶೀಲ್ದಾರ್ ಅವರ ಅರ್ಜಿಯನ್ನು ತಿರಸ್ಕರಿಸಿದರು. ತಹಶೀಲ್ದಾರ್ ಅವರ ಅರ್ಜಿಯನ್ನು ತಿರಸ್ಕರಿಸಿದ ನಂತರ, ಆ ವ್ಯಕ್ತಿ ಹೈಕೋರ್ಟ್ ಅನ್ನು ಸಂಪರ್ಕಿಸಿದರು. ಅರ್ಜಿದಾರರ ವಕೀಲರು ನ್ಯಾಯಾಲಯದಲ್ಲಿ ತಮ್ಮ ಕಕ್ಷಿದಾರರು ಮುಸ್ಲಿಂ ಸಮುದಾಯದ ನಿಯಮಗಳನ್ನು ಪಾಲಿಸುತ್ತಾರೆ ಎಂದು ವಾದಿಸಿದರು. ಸ್ಥಳೀಯ ಸಮುದಾಯವೂ ಅವರನ್ನು ಒಪ್ಪಿಕೊಂಡು ಪ್ರಮಾಣಪತ್ರ ನೀಡಿದೆ. ಆದ್ದರಿಂದ ಕಂದಾಯ ಇಲಾಖೆ ಅಧಿಕಾರಿಗೆ ಅದನ್ನು ಪ್ರಶ್ನಿಸುವ ಹಕ್ಕಿಲ್ಲ. ವಾದಗಳನ್ನು ಆಲಿಸಿದ ನಂತರ, ನ್ಯಾಯಮೂರ್ತಿಗಳಾದ ಜಿ.ಆರ್. ಸ್ವಾಮಿನಾಥನ್ ಮತ್ತು ಪಿ.ಬಿ. ಬಾಲಾಜಿ ನೇತೃತ್ವದ ಹೈಕೋರ್ಟ್ನ ವಿಭಾಗೀಯ ಪೀಠವು ಬೇಡಿಕೆಯನ್ನು ತಿರಸ್ಕರಿಸಿತು. ಸಂವಿಧಾನದ 25ನೇ ವಿಧಿಯ ಅಡಿಯಲ್ಲಿ ಒಬ್ಬರ ಧರ್ಮವನ್ನು ಬದಲಾಯಿಸುವುದು ಮೂಲಭೂತ ಹಕ್ಕಾಗಿದ್ದರೂ, ಒಬ್ಬರ ಧರ್ಮವನ್ನು ಬದಲಾಯಿಸಿದ ನಂತರವೂ ಮೀಸಲಾತಿ ಸೌಲಭ್ಯಗಳನ್ನು ಪಡೆಯುವುದು ಕಾನೂನು ಬದ್ಧವಾಗಿ ಅಮಾನ್ಯವಾಗಿದೆ ಎಂದು ಹೇಳಿದೆ.

ತನ್ನ ತೀರ್ಪಿನಲ್ಲಿ, ಹೈಕೋರ್ಟ್ ಪ್ರವಾದಿ ಮುಹಮ್ಮದ್ ಅವರ ಸಂದೇಶವನ್ನು ಸಹ ಉಲ್ಲೇಖಿಸಿದೆ. ನ್ಯಾಯಾಲಯದ ಪ್ರಕಾರ, ಪ್ರವಾದಿಗಳು, ಯಾವುದೇ ಅರಬ್ಬರು ಅರಬ್ಬರಲ್ಲದವರಿಗಿಂತ ಅಥವಾ ಬಿಳಿಯರು ಕರಿಯರಿಗಿಂತ ಯಾವುದೇ ಶ್ರೇಷ್ಠತೆಯನ್ನು ಹೊಂದಿಲ್ಲ. ಒಳ್ಳೆಯ ಕಾರ್ಯಗಳ ಮೂಲಕ ಹೊರತುಪಡಿಸಿ. ಇಸ್ಲಾಂ ಎಲ್ಲಾ ಮನುಷ್ಯರನ್ನು ಸಮಾನರು ಎಂದು ಗುರುತಿಸುತ್ತದೆಯಾದರೂ, ಜಾತಿಯ ಆಧಾರದ ಮೇಲೆ ಯಾರನ್ನಾದರೂ ಹಿಂದುಳಿದವರು ಅಥವಾ ಮುಂದಕ್ಕೆ ವರ್ಗೀಕರಿಸುವುದು ಇಸ್ಲಾಂನ ಮೂಲಭೂತ ತತ್ವಗಳಿಗೆ ವಿರುದ್ಧವಾಗಿದೆ ಎಂದು ನ್ಯಾಯಮೂರ್ತಿಗಳು ಹೇಳಿದರು.

ಮುಸ್ಲಿಂ ಸಮಾಜದಲ್ಲಿ ರಾವತ್, ಮರಕ್ಕಾಯರ್ ಅಥವಾ ಡೆಕ್ಕನಿ ಮುಂತಾದ ಕೆಲವು ವರ್ಗಗಳು ಐತಿಹಾಸಿಕವಾಗಿ ಹೊರಹೊಮ್ಮಿವೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಆದರೆ ಈ ವರ್ಗಗಳನ್ನು ಹುಟ್ಟಿನಿಂದಲೇ ನಿರ್ಧರಿಸಲಾಗುತ್ತದೆ. ಒಬ್ಬ ವ್ಯಕ್ತಿಯು ಬೇರೆ ಧರ್ಮಕ್ಕೆ ಮತಾಂತರಗೊಳ್ಳುವ ಮೂಲಕ ಈ ಯಾವುದೇ ಜಾತಿಗಳು ಅಥವಾ ವರ್ಗಗಳ ಭಾಗವಾಗಲು ಸಾಧ್ಯವಿಲ್ಲ. ತಮಿಳುನಾಡು ಕಾನೂನಿನಡಿಯಲ್ಲಿ, ಅನ್ಸಾರ್, ಡೆಕ್ಕನಿ, ದುಡೇಕುಲಾ, ಲಬ್ಬೈ, ಮಾಪಿಳ್ಳೈ, ಶೇಖ್ ಮತ್ತು ಸೈಯದ್ ಎಂಬ ಏಳು ಮುಸ್ಲಿಂ ಸಮುದಾಯಗಳಿಗೆ ಮಾತ್ರ ಹಿಂದುಳಿದ ವರ್ಗದ ಸ್ಥಾನಮಾನ ನೀಡಲಾಗಿದೆ ಎಂಬುದನ್ನು ಗಮನಿಸಬೇಕು. ಈ ಸಮುದಾಯಗಳಲ್ಲಿ ಜನಿಸದ ವ್ಯಕ್ತಿಗೆ ಈ ಪ್ರಮಾಣಪತ್ರವನ್ನು ನೀಡಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

### ಬೆಂಗಳೂರು ಆಸ್ತಿದಾರರಿಗೆ ಸರ್ಕಾರದಿಂದ ಸಿಹಿಸುದ್ದಿ: ಆಗಸ್ಟ್ 23ರವರೆಗೆ ಅವಕಾಶ

# ಬಿ ಟು ಎ ಖಾತಾ: ಮಾರ್ಗಸೂಚಿ ದರ ಶೇ.5ರಿಂದ 2ಕ್ಕೆ ಇಳಿಕೆ

**ಬೆಂಗಳೂರು, ಜೂ.27:** ರಾಜಧಾನಿಯ ಆಸ್ತಿದಾರರಿಗೆ ಕರ್ನಾಟಕ ಸರ್ಕಾರವು ಭರ್ಜರಿ ಗುಡ್‌ನ್ಯೂಸ್ ಕೊಟ್ಟಿದೆ. ಬೆಂಗಳೂರಿನ ಆಸ್ತಿದಾರರಿಗೆ ಹಾಗೂ ಬಿ ಖಾತಾ ಆಸ್ತಿದಾರರಿಗೆ ಮತ್ತೊಂದು ಬಂಪರ್ ಶುಭಸುದ್ದಿ ಸಿಕ್ಕಂತೆ ಆಗಿದೆ. ಆಸ್ತಿಗಳನ್ನು ಬಿ – ಖಾತಾದಿಂದ ಎ – ಖಾತಾ ಆಸ್ತಿ ಪರಿವರ್ತನೆಗೆ ಸರ್ಕಾರವು ವಿನಾಯಿತಿ ನೀಡಿದೆ.

ಬಿ ಖಾತಾದಿಂದ ಎ ಖಾತಾ ಆಸ್ತಿ ಪರಿವರ್ತನೆಗೆ ಮಾರ್ಗಸೂಚಿ ದರ ಮೊತ್ತವನ್ನು ಶೇ 5ರಿಂದ ಶೇ 2ಕ್ಕೆ ಇಳಿಸಲಾಗಿದೆ. ಇದೀಗ ಬಿ ಖಾತಾದಿಂದ ಎ ಖಾತಾ ಪರಿವರ್ತನೆಗೆ ಇನ್ನೆಷ್ಟು ದಿನ ಬಾಕಿ ಉಳಿದಿದೆ ಎನ್ನುವುದು ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಗುಡ್‌ನ್ಯೂಸ್ ಕೊಟ್ಟಿದ್ದಾರೆ.

ಕರ್ನಾಟಕ ಸರ್ಕಾರ – ಗ್ರೇಟರ್ ಬೆಂಗಳೂರು




ಪ್ರಾಧಿಕಾರದಿಂದ ಗುಡ್‌ನ್ಯೂಸ್ ಕೊಡಲಾಗಿದೆ. ಬೆಂಗಳೂರು ನಗರ ಪಾಲಿಕೆಗಳಾದ ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಹಾಗೂ ಕೇಂದ್ರ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಿ ಖಾತಾದಿಂದ ಎ ಖಾತಾ ಪರಿವರ್ತಿಸಲು ಕೇವಲ ನಿಗದಿತ ಶುಲ್ಕ ಶೇ. 5%ರ ಬದಲಿಗೆ ಶೇ.2% ಇರಲಿದೆ. ಈ ಸುವರ್ಣ ಅವಕಾಶವನ್ನು ಕಳೆದುಕೊಳ್ಳಬೇಡಿ ಈಗಲೇ ಅರ್ಜಿ ಸಲ್ಲಿಸಿ BBMP eAasthi.karnataka.gov.in/BtoAKhata ಎಂದು ಹೇಳಲಾಗಿದೆ.

ಬಿ ಖಾತಾದಿಂದ ಎ ಖಾತಾ ಆಸ್ತಿ ಪರಿವರ್ತನೆಯನ್ನು ಈಗ ಮಾಡಿಕೊಂಡರೆ, ಆಸ್ತಿದಾರರಿಗೆ ಶೇ.60ರಷ್ಟು ಉಳಿತಾಯ ಆಗಲಿದೆ. ಈ ರಿಯಾಯಿತಿಯು 23.08.2026 ರವರೆಗೆ ಮಾತ್ರ ಲಭ್ಯ ಇರಲಿದೆ. ಈ ಮೊತ್ತವು ಕಳೆದ ಬಾರಿ ಸರ್ಕಾರದ ನೀಡಿದ್ದ ರಿಯಾಯಿತಿಗಿಂತಲೂ ಹೆಚ್ಚಾಗಿದೆ. ಕಳೆದ ಬಾರಿ ಬಿ ಖಾತಾದಿಂದ ಎ ಖಾತಾಗೆ ಆಸ್ತಿ ಪರಿವರ್ತನೆ ಶೇ 5ರಷ್ಟು ಶುಲ್ಕವನ್ನು ವಿಧಿಸಿತ್ತು. ಆದರೆ ಇದೀಗ ಆಸ್ತಿಗಳ ಪರಿವರ್ತನೆಗೆ ಕರ್ನಾಟಕ ಸರ್ಕಾರವು ಶೇ 2 ಶುಲ್ಕ ವಿಧಿಸಿದೆ.



ಬೆಂಗಳೂರು: ಬಿಜೆಪಿಯ ಮುಖಂಡ ಎನ್. ರವೀಂದ್ರ ಅವರು ತಮ್ಮ ಗೃಹ ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಕೆಂಪೇಗೌಡರ 517ನೇ ಜಯಂತ್ಯುತ್ಸವವನ್ನು ಆಚರಿಸಿದರು. ಈ ಸಂದರ್ಭದಲ್ಲಿ ಪ್ರಮುಖ ಕಾರ್ಯದರ್ಶಿ ಜಿ.ಬಿ. ಆನಂದ್‌ಗೌಡ, ಗೋಪೀನಾಥ್ ರಾಜು, ಬಿ.ಪಿ. ರಾಜು, ಅಗ್ರಹಾರ ಜಗನ್ನಾಥ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಶಂಕಿತ ಉಗ್ರನಿಂದ ರಹಸ್ಯ ಮಾಹಿತಿ ಕಲೆಹಾಕಿದ ಎನ್‌ಐಎ

**ಬೆಂಗಳೂರು, ಜೂ.27:** ಶಂಕಿತ ಉಗ್ರ ಸುಹೇಲ್‌ನನ್ನು ರಾಷ್ಟ್ರೀಯ ತನಿಖಾದಳದ (ಎನ್‌ಐಎ) ಅಧಿಕಾರಿಗಳು ಹೆಚ್ಚಿನ ವಿಚಾರಣೆಗೆ ಒಳಪಡಿಸಿ ಕೆಲವು ರಹಸ್ಯ ಮಾಹಿತಿ ಪಡೆದುಕೊಂಡಿದ್ದಾರೆ.

ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನ ಬನ್ನಿಕೋಡು ಗ್ರಾಮದಲ್ಲಿ ಕೆಲ ದಿನಗಳ ಹಿಂದೆ ಬಂಧಿಸಲಾಗಿದ್ದ ಆತನನ್ನು ಸುಮಾರು ಎರಡು ಗಂಟೆಗೂ ಹೆಚ್ಚು ಕಾಲ ಸುದೀರ್ಘವಾಗಿ ವಿಚಾರಣೆಗೆ ಒಳಪಡಿಸಿ ಉಗ್ರ ಚಟುವಟಿಕೆಗಳ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ. ಅಯೋಧ್ಯೆಯ ರಾಮಮಂದಿರ ಸ್ಫೋಟದ ಸಂಚು ಹಾಗೂ ಪಾಕಿಸ್ತಾನಿ ಉಗ್ರ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿರುವ ಮಾಹಿತಿ ಹಿನ್ನಲೆಯಲ್ಲಿ ನಿನ್ನೆ ಹರಿಹರಕ್ಕೆ ಆಗಮಿಸಿದ ಎನ್‌ಐಎ ಅಧಿಕಾರಿಗಳ ವಿಶೇಷ ತಂಡವು ಶಂಕಿತ ಉಗ್ರನಿಗೆ ಗ್ರಿಲ್ ಮಾಡಿದೆ. ಶಂಕಿತ ಉಗ್ರ ಸುಹೇಲ್‌ನ ದೇಶದ್ರೋಹಿ ಸಂಚು ಹಾಗೂ ಅಂತರಾಷ್ಟ್ರೀಯ ಸಂಪರ್ಕ ಹೊಂದಿರುವ ಬಗ್ಗೆ ಇನ್ನಷ್ಟು ಆಳವಾಗಿ ತನಿಖೆ ನಡೆಯುತ್ತಿದೆ. ಶಂಕಿತ ಮೂವರು ಉಗ್ರರ ಬಂಧನದ ಹಿನ್ನೆಲೆಯಲ್ಲಿ ರಾಜ್ಯದ ಕರಾವಳಿ ಹಾಗೂ ಒಳನಾಡಿನ ಇತರ ಭಾಗಗಳಲ್ಲಿ ಎನ್‌ಐಎ ತನಿಖೆ ಚುರುಕುಗೊಳಿಸಲಿದೆ.

## ರಾಜ್ಯ ಮುಕ್ತ ವಿವಿ ಕುಲಪತಿಯಾಗಿ ಪ್ರೊ.ಎ.ಪಿ.ಜ್ಞಾನಪ್ರಕಾಶ್ ನೇಮಕ

**ಬೆಂಗಳೂರು, ಜೂ.27:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಯಾಗಿ, ಖ್ಯಾತ ಶಿಕ್ಷಣತಜ್ಞ, ವಿಜ್ಞಾನಿ ಹಾಗೂ ಆಡಳಿತ ಪರಿಣಿತರಾದ ಪ್ರೊ.ಎ.ಪಿ.ಜ್ಞಾನ ಪ್ರಕಾಶ್ ಅವರನ್ನು ನೇಮಿಸಲಾಗಿದೆ.

ರಾಜ್ಯಪಾಲ ಹಾಗೂ ವಿಶ್ವವಿದ್ಯಾನಿಲಯಗಳ ಕುಲಾಧಿಪತಿ ಥಾವರ್‌ಚಂದ್ ಗೆಹ್ಲೋತ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.



ಪ್ರೊ. ಎ.ಪಿ. ಜ್ಞಾನ ಪ್ರಕಾಶ್ ಅವರು ಪ್ರಸ್ತುತ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಭೌತಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕರಾಗಿ ಹಾಗೂ ವಿಭಾಗಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು. ಅವರು ಗುಲ್ಬರ್ಗಾ ವಿಶ್ವವಿದ್ಯಾನಿಲಯದಿಂದ ಎಂಎಸ್ಸಿ ಹಾಗೂ ಎಂ.ಫಿಲ್ ಪದವಿ ಪಡೆದು, ಮಂಗಳೂರು ವಿಶ್ವವಿದ್ಯಾನಿಲಯದಿಂದ ಪಿಎಚ್‌ಡಿ ಪದವಿ ಗಳಿಸಿದ್ದಾರೆ.

ಅವರು ಅಮೆರಿಕದ ಜಾರ್ಜಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಹಾಗಗೂ ತೈವಾನ್ ನ ನ್ಯಾಷನಲ್ ಡೋಂಗ್‌ಹ್ವಾ ವಿವಿಯಲ್ಲಿ ಸಂಶೋಧಕರಾಗಿ ಕಾರ್ಯನಿರ್ವಹಿಸಿ ಅಂತಾರಾಷ್ಟ್ರೀಯ ಮಟ್ಟದ ಸಂಶೋಧನಾ ಅನುಭವ ಪಡೆದಿದ್ದಾರೆ.

ಪ್ರೊ. ಜ್ಞಾನಪ್ರಕಾಶ್ ಅವರು ಸಂಶೋಧನಾ ಕ್ಷೇತ್ರದಲ್ಲಿ ವಿಶಿಷ್ಟ ಕೊಡುಗೆ ನೀಡಿದ್ದು, 155ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸಿದ್ದಾರೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ 175ಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಮಂಡಿಸಿದ್ದು, 11 ಪಿಎಚ್‌ಡಿ ಸಂಶೋಧಕರಿಗೆ ಮಾರ್ಗದರ್ಶನ ನೀಡಿದ್ದಾರೆ. ಅವರ ಸಂಶೋಧನಾ ಕ್ಷೇತ್ರಗಳು ಅರೆವಾಹಕ ಸಾಧನಗಳು, ವಿಕಿರಣ ಭೌತಶಾಸ್ತ್ರ ಮತ್ತು ನ್ಯಾನೋಮಟೀರಿಯಲ್ಸ್‌ಗಳನ್ನು ಒಳಗೊಂಡಿವೆ.

ಅವರು ನ್ಯಾಕ್ ಪೀರ್ ಟೀಮ್ ಸದಸ್ಯರಾಗಿ, ವಿವಿಧ ವಿಶ್ವವಿದ್ಯಾನಿಲಯಗಳ ಮೌಲ್ಯಮಾಪನ ತಜ್ಞರಾಗಿ ಹಾಗೂ ಹಲವು ರಾಷ್ಟ್ರೀಯ ಸಂಶೋಧನಾ ಯೋಜನೆಗಳ ಮುಖ್ಯ ಸಂಶೋಧಕರಾಗಿ ಸೇವೆ ಸಲ್ಲಿಸಿದ್ದಾರೆ. ವಿಜ್ಞಾನ ಮತ್ತು ಸಂಶೋಧನಾ ಕ್ಷೇತ್ರಕ್ಕೆ ನೀಡಿದ ಮಹತ್ವದ ಕೊಡುಗೆಗಾಗಿ ಕರ್ನಾಟಕ ಸರ್ಕಾರವು ಅವರಿಗೆ ಸರ್ ಸಿ.ವಿ. ರಾಮನ್ ಯುವ ವಿಜ್ಞಾನಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿದೆ. ಅವರ ಈ ಮಹತ್ವದ ನೇಮಕಾತಿಗೆ ಶಿಕ್ಷಣತಜ್ಞರು, ಸಂಶೋಧಕರು, ವಿದ್ಯಾರ್ಥಿಗಳು ಹಾಗೂ ಶೈಕ್ಷಣಿಕ ವಲಯದ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ಜು.21ರಂದು ಕೋರ್ಟ್‌ಗೆ ಹಾಜರಾಗುವಂತೆ ಆದೇಶ

## ಆರೆಸ್ಸೆಸ್ ವಿರುದ್ಧ ಅವಹೇಳನಕಾರಿ ಹೇಳಿಕೆ: ಪ್ರಿಯಾಂಕ್ ಖರ್ಗೆ, ಯುವ ಕಾಂಗ್ರೆಸ್ ಅಧ್ಯಕ್ಷ ನಲಪಾಡ್‌ಗೆ ಸಮನ್ಸ್




**ಬೆಂಗಳೂರು, ಜೂ.27:** ರಾಷ್ಟ್ರೀಯ ಸ್ವಯಂಸೇವಕ ಸಂಘ ಹಾಗೂ ಅದರ ಸದಸ್ಯರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ರಾಜ್ಯ ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಯೂತ್ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಅವರಿಗೆ ಬೆಂಗಳೂರಿನ ನ್ಯಾಯಾಲಯವು ಸಮನ್ಸ್ ಜಾರಿಗೊಳಿಸಿದೆ.

ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯವು ಈ ಕ್ರಿಮಿನಲ್ ಮಾನನಷ್ಟ ಪ್ರಕರಣದ ವಿಚಾರಣೆಯನ್ನು ಅಧಿಕೃತವಾಗಿ ಅಂಗೀಕರಿಸಿದ್ದು, ಇಬ್ಬರೂ ನಾಯಕರಿಗೆ ಜುಲೈ 21ರಂದು ನ್ಯಾಯಾಲಯಕ್ಕೆ ಖುದ್ದಾಗಿ ಹಾಜರಾಗುವಂತೆ ಆದೇಶಿಸಿದೆ.

ಬೆಂಗಳೂರಿನ ಸಿದ್ದಾಪುರ ನಿವಾಸಿಯಾದ ಆರ್‌ಎಸ್‌ಎಸ್ ಕಾರ್ಯಕರ್ತ ಎ. ತೇಜಸ್ ಎಂಬುವವರು ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಮೊಹಮ್ಮದ್ ನಲಪಾಡ್ ವಿರುದ್ಧ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದರು. 2025ರ ಆಗಸ್ಟ್ 14ರಂದು ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಆರ್‌ಎಸ್‌ಎಸ್ ಸದಸ್ಯರ ವಿರುದ್ಧ ಅವಹೇಳನಕಾರಿ ಹಾಗೂ ಆಕ್ಷೇಪಾರ್ಹ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು. ಯೂಟ್ಯೂಬ್ ಚಾನೆಲ್ ಒಂದರ ಸಂದರ್ಶನದಲ್ಲಿ ಆರ್‌ಎಸ್‌ಎಸ್ ಸಂಘಟನೆಯನ್ನು ನಿಂದಿಸಿ, ಕೀಳುಮಟ್ಟದ ಹೇಳಿಕೆಗಳನ್ನು ನೀಡಿದ್ದರು.

ಈ ಇಬ್ಬರೂ ನಾಯಕರ ಸರಣಿ ಹೇಳಿಕೆಗಳು ಹಾಗೂ ಪೋಸ್ಟ್‌ಗಳು ಸಮಾಜದಲ್ಲಿ ದೇಶಭಕ್ತ ಸಂಘಟನೆಯಾದ ಆರ್‌ಎಸ್‌ಎಸ್‌ನ ಘನತೆ ಮತ್ತು ಗೌರವಕ್ಕೆ ತೀವ್ರ ಧಕ್ಕೆ ತಂದಿವೆ ಎಂದು ತೇಜಸ್ ದೂರಿನಲ್ಲಿ ಉಲ್ಲೇಖಿಸಿದ್ದರು. ದೂರುದಾರರು ಸಲ್ಲಿಸಿದ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿದ 42ನೇ ಎಸಿಎಂಎಂ ನ್ಯಾಯಾಲಯವು, ಆರೋಪಿಗಳ ವಿರುದ್ಧ ಮೇಲ್ನೋಟಕ್ಕೆ ಕಾನೂನು ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ ಸಮನ್ಸ್ ಜಾರಿಗೆ ಆದೇಶಿಸಿದೆ. ಹೀಗಾಗಿ ಜುಲೈ 21ರಂದು ನಡೆಯಲಿರುವ ಮುಂದಿನ ವಿಚಾರಣೆಯ ವೇಳೆ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ನಲಪಾಡ್ ನ್ಯಾಯಾಧೀಶರ ಮುಂದೆ ಖುದ್ದಾಗಿ ಹಾಜರಾಗಿ ತಮ್ಮ ವಾದ ಮಂಡಿಸಬೇಕಿದೆ.

## ನಿರ್ಮಾಪಕ ಭಾ.ಮಾ.ಹರೀಶ್ ಅವರ ಪುತ್ರ ಉಲ್ಲಾಸ್ ಗೌಡ ನಿಧನ



**ಬೆಂಗಳೂರು, ಜೂ.27:** ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಮಾಜಿ ಅಧ್ಯಕ್ಷ ಹಾಗೂ ನಿರ್ಮಾಪಕ ಭಾ.ಮಾ.ಹರೀಶ್ ಅವರ ಪುತ್ರ ಉಲ್ಲಾಸ್ ಗೌಡ (27) ಹೃದಯಾಘಾತದಿಂದ ನಿಧನರಾಗಿದ್ದಾರೆ.

ಕೆಲವೇ ತಿಂಗಳುಗಳಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಡಲು ಸಿದ್ಧರಾಗಿದ್ದ ಉಲ್ಲಾಸ್ ಅವರ ನಿಧನ ಅವರ ಕುಟುಂಬದಲ್ಲಿ ತೀವ್ರ ಆಘಾತವನ್ನುಂಟು ಮಾಡಿದೆ.

ಉಲ್ಲಾಸ್ ಗೌಡ ಅವರು ಸ್ನೇಹಿತರೊಂದಿಗೆ ಶಿವಮೊಗ್ಗದ ಪ್ರಸಿದ್ಧ ಕೊಡಚಾದ್ರಿ ಬೆಟ್ಟಕ್ಕೆ ಟ್ರೆಕ್ಕಿಂಗ್‌ಗಾಗಿ ತೆರಳಿದ್ದರು. ಟ್ರೆಕ್ಕಿಂಗ್‌ನಲ್ಲಿದ್ದ ಸಂದರ್ಭದಲ್ಲಿಯೇ ಉಲ್ಲಾಸ್ ಅವರಿಗೆ ಇದ್ದಕ್ಕಿದ್ದಂತೆ ತೀವ್ರ ಎದೆನೋವು ಕಾಣಿಸಿಕೊಂಡಿದೆ. ತಕ್ಷಣವೇ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಪ್ರಯತ್ನಿಸಲಾಯಿತಾದರೂ, ಮಾರ್ಗಮಧ್ಯೆಯೇ ಅವರು ಕೊನೆಯುಸಿರೆಳೆದಿದ್ದಾರೆ.

ವೈದ್ಯರು ಅವರು ಹೃದಯಾಘಾತದಿಂದ ನಿಧನ ರಾಗಿರುವುದನ್ನು ದೃಢಪಡಿಸಿದ್ದಾರೆ.ಕೆಲವೇ ತಿಂಗಳುಗಳ ಹಿಂದೆ ಉಲ್ಲಾಸ್ ಗೌಡ ಅವರಿಗೆ ವಿವಾಹ ನಿಶ್ಚಯವಾಗಿತ್ತು. ಇತ್ತೀಚೆಗಷ್ಟೇ ಮನೆಯಲ್ಲಿ ದೀಪ ಶಾಸ್ತ್ರದ ಕಾರ್ಯಕ್ರಮವೂ ಜರುಗಿದ್ದು, ಕುಟುಂಬದಲ್ಲಿ ಮದುವೆಯ ಸಂಭ್ರಮ ಮನೆಮಾಡಿತ್ತು.

ಆಗಸ್ಟ್‌ನಲ್ಲಿ ನಿಶ್ಚಿತಾರ್ಥ ಮತ್ತು ಡಿಸೆಂಬರ್‌ನಲ್ಲಿ ಅದ್ದೂರಿಯಾಗಿ ಮದುವೆ ಮಾಡಲು ಕುಟುಂಬಸ್ಥರು ಸಿದ್ಧತೆ ನಡೆಸಿದ್ದರು. ಆದರೆ, ಅವರ ಅಕಾಲಿಕ ಸಾವಿನಿಂದಾಗಿ ಮದುವೆ ಮನೆ ಶೋಕಸಾಗರದಲ್ಲಿ ಮುಳುಗಿದೆ.

### ಉಡುಪಿ, ದ.ಕನ್ನಡ, ಉ.ಕ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಣೆ

## ರಾಜ್ಯಾದ್ಯಂತ ಮುಂದಿನ 3 ದಿನ ಭಾರಿ ಮಳೆ: ಹವಾಮಾನ ಇಲಾಖೆ ಮುನ್ಸೂಚನೆ

**ಬೆಂಗಳೂರು, ಜೂ.27:** ಮುಂಗಾರು ಮಳೆಯ ಅಬ್ಬರದ ನಡುವೆಯೇ ಕರ್ನಾಟಕದಾದ್ಯಂತ ಮುಂದಿನ 7 ದಿನಗಳ ಕಾಲ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಇಲಾಖೆ ಶನಿವಾರ ಬಿಡುಗಡೆ ಮಾಡಿರುವ ವರದಿ ಮತ್ತು ಎಚ್ಚರಿಕೆಯ ಪ್ರಕಾರ, ರಾಜ್ಯದಾದ್ಯಂತ ಅಲ್ಲಲ್ಲಿ ಗುಡುಗು, ಸಿಡಿಲು ಮತ್ತು ಜೋರಾದ ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗಲಿದ್ದು, ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಜೂನ್ 30ರಿಂದ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯ ತೀವ್ರತೆ ಮತ್ತಷ್ಟು ಹೆಚ್ಚಾಗಲಿದೆ ಎಂದು ಹೇಳಿದೆ. ಕರಾವಳಿ ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮುಂದಿನ 7 ದಿನಗಳ ಕಾಲ ನಿರಂತರ ಮಳೆಯಾಗಲಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಜೂನ್ 27 ಮತ್ತು ಜೂನ್ 28, 29, 30ರವರೆಗೆ ಭಾರಿ ಮಳೆಯಾಗಲಿದ್ದು, ಇದರೊಂದಿಗೆ ಭೀಕರ ಗುಡುಗು, ಸಿಡಿಲು ಹಾಗೂ ಬಿರುಗಾಳಿ ಬೀಸುವ ಸಾಧ್ಯತೆ ಇದೆ



ಎಂದು ಹೇಳಲಾಗಿದೆ. ಇನ್ನು ಜುಲೈ 1 ರಿಂದ ಜುಲೈ 3ರಂದು ಮುಂಗಾರು ಮಳೆಯ ಆರ್ಭಟ ಮುಂದುವರಿಯಲಿದ್ದು, ಸತತವಾಗಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಮುಂದಿನ ಒಂದು ವಾರದ ಕಾಲ ಬಿರುಗಾಳಿ ಸಹಿತ ಗುಡುಗು ಮಳೆಯಾಗಲಿದೆ. ಜೂನ್ 27 ರಂದು ಅಂದರೆ ಇಂದು ಸಂಜೆ ಹೊತ್ತಿಗೆ ಕೆಲವು ಪ್ರತ್ಯೇಕ ಸ್ಥಳಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದ್ದು, ಜೊತೆಗೆ ತೀವ್ರವಾದ ಗುಡುಗು, ಸಿಡಿಲು ಹಾಗೂ ಮೇಲ್ಮೈ ಗಾಳಿ ಬೀಸಲಿದೆ. ಹಾಗೂ ಜೂನ್ 28 ರಿಂದ ಜುಲೈ 3 ರವರೆಗೆ ಭಾರಿ ಮಳೆಯ ಎಚ್ಚರಿಕೆ ಇಲ್ಲದಿದ್ದರೂ, ಸತತವಾಗಿ ಗುಡುಗು, ಸಿಡಿಲು ಮತ್ತು ಬಿರುಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ದಟ್ಟವಾಗಿದೆ.ದಕ್ಷಿಣ ಒಳನಾಡಿನಲ್ಲಿ ಜೂ.30 ರಿಂದ ಭಾರಿ ಮಳೆಯಾಗಲಿದೆ.

ಬೆಂಗಳೂರು ಸೇರಿದಂತೆ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಜೂನ್ ಕೊನೆಯ ವಾರ ಹಾಗೂ ಜುಲೈ ಮೊದಲ ವಾರದಲ್ಲಿ ವರುಣನ ಅಬ್ಬರ ಹೆಚ್ಚಾಗಲಿದೆ. ಜೂನ್ 27 ಇಂದು ಸಂಜೆಯಿಂದ ಮತ್ತು 28ವರೆಗೆ ಗುಡುಗು, ಸಿಡಿಲು ಮತ್ತು ಜೋರಾದ ಗಾಳಿಯೊಂದಿಗೆ ಸಾಧಾರಣ ಮಳೆಯಾಗಲಿದೆ. ಜೂನ್ 29ರಂದು ಹವಾಮಾನದಲ್ಲಿ ಸ್ವಲ್ಪ ಬದಲಾವಣೆಯಾಗಲಿದ್ದು, ಕೇವಲ ಗುಡುಗು ಹಾಗೂ ಸಿಡಿಲಿನ ಮುನ್ಸೂಚನೆ (ಗ್ರೀನ್ ಅಲರ್ಟ್) ನೀಡಲಾಗಿದೆ. ಇದರ ಜತೆಗೆ ಜೂ.30 ರಿಂದ ಜುಲೈ 3ರವರೆಗೆ ಜೂ.30 ರಿಂದ ದಕ್ಷಿಣ ಒಳನಾಡಿನ ಹಲವೆಡೆ ಮಳೆಯ ತೀವ್ರತೆ ಹೆಚ್ಚಾಗಲಿದ್ದು, ಜುಲೈ 3 ರವರೆಗೆ ಸತತವಾಗಿ ಭಾರಿ ಮಳೆಯಾಗಲಿದೆ ಎಂದು ಇಲಾಖೆ ಎಚ್ಚರಿಸಿದೆ. ಸಾರ್ವಜನಿಕರು ಹಾಗೂ ವಿಶೇಷವಾಗಿ ರೈತರು ಮತ್ತು ಮೀನುಗಾರರು ಜಾಗರೂಕರಾಗಿರಬೇಕು. ಗುಡುಗು ಸಿಡಿಲಿನ ಸಂದರ್ಭದಲ್ಲಿ ಮರಗಳ ಕೆಳಗೆ ನಿಲ್ಲದಂತೆ ಹಾಗೂ ಹಳೆಯ ಕಟ್ಟಡಗಳ ಆಶ್ರಯ ಪಡೆಯದಂತೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

## ಇಂದು ಬೆಂಗಳೂರಿನಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

**ಬೆಂಗಳೂರು, ಜೂ.27:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಭಾನುವಾರ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಹಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಯಶಸ್ವಿಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಬಿಎ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ವೆಂಕಟಾ ಚಲಪತಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದಲ್ಲಿ ಪಲ್ಸ್ ಪೋಲಿಯೋ ಕಾರ್ಯ ಕ್ರಮದ ಸಿದ್ಧತೆ ಕುರಿತು ನಡೆದ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ಜುನ್ 28ರಿಂದ ಜುಲೈ 1ರವರೆಗೆ ನಡೆಯಲಿರುವ ಅಭಿಯಾನದಲ್ಲಿ ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಎರಡು ಹನಿ ಪೋಲಿಯೋ ಲಸಿಕೆ ತಲುಪಿಸುವಂತೆ ಸೂಚಿಸಿದರು. ಜಿಬಿಎ ವ್ಯಾಪ್ತಿಯ ಎಲ್ಲ ವಾರ್ಡ್‌ಗಳಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ್ಮ ಕ್ಲಿನಿಕ್‌ಗಳು, ಹೆರಿಗೆ ಆಸ್ಪತ್ರೆಗಳು, ಕುಟುಂಬ ಕಲ್ಯಾಣ ಕೇಂದ್ರಗಳು, ಅಂಗನವಾಡಿಗಳು ಹಾಗೂ ಶಾಲೆಗಳಲ್ಲಿ ಪೋಲಿಯೋ ಬೂತ್‌ಗಳನ್ನು ಸ್ಥಾಪಿಸಲಾಗಿದೆ. ಜೊತೆಗೆ ಬಸ್ ನಿಲ್ದಾಣ, ರೈಲು ನಿಲ್ದಾಣ, ಮೆಟ್ರೋ ನಿಲ್ದಾಣ, ಮಾಲ್‌ಗಳು, ಖಾಸಗಿ ಆಸ್ಪತ್ರೆಗಳು ಮತ್ತು ಕೊಳಚೆ ಪ್ರದೇಶಗಳಂತಹ ಜನನಿಬಿಡ ಸ್ಥಳಗಳಲ್ಲಿ ಸ್ಥಿರ ಹಾಗೂ ಸಂಚಾರಿ ತಂಡಗಳನ್ನು ನಿಯೋಜಿಸಲಾಗಿದೆ.

ಪೋಷಕರು ತಮ್ಮ ಸಮೀಪದ ಪೋಲಿಯೋ ಬೂತ್‌ಗಳ ಮಾಹಿತಿಯನ್ನು ಪಡೆಯಲು ಜಿಬಿಎ ಪೋಲಿಯೋ ಬೂತ್ ಮ್ಯಾಪಿಂಗ್ ಪೋರ್ಟಲ್ ಅನ್ನು ಬಳಸಬಹುದಾಗಿದೆ.

ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಹನಿ ನೀಡಿದ್ದರೂ ಅಭಿಯಾನದ ದಿನ ಮತ್ತೊಮ್ಮೆ ಲಸಿಕೆ ಹಾಕಿಸುವಂತೆ





ಜಿಬಿಎ ಮನವಿ ಮಾಡಿದೆ.ಜಿಬಿಎ ಅಂಕಿಅಂಶಗಳ ಪ್ರಕಾರ, ವ್ಯಾಪ್ತಿಯಲ್ಲಿ 1.23 ಕೋಟಿ ಜನಸಂಖ್ಯೆ ಇದ್ದು, 0–5 ವರ್ಷದ 11.47 ಲಕ್ಷ ಮಕ್ಕಳು ಲಸಿಕಾ ಅಭಿಯಾನದ ಗುರಿಯಾಗಿದ್ದಾರೆ. 3,444 ಪೋಲಿಯೋ ಬೂಗಳು, 660 ಸ್ಥಿರ ತಂಡಗಳು ಹಾಗೂ 435 ಸಂಚಾರಿ ತಂಡಗಳ ಮೂಲಕ ಕಾರ್ಯಕ್ರಮ ನಡೆಸಲಾಗುತ್ತಿದೆ. ಒಟ್ಟು 15,964 ಲಸಿಕಾ ಕಾರ್ಯಕರ್ತರು ಮತ್ತು 817 ಮೇಲ್ವಿಚಾರಕರು ಅಭಿಯಾನದಲ್ಲಿ ಭಾಗವಹಿಸಲಿದ್ದಾರೆ.

ಪೋಲಿಯೋ ಮುಕ್ತ ಬೆಂಗಳೂರು ಮತ್ತು ಪೋಲಿಯೋ ಮುಕ್ತ ವಿಶ್ವ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸುವಂತೆ ಜಿಬಿಎ ಮನವಿ ಮಾಡಿದೆ.

### ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

## ಜೂನ್ 30ಕ್ಕೆ ಬಿಸಿಯು ಉತ್ಸವ–3.0 ಸಮಾರೋಪ ಸಮಾರಂಭ




**ಬೆಂಗಳೂರು, ಜೂ.27:** ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಪ್ರತಿ ವರ್ಷದಂತೆ ವಿದ್ಯಾರ್ಥಿಗಳ ಪ್ರತಿಭೆಯನ್ನು ಉತ್ತೇಜಿಸಿ ಪೋಷಿಸುವ ಉದ್ದೇಶದಿಂದ ಜೂನ್ 29 ಮತ್ತು 30ರಂದು "ಬಿಸಿಯು ಉತ್ಸವ–3.0" ಕಾರ್ಯಕ್ರಮ ವನ್ನು ಹಮ್ಮಿಕೊಂಡಿದೆ. ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ರಮೇಶ್.ಬಿ ಅವರು ಸೆಂಟ್ರಲ್ ಕಾಲೇಜಿನ ಗಡಿಯಾರ ಗೋಪುರ ಕಟ್ಟಡದಲ್ಲಿ ಭಿತ್ತಿಫಲಕ ಅನಾವರಣಗೊಳಿಸಿ ತಮಟೆ ಬಾರಿಸುವ ಮೂಲಕ ಉತ್ಸವಕ್ಕೆ ಅಧಿಕೃತ ಚಾಲನೆ ನೀಡಿದರು. ಕುಲಸಚಿವರಾದ ಎ.ನವೀನ್ ಜೋಸೆಫ್ ಅವರೊಂದಿಗೆ ಕೈ ಜೋಡಿಸಿದರು.

ಉತ್ಸವದ ಪ್ರಯುಕ್ತ ಜೂನ್ 29 ಮತ್ತು 30ರಂದು ಸಂಗೀತ, ಸಮೂಹ ನೃತ್ಯ, ಸಮೂಹ ಗಾಯನ, ಭರತನಾಟ್ಯ, ರಸಪ್ರಶ್ನೆ, ಏಕ ಪಾತ್ರಾಭಿನಯ, ಕಿರುನಾಟಕ, ಮಿಮಿಕ್ರಿ, ಭಾಷಣ ಸ್ಪರ್ಧೆ, ಚರ್ಚಾಸ್ಪರ್ಧೆ, ರಂಗೋಲಿ, ಜಾನಪದ ಕಲೆ, ಸ್ಥಳದಲ್ಲೇ ಚಿತ್ರ ರಚನೆ, ಪೋಸ್ಟರ್ ಪ್ರದರ್ಶನ, ಕಾರ್ಟೂನಿಂಗ್, ಫ್ಯಾಷನ್ ಶೋ ಮುಂತಾದ ಅನೇಕ ಸಾಂಸ್ಕೃತಿಕ ಚಟುವಟಿಕೆಗಳನ್ನು ಆಯೇಜಿಸಲಾಗಿದೆ. ಇದಲ್ಲದೆ ಸೆಂಟ್ರಲ್ ಕಾಲೇಜಿನ ಕ್ರಿಕೆಟ್ ಮೈದಾನದಲ್ಲಿ ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಎರಡು ದಿನಗಳ ಅಂತರ ವಿಭಾಗ ಕ್ರೀಡಾಕೂಟವನ್ನು ಸಹ ಏರ್ಪಡಿಸಲಾಗಿತ್ತು. ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು. ಜೂನ್ 30ರಂದು ಮಂಗಳವಾರ ಮಧ್ಯಾಹ್ನ 2.30 ಗಂಟೆಗೆ ಜ್ಞಾನಜ್ಯೋತಿ ಸಭಾಂಗಣದಲ್ಲಿ ಬಿಸಿಯು ಉತ್ಸವದ ಸಮಾರೋಪ ಸಮಾರಂಭ ನೆರವೇರಲಿದೆ. ಕನ್ನಡ ಚಲನಚಿತ್ರ ನಟ ವಿನಯ್‌ರಾಜ್ ಕುಮಾರ್ ಮತ್ತು ನಟಿ ಮೇಘಾ ಶೆಟ್ಟಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು ವಿಶ್ವ ವಿದ್ಯಾನಿಲಯದ ಕುಲಪತಿಗಳಾದ ಪ್ರೊ.ರಮೇಶ್.ಬಿ. ಅಧ್ಯಕ್ಷತೆ ವಹಿಸುವರು. ಕುಲಸಚಿವರಾದ ಎ. ನವೀನ್ ಜೋಸೆಫ್. ಉತ್ಸವದ ಸಂಯೋಜಕ ರಾದ ಕುಲಸಚಿವ (ಮೌಲ್ಯಮಾಪನ) ಪ್ರೊ. ರಮೇಶ .ಬಿ.ಕುಡೇನಟ್ಟಿ, ವಿತ್ತಾಧಿಕಾರಿಗಳಾದ ಎಂ.ವಿ.ವಿಜಯ ಲಕ್ಷ್ಮಿ ಹಾಗೂ ಡೀನರು, ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ಆಹ್ವಾನಿತ ಗಣ್ಯರಾಗಿ ಭಾಗವಹಿಸುವರು.

### ಕೋರ್ಟ್ ಕಲಾಪಗಳು ಸೋಮವಾರಕ್ಕೆ ಮುಂದೂಡಿಕೆ

## ರಾಜ್ಯದ ಹಲವು ಜಿಲ್ಲಾ ನ್ಯಾಯಾಲಯಗಳಿಗೆ ಬಾಂಬ್ ಬೆದರಿಕೆ, ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳದಿಂದ ಪರಿಶೀಲನೆ

**ಬೆಂಗಳೂರು, ಜೂ.27:** ರಾಜ್ಯದ ಕಾನೂನು ಸುವ್ಯವಸ್ಥೆಗೆ ಸವಾಲು ಹಾಕುವಂತೆ ಕೊಡಗು, ಧಾರವಾಡ ಹಾಗೂ ಹಾವೇರಿ ಜಿಲ್ಲಾ ನ್ಯಾಯಾಲಯಗಳಿಗೆ ಅಪರಿಚಿತರಿಂದ ಮತ್ತೊಮ್ಮೆ ಬಾಂಬ್ ಬೆದರಿಕೆ ಕರೆ ಹಾಗೂ ಇಮೇಲ್ ಸಂದೇಶಗಳು ಬಂದಿವೆ. ಸರಣಿ ಬೆದರಿಕೆಗಳಿಂದಾಗಿ ಮೂರೂ ಜಿಲ್ಲೆಗಳ ಕೋರ್ಟ್ ಆವರಣದಲ್ಲಿ ಭಾರೀ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ತೀವ್ರ ಪರಿಶೀಲನೆ ನಡೆಸುತ್ತಿದ್ದಾರೆ.

ಹಾವೇರಿ ಜಿಲ್ಲಾ ನ್ಯಾಯಾಲಯಕ್ಕೆ ಇದು ಎರಡನೇ ಬಾರಿಗೆ ಬಾಂಬ್ ಬೆದರಿಕೆ ಕರೆ ಬಂದಿದೆ. ಕರೆ ಬಂದ ವಿಷಯ ತಿಳಿಯುತ್ತಿದ್ದಂತೆಯೇ ನ್ಯಾಯಾಲಯದ ಕಲಾಪಗಳನ್ನು ತಕ್ಷಣವೇ ಸ್ಥಗಿತಗೊಳಿಸಲಾಯಿತು. ಆತಂಕಗೊಂಡ ವಕೀಲರು, ಕಕ್ಷಿದಾರರು ಹಾಗೂ ನ್ಯಾಯಾಲಯದ ಸಿಬ್ಬಂದಿ ಒಮ್ಮೆಲೇ ಕಟ್ಟಡದಿಂದ ಹೊರಗೆ ಓಡಿಬಂದಿದ್ದಾರೆ. ದುಷ್ಕರ್ಮಿಗಳು ಮಧ್ಯಾಹ್ನ 2:15ಕ್ಕೆ ಬಾಂಬ್ ಸ್ಫೋಟಿಸುವುದಾಗಿ ನಿಖರ ಸಮಯ ಉಲ್ಲೇಖಿಸಿ ಬೆದರಿಕೆ ಹಾಕಿದ್ದರಿಂದ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ.

ಹಾವೇರಿ ನಗರ ಠಾಣೆ ಪೊಲೀಸರು, ಶ್ವಾನದಳ ಮತ್ತು ಬಾಂಬ್ ನಿಷ್ಕ್ರಿಯ ದಳದೊಂದಿಗೆ ಆಗಮಿಸಿ ಕೋರ್ಟ್ ಕಟ್ಟಡ, ಕಚೇರಿಗಳು




ಹಾಗೂ ಪಾರ್ಕಿಂಗ್ ಪ್ರದೇಶ ಸೇರಿದಂತೆ ಪ್ರತಿಯೊಂದು ಮೂಲೆಯನ್ನು ಪರಿಶೀಲಿಸುತ್ತಿದ್ದಾರೆ. ಸಾರ್ವಜನಿಕರ ಪ್ರವೇಶಕ್ಕೆ ಸಂಪೂರ್ಣ ನಿರ್ಬಂಧ ಹೇರಲಾಗಿದ್ದು, ಶನಿವಾರದ ಕಲಾಪಗಳನ್ನು ಸೋಮವಾರಕ್ಕೆ ಮುಂದೂಡಲಾಗಿದೆ. ಈ ಬಗ್ಗೆ ಹಾವೇರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕರೆಯ ಮೂಲ ಪತ್ತೆ ಹಚ್ಚಲಾಗುತ್ತಿದೆ.

ಇತ್ತ ಮಡಿಕೇರಿ ನಗರದ ಹೊರವಲಯದಲ್ಲಿರುವ ಜಿಲ್ಲಾ ನ್ಯಾಯಾಲಯ ಹಾಗೂ ಕೇಂದ್ರೀಯ ವಿದ್ಯಾಲಯಕ್ಕೂ ಅಪರಿಚಿತರಿಂದ ಬಾಂಬ್ ಬೆದರಿಕೆಯ ಇ–ಮೇಲ್ ಬಂದಿದೆ. ಶಾಲೆಯ ಆವರಣದಲ್ಲೇ ಬಾಂಬ್ ಇಡಲಾಗಿದೆ ಎಂಬ ಸಂದೇಶದಿಂದ ಪೋಷಕರು ಮತ್ತು ಶಾಲಾ ಸಿಬ್ಬಂದಿ ಕೆಲಕಾಲ ತೀವ್ರ ಆತಂಕಕ್ಕೆ ಒಳಗಾಗಿದ್ದರು. ಮುಂಜಾಗ್ರತಾ ಕ್ರಮವಾಗಿ ಕೇಂದ್ರೀಯ ವಿದ್ಯಾಲಯದ ವಿದ್ಯಾರ್ಥಿಗಳನ್ನು ತಕ್ಷಣವೇ ಸುರಕ್ಷಿತವಾಗಿ ಅವರ ಮನೆಗಳಿಗೆ ಕಳುಹಿಸಿಕೊಡಲಾಯಿತು. ನಂತರ ಪೊಲೀಸರು ಮತ್ತು ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿ ಶಾಲಾ ಆವರಣ ಹಾಗೂ ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿ ಜಂಟಿಯಾಗಿ ಪೂರ್ಣ ಪ್ರಮಾಣದ ಸರ್ಚ್ ಆಪರೇಷನ್ ನಡೆಸಿದ್ದಾರೆ.

ಧಾರವಾಡ ಜಿಲ್ಲಾ ನ್ಯಾಯಾಲಯಕ್ಕೆ ಕಳೆದ ಎಂಟು ದಿನಗಳ ಅವಧಿಯಲ್ಲಿ ಇದು ಮೂರನೇ ಬಾಂಬ್ ಬೆದರಿಕೆ ಸಂದೇಶವಾಗಿದೆ. ಪ್ರತಿ ಬಾರಿಯೂ ಇ–ಮೇಲ್ ಮುಖಾಂತರವೇ ಬೇರೆ ಬೇರೆ ಹೆಸರುಗಳಲ್ಲಿ ಈ ಬೆದರಿಕೆಗಳನ್ನು ಕಳುಹಿಸಲಾಗುತ್ತಿದೆ. ಈ ಬಾರಿ "ಅನ್ನನಾಥಮ್ ಅರಿಯಪ್ಪನ್" ಎಂಬ ಹೆಸರಿನ ಇ–ಮೇಲ್ ಐಡಿಯಿಂದ ಸಂದೇಶ ರವಾನೆಯಾಗಿದೆ. ಪದೇ ಪದೇ ಇಂತಹ ನಕಲಿ ಕರೆ ಹಾಗೂ ಇಮೇಲ್‌ಗಳ ಮೂಲಕ ಸಾರ್ವಜನಿಕ ಶಾಂತಿ ಕದಡುತ್ತಿರುವ ಕಿಡಿಗೇಡಿಗಳನ್ನು ಬಂಧಿಸಲು ಪೊಲೀಸರು ವಿಶೇಷ ತನಿಖೆ ಕೈಗೊಂಡಿದ್ದಾರೆ.





ಬೆಂಗಳೂರು ಸಮಗ್ರ ಪಟ್ಟಣ ಯೋಜನೆಗಾಗಿ ಫಲವತ್ತಾದ ಕೃಷಿಭೂಮಿಯನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುತ್ತಿರುವ ಕರ್ನಾಟಕ ಸರ್ಕಾರದ ಕ್ರಮವನ್ನು ಪ್ರಶ್ನಿಸಿ, ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ನೇತೃತ್ವದಲ್ಲಿ ಶನಿವಾರ ಬಿಡದಿ ಬಳಿಯ ಬೈರಮಂಗಲದಲ್ಲಿ ರೈತರು ಬೃಹತ್ ಪ್ರತಿಭಟನೆ ನಡೆಸಿದರು.

# ಕುಡಿಯುವ ನೀರಿಗೂ ಹಣ ಇಲ್ಲ: ಬಿ.ಆರ್.ಪಾಟೀಲ್ ಕಳವಳ

**ಕಲಬುರಗಿ, ಜೂ. 27:** ತಾಲೂಕು ಮಟ್ಟದಲ್ಲಿ ಶಾಸಕರು ತ್ವರಿತ ಕಾರ್ಯಪಡೆ ಸಭೆಗಳನ್ನು ನಡೆಸಿ, ಅವರವರ ತಾಲೂಕಿಗೆ ಬೇಕಾದಷ್ಟು ನೀಡಬೇಕಾದ ಅನುದಾನದ ಬೇಡಿಕೆ ಗಳನ್ನು ಜಿಲ್ಲಾಧಿಕಾರಿ ಮೂಲಕ ಸಲ್ಲಿಸಿದ್ದು, ನನ್ನ ಸ್ವಕ್ಷೇತ್ರ ಆಳಂದ ತಾಲ್ಲೂಕಿನ ಕುಡಿಯುವ ನೀರಿಗೆ ಕಾರ್ಯಪಡೆಯಿಂದ 4.40 ಲಕ್ಷ ರೂ. ಕ್ರಿಯಾ ಯೋಜನೆ ಸಲ್ಲಿಸಿದ್ದು, ಕೇವಲ 45 ಲಕ್ಷ ರೂ. ಬಿಡುಗಡೆ ಮಾಡಿದ್ದು, ಯಾವುದಕ್ಕೂ ಸಾಲುತ್ತಿಲ್ಲ ಎಂದು ಜಿಲ್ಲೆಯ ಶಾಸಕರೂ ಆದ, ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ. ಆರ್.ಪಾಟೀಲ್ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾಧಿಕಾರಿ ಖಾತೆಯಲ್ಲಿ 175 ಕೋಟಿ ರೂ. ಲಭ್ಯವಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವರು ಹೇಳಿದ್ದಾರೆ. ಆದರೆ ಸರ್ಕಾರ ಬರ ಘೋಷಣೆ ಮಾಡಿದ ನಂತರವೇ ಈ ನಿಧಿಯನ್ನು ಬಳಸಲು ಸಾಧ್ಯವಿದೆ. ಪ್ರಸ್ತುತ ಆಳಂದ ಕ್ಷೇತ್ರದ ಬಹುತೇಕ ಗ್ರಾಮ ಪಂಚಾಯಿತಿಗಳಲ್ಲಿ ನಿತ್ಯ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಹಣವೇ ಇಲ್ಲ. ಪ್ರತಿ ಪಂಚಾಯಿತಿಗಳಿಗೆ ಕುಡಿಯುವ ನೀರಿನ ನಿರ್ವಹಣೆಗೆ ಕನಿಷ್ಠ ಐದು ಲಕ್ಷ ರೂ. ನೀಡದಿದ್ದರೆ ಸಮಸ್ಯೆ ಗಂಭೀರವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಮಸ್ಯೆ ಹೀಗೆ ಮುಂದುವರಿದರೆ ಪಂಚಾಯಿತಿ ಪಿಡಿಓಗಳು, ಶಾಸಕರು ಜನರಿಗೆ ಸಮರ್ಪಕ ಉತ್ತರ ನೀಡಲು ಅಸಾಧ್ಯವಾಗಲಿದೆ. ನೀರಿನ ಜತೆಗೆ



ಜಾನುವಾರು ಮೇವು ಲಭ್ಯತೆ ಖಚಿತ ಪಡಿಸಿಕೊಂಡು, ಪರ್ಯಾಯ ಮಾರ್ಗಗಳನ್ನು ಹುಡುಕಿಕೊಳ್ಳಬೇಕು. ಕೇಂದ್ರ ಸರ್ಕಾರದ ವಿಬಿ ಜಿ ರಾಮ್ ಜಿ ಪಾಲುದಾರಿಕೆಯಲ್ಲಿ ಶೇ.300ದಷ್ಟು ರಾಜ್ಯಸರ್ಕಾರ ಪಾಲು ಹೆಚ್ಚಿಸಿದ್ದು, ಸಂಪನ್ಮೂಲವನ್ನು ರಾಜ್ಯ ಸರ್ಕಾರ ಒದಗಿಸಬೇಕು. ನಿರುದ್ಯೋಗಿ ಕಾರ್ಮಿಕ ವರ್ಗದವರಿಗೆ ಕೆಲಸ ನೀಡಿ, ವಲಸೆ ತಡೆಯಬೇಕು ಎಂದು ಹೇಳಿದರು.

3 ಟಿಎಂಸಿ ನೀರು ಬಿಡಲಿ: ನಾರಾಯಣಪುರ ಅಣೆಕಟ್ಟೆಯಿಂದ ಈಗಾಗಲೇ ಒಂದು ಟಿಎಂಸಿ ನೀರು ಬಿಡುಗಡೆ ಮಾಡಿದ್ದು, ಭೀಮಾ ಅಚ್ಚುಕಟ್ಟು ಪ್ರದೇಶ, ಕಲಬುರಗಿ ಮಹಾನಗರಕ್ಕೆ ಒದಗಿಸುವ ನೀರು ಪೂರೈಸಲು ಇನ್ನೂ ಮೂರು ಟಿಎಂಸಿ ನೀರು ತುರ್ತಾಗಿ ನಾರಾಯಣಪುರದಿಂದ ಬಿಡುಗಡೆ ಮಾಡಬೇಕು ಎಂದು ಕೋರಿದ್ದಾರೆ. ಎಲ್‌ನಿನೋ ಪರಿಣಾಮ ದಿಂದ ಭೀಕರ ಬರ ಆವರಿಸಿದ್ದು, ಕೇಂದ್ರ ಸಚಿವರ ಹೇಳಿಕೆಯಂತೆ 360ಕ್ಕಿಂತ ಹೆಚ್ಚು ಜಿಲ್ಲೆಗಳಲ್ಲಿ ಬರದ ಮುನ್ಸೂಚನೆ ನೀಡಿದ್ದು, ಈ ಬಗ್ಗೆ ರಾಜ್ಯ ಸರ್ಕಾರ ಮುಂದಾಲೋಚನೆ ಯಿಂದ ತ್ವರಿತ ಕ್ರಮ ಕೈಗೊಳ್ಳಲು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು. ವಾಡಿಕೆಯಂತೆ ಮಳೆ ಬಿದ್ದು, ಬಿತ್ತನೆ ಆರಂಭವಾಗಬೇಕಿತ್ತು. ಮಳೆ ಕೊರತೆಯಿಂದ ಬಿತ್ತನೆ ಆಗಿಲ್ಲ ಎಂದು ಹೇಳಿದರು.

ಬೆಳೆವಿಮೆ ಪರಿಹಾರ ಪಾವತಿಸಲಿಬರದ ಹಿನ್ನೆಲೆಯಲ್ಲಿ ವೈಜ್ಞಾನಿಕವಾಗಿ ಬೆಳೆವಿಮೆ ಮಾಡಿಸುವಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು. ಕಳೆದ ವರ್ಷ ಬೆಳೆವಿಮೆ ನಮ್ಮ ಜಿಲ್ಲೆಗೆ 780 ಕೋಟಿ ರೂ. ಮಂಜೂರಾಗಿದ್ದು, ಅದರ ಮಧ್ಯಂತರ ಪರಿಹಾರ 240 ಕೋಟಿ ಬಿಡುಗಡೆ ಮಾಡಲಾಗಿದೆ. ಬಾಕಿ ಉಳಿದ 340 ಕೋಟಿ ರೂ. ಬೆಳೆ ವಿಮೆ ತಕ್ಷಣ ರೈತರಿಗೆ ಪಾವತಿಸಬೇಕು ಎಂದು ಬಿ. ಆರ್.ಪಾಟೀಲ್ ಆಗ್ರಹಿಸಿದರು.

### ಜೂನ್ ೩೦ರೊಳಗೆ ಕೋರ್ಟ್‌ಗೆ ಒಪ್ಪಿಸುವಂತೆ ಖಡಕ್ ಆದೇಶ

## ತಡೆಯಾಜ್ಞೆ ಉಲ್ಲಂಘನೆ: ವಿಠಲ್‌ಗೌಡಗೆ ಬಂಧನ ವಾರಂಟ್

**ಮಂಗಳೂರು, ಜೂ,27:** ಶ್ರೀಕ್ಷೇತ್ರ ಧರ್ಮಸ್ಥಳ ಮತ್ತು ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ಗಳನ್ನು ನೀಡದಂತೆ ನ್ಯಾಯಾಲಯ ನೀಡಿದ್ದ ತಡೆಯಾಜ್ಞೆಯನ್ನು ಉಲ್ಲಂಘಿಸಿದ ಆರೋಪದ ಮೇಲೆ ವಿಠ್ಠಲ್ ಗೌಡನಿಗೆ ಬೆಂಗಳೂರಿನ ನ್ಯಾಯಾಲಯವು ಬಂಧನ ವಾರಂಟ್ ಜಾರಿಗೊಳಿಸಿದೆ. ನ್ಯಾಯಾಂಗ ನಿಂದನೆ ಪ್ರಕರಣದಡಿಯಲ್ಲಿ ಈ ಕಟ್ಟುನಿಟ್ಟಿನ ಆದೇಶ ನೀಡಿದ್ದು, ಸದ್ಯ ವಿಠ್ಠಲ್ ಗೌಡ ಪತ್ತೆಗಾಗಿ ಪೊಲೀಸರು ಹಾಗೂ ಕೋರ್ಟ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಬೆಂಗಳೂರಿನ 6ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯವು ಈ ಬಂಧನ ವಾರಂಟ್ ಅನ್ನು ಜಾರಿಗೊಳಿಸಿದೆ. ಜೂನ್ 8 ರಂದೇ ಈ ವಾರಂಟ್ ಜಾರಿಯಾಗಿದ್ದು, ಮುಂಬರುವ ಜೂನ್ 30 ರೊಳಗೆ ವಿಠ್ಠಲ್ ಗೌಡನನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ಆದೇಶ ನೀಡಲಾಗಿದೆ. ನ್ಯಾಯಾಲಯದ ಅರೆಸ್ಟ್ ವಾರಂಟ್ ಕೈಸೇರುತ್ತಿದ್ದಂತೆ ವಿಠ್ಠಲ್ ಗೌಡ ಕಾನೂನು ಕ್ರಮಕ್ಕೆ ಹೆದರಿ ತಲೆಮರೆಸಿಕೊಂಡಿರುವ ಸಾಧ್ಯತೆ ದಟ್ಟವಾಗಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ಆಗಮಿಸಿರುವ



ಕೋರ್ಟ್ ಅಧಿಕಾರಿಗಳು ದಕ್ಷಿಣ ಕನ್ನಡ ಜಿಲ್ಲೆಯ ಸ್ಥಳೀಯ ಪೊಲೀಸರ ಸಹಕಾರದೊಂದಿಗೆ ತೀವ್ರ ಹುಡುಕಾಟ ಆರಂಭಿಸಿದ್ದಾರೆ. ಬೆಳ್ತಂಗಡಿ ಮತ್ತು ಧರ್ಮಸ್ಥಳ ಭಾಗದ ವಿವಿಧೆಡೆ ಅಧಿಕಾರಿಗಳ ತಂಡ ಬೀಡುಬಿಟ್ಟಿದ್ದು, ಶೋಧ ಕಾರ್ಯ ಚುರುಕುಗೊಳಿಸಿದೆ. ವಿಠ್ಠಲ್ ಗೌಡನ ಸ್ವಗೃಹ ಆತನ ಸಹೋದರಿ ಕುಸುಮಾವತಿ ಅವರ ನಿವಾಸ ಹಾಗೂ ಪ್ರಮುಖವಾಗಿ ಮಹೇಶ್ ಶೆಟ್ಟಿ ತಿಮರೋಡಿ ಅವರ ನಿವಾಸದಲ್ಲಿಯೂ ಪೊಲೀಸರು ತಪಾಸಣೆ ನಡೆಸಿದ್ದಾರೆ.

ಶ್ರೀಕ್ಷೇತ್ರ ಧರ್ಮಸ್ಥಳ ಹಾಗೂ ವೀರೇಂದ್ರ ಹೆಗ್ಗಡೆ ಅವರ ಘನತೆ ಮತ್ತು ಗೌರವಕ್ಕೆ ಧಕ್ಕೆ ತರುವಂತಹ ಯಾವುದೇ ಅವಹೇಳನಕಾರಿ ಹಾಗೂ ಆಧಾರರಹಿತ ಹೇಳಿಕೆಗಳನ್ನು ನೀಡಬಾರದು ಎಂದು ಈ ಹಿಂದೆ ನ್ಯಾಯಾಲಯವು ತಡೆಯಾಜ್ಞೆ ನೀಡಿ ಆದೇಶಿಸಿತ್ತು. ಆದರೆ, ವಿಠ್ಠಲ್ ಗೌಡ ನ್ಯಾಯಾಲಯದ ಅಧಿಕೃತ ಆದೇಶವನ್ನು ಬಹಿರಂಗವಾಗಿ ಉಲ್ಲಂಘಿಸಿ, ನಿಯಮಾವಳಿಗಳನ್ನು ಗಾಳಿಗೆ ತೂರಿ ಮತ್ತೆ ಅವಹೇಳಕಾರಿ ಹೇಳಿಕೆಯನ್ನು ನೀಡುವುದನ್ನು ಮುಂದುವರಿಸಿದ್ದ ಎನ್ನಲಾಗಿದೆ.

ಕೋರ್ಟ್ ಆದೇಶವನ್ನು ಉಲ್ಲಂಘಿಸಿದ ಈ ವರ್ತನೆಯನ್ನು ಗಂಭೀರವಾಗಿ ಪರಿಗಣಿಸಿದ ನ್ಯಾಯಾಲಯವು, ಸ್ವಯಂಪ್ರೇರಿತವಾಗಿ ನ್ಯಾಯಾಂಗ ನಿಂದನೆ ಅಡಿಯಲ್ಲಿ ಆತನನ್ನು ಬಂಧಿಸಿ ಜೂನ್ 30 ರೊಳಗೆ ಕೋರ್ಟ್‌ಗೆ ಒಪ್ಪಿಸುವಂತೆ ಖಡಕ್ ಆದೇಶ ಹೊರಡಿಸಿದೆ.

## ಜುಲೈ 1ರಿಂದ ವಿಬಿಜಿ–ರಾಮ್ ಜಿ ಯೋಜನೆ ಜಾರಿಗೆ ಸಜ್ಜಾಗಲು ಈಶ್ವರ್ ಖಂಡ್ರೆ ಸೂಚನೆ




**ಬೀದರ್, ಜೂ. 27:** ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಜು.1ರಿಂದ ವಿಬಿಜಿ–ರಾಮ್ ಜಿ ಎಂಬ ಹೊಸ ರೂಪದಲ್ಲಿ ಜಾರಿಗೊಳಿಸಲು ಸಜ್ಜಾಗಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ.ಖಂಡ್ರೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ತುರ್ತು ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, 'ಬೀದರ್ ಜಿಲ್ಲೆಯಲ್ಲಿ ಮುಂಗಾರು ಮಳೆ ಕೊರತೆಯಾಗಿದೆ. ಬರುವ ದಿನಗಳಲ್ಲಿ ಉದ್ಯೋಗಕ್ಕೆ ಬೇಡಿಕೆ ಹೆಚ್ಚಾಗುತ್ತದೆ. ಜುಲೈ 1ರಿಂದ ಹೊಸ ಯೋಜನೆ ಜಾರಿ ಮಾಡಬೇಕಾಗಿದ್ದು, ಇದಕ್ಕೆ ಸಿದ್ಧರಾಗಬೇಕು.

ಮಳೆಯ ಕೊರತೆಯಿಂದ ಆತಂಕಕ್ಕೀಡಾಗಿರುವ ಅನ್ನದಾತರಿಗೆ ತೊಂದರೆ ಆಗದಂತೆ ಬಿತ್ತನೆಬೀಜ ಮತ್ತು ರಸಗೊಬ್ಬರ ಪೂರೈಕೆಗೆ ಎಲ್ಲ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ ಅವರು; ಕೃಷಿ ಅಧಿಕಾರಿಗಳು ರೈತರಿಗೆ ಮಳೆಯ ಕೊರತೆಯಾದಾಗ ಯಾವ ಬೆಳೆ ಬೆಳೆಯಬೇಕು ಎಂಬುದರ ಮಾರ್ಗದರ್ಶನ ಮಾಡಬೇಕು.

ಕುಡಿಯುವ ನೀರಿಗೆ ಹಣದ ಕೊರತೆ ಇಲ್ಲ: ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದ್ದು, ಖಾಸಗಿ ಬಾವಿಗಳು, ಕೊಳವೆಬಾವಿ ಸೇರಿದಂತೆ ಪರ್ಯಾಯ ಜಲಮೂಲಗಳನ್ನು ಗುರುತಿಸಿ, ಟ್ಯಾಂಕರ್ ಮಾಲೀಕರೊಂದಿಗೆ ಮಾತನಾಡಿ, ನೀರಿನ ಲಭ್ಯತೆ ಖಚಿತಪಡಿಸಿಕೊಳ್ಳಬೇಕು.

ನೀರಿನ ಗುಣಮಟ್ಟ ಪರೀಕ್ಷೆ ಮಾಡಿ ಬಾವಿಗಳ ಮಾಲೀಕರೊಂದಿಗೆ ಒಡಂಬಡಿಕೆ ಮಾಡಿಕೊಂಡು ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ರೈತರ ಹಿತಾಸಕ್ತಿ, ಕುಡಿಯುವ ನೀರಿನ ಲಭ್ಯತೆ ಹಾಗೂ ಗ್ರಾಮೀಣ ಅಭಿವೃದ್ಧಿ ಯೋಜನೆಗಳ ಸಮರ್ಪಕ ಅನುಷ್ಠಾನವನ್ನು ಸಮರ್ಪಕವಾಗಿ ನಿರ್ವಹಿಸಬೇಕು.

ಮಳೆ ಕೊರತೆಯ ಸಂಕಷ್ಟದ ಸಮಯದಲ್ಲಿ ರೈತರ ಮತ್ತು ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

## ಪ್ರೇಯಸಿಗೆ ಇರಿದು ಕಾರು ಸ್ಫೋಟಿಸಿದ ಯುವಕನ ಸಜೀವ ದಹನ ಯುವತಿ, ಕಾರು ಚಾಲಕ ಪ್ರಾಣಾಪಾಯದಿಂದ ಪಾರು

**ತುಮಕೂರು, ಜೂ.27:** ಕಾರಿನಲ್ಲಿ ನಾಡಬಾಂಬ್ ಸ್ಫೋಟಿಸಿಕೊಂಡು ಯುವಕ ಆತ್ಮಹತ್ಯೆ ಮಾಡಿಕೊಂಡಿರುವಂತ ಘಟನೆ ಜಿಲ್ಲೆಯ ಶಿರಾ ತಾಲೂಕಿನ ಕಳ್ಳಂಬೆಳ್ಳ ಬಳಿ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಶನಿವಾರ ಮಧ್ಯಾಹ್ನ ನಡೆದಿದೆ. ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಮೂಲದ ನಾಗೇಂದ್ರ (30) ಮೃತ. ಇನ್ನು ಈ ದುರಂತದಲ್ಲಿ ಅಪಹರಣಕ್ಕೊಳಗಾಗಿದ್ದ ಯುವತಿ ಹಾಗೂ ಕಾರು ಚಾಲಕ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ದುರಂತ ನಡೆದ ಸ್ಥಳದಲ್ಲಿ ಪರಿಶೀಲನೆ ವೇಳೆ ಪೊಲೀಸರಿಗೆ ಮತ್ತೊಂದು ಸಜೀವ ಬಾಂಬ್ ಪತ್ತೆ ಆಗಿದೆ.

ರಮ್ಯಾ ಹಾಗೂ ನಾಗೇಂದ್ರ ಇಬ್ಬರು ಅಂಕೋಲ ಮೂಲದವರು. ಬೆಂಗಳೂರಿನ ರಾಜೀವ್ ಗಾಂಧಿ ಆಸ್ಪತ್ರೆಯಲ್ಲಿ ರಮ್ಯಾ ಲ್ಯಾಬ್ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದರೆ, ನಾಗೇಂದ್ರ ಡೆಲಿವರಿ ಬಾಯ್ ಆಗಿದ್ದ. ಇಬ್ಬರು ಕಳೆದ ಏಳೆಂಟು ವರ್ಷದಿಂದ ಪರಸ್ಪರ ಪ್ರೀತಿಸುತ್ತಿದ್ದರು. ಆದರೆ ಮದುವೆ ವಿಚಾರವಾಗಿ ಇಬ್ಬರ ನಡುವೆ ಭಿನ್ನಾಭಿಪ್ರಾಯ ಮೂಡಿದ್ದು, ರಮ್ಯಾ ಮದುವೆಗೆ ನಿರಾಕರಿಸಿದ್ದಳು. ಇದರಿಂದ ಕೋಪಗೊಂಡಿದ್ದ ನಾಗೇಂದ್ರ, ಬಾಡಿಗೆ ಕಾರನ್ನು ಮಾಡಿಕೊಂಡು, ರಮ್ಯಾ ತಂಗಿದ್ದ ಬೆಂಗಳೂರಿನ ಪಿಜಿ ಬಳಿ ತೆರಳಿ ಆಕೆಯನ್ನು ಬಲವಂತವಾಗಿ ಅಪಹರಿಸಿದ್ದ. ನಾಗೇಂದ್ರ ಪ್ಲ್ಯಾನ್ ಮಾಡಿ ನಾಡಬಾಂಬ್ ತಯಾರಿಸಿಕೊಂಡು ತಂದಿದ್ದ ಎಂಬ ಮಾಹಿತಿ ಇದೆ. ರಮ್ಯಾ ನಾಪತ್ತೆ ಕುರಿತು ಆಕೆಯ ಸ್ನೇಹಿತೆ ತಕ್ಷಣವೇ ಬೆಂಗಳೂರಿನ ಸಿದ್ದಾಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾಳೆ.

### ಸುಟ್ಟುಕರಕಲಾದ ಕಾರು: ಚಾಲಕನ ಅಳಲು

ಉಬರ್‌ನಲ್ಲಿ ನಾಗೇಂದ್ರ ಹೆಸರಿನಲ್ಲಿ ಕಾರ್ ಬುಕ್ ಆಗಿತ್ತು. ಬೆಳಿಗ್ಗೆ 11 ಗಂಟೆಗೆ ಜಯನಗರದಲ್ಲಿ ಇಬ್ಬರು ಒಟ್ಟಿಗೆ ಕಾರು ಹತ್ತಿದರು. ಕಳ್ಳಂಬೆಳ್ಳವರೆಗೂ ಯಾವುದೇ ಸಮಸ್ಯೆ ಇರಲಿಲ್ಲ. ಜೊತೆಗೆ ಅಂಕೋಲಾದಿಂದ ನನಗೆ ಕರೆ ಬಂದಿದ್ದು, ಇದು ಅಪಹರಣ ಅಂತ ಪೊಲೀಸರು ಮಾಹಿತಿ ಕೊಟ್ಟಿದ್ದರು. ಬಳಿಕ ಇಬ್ಬರ ನಡುವೆ ಗಲಾಟೆ ಆಗಿದೆ. ಆತ ಚಾಕುವಿನಿಂದ ಆಕೆಗೆ ಚುಚ್ಚಿದ್ದಾನೆ. ಆಗ ನಾನು ಕಾರು ರಸ್ತೆಪಕ್ಕ ನಿಲ್ಲಿಸಿದೆ. ಯುವತಿ ರಕ್ಷಿಸುವುದು ನನ್ನ ಮೊದಲ ಆದ್ಯತೆ ಆಗಿತ್ತು. ಹೀಗಾಗಿ ರಕ್ಷಣೆ ಮಾಡಿ ಹೋಗುತ್ತಿದ್ದ ಬೈಕ್‌ಗೆ ಹತ್ತಿಸಿದೆ. ಈ ವೇಳೆ ಕಾರಿನಲ್ಲಿ ಬಾಂಬ್ ಇದೆ ಎಂದು ಹೇಳಿದ್ದಾಳೆ ಎಂದರು. ನಂತರ ನಾನು ಕಾರು ಹತ್ತಿರ ಹೋದಾಗ ಯುವಕ ಒಂದು ಬಾಂಬ್ ಕೈನಲ್ಲಿ ಹಿಡಿದಿದ್ದ. ನಾನು ಅದನ್ನ ಕಿತ್ತು ಎಸೆದೆ. ನಂತರ ಮತ್ತೊಂದು ಬಾಂಬ್‌ಗೆ ಬೆಂಕಿ ಹಚ್ಚಲು ಮುಂದಾಗಿದ್ದು, ಆಗ ನಾನು ಅಲ್ಲಿಂದ ಓಡಿದೆ. ನಂತರ ಕಾರ್‌ಸ್ಫೋಟಗೊಂಡಿದೆ. ನನ್ನ ಹೆಂಡತಿಯ ಒಡವೆ ಅಡವಿಟ್ಟು ಕಾರು ಖರೀದಿ ಮಾಡಿದ್ದೇನೆ ಎಂದು ಕಾರು ಚಾಲಕ ಪ್ರವೀಣ್ ಅಳಲು ತೋಡಿಕೊಂಡಿದ್ದಾರೆ. ಬೆಂಗಳೂರಿನಿಂದ ಪರಿಶೀಲನಾ ತಂಡ ಆಗಮಿಸುತ್ತಿದೆ. ಘಟನೆಗೆ ಸಂಬಂಧಿಸಿದಂತೆ ಸಿದ್ದಾಪುರ ಮತ್ತು ಕಳ್ಳಂಬೆಳ್ಳ ಪೊಲೀಸರು ಜಂಟಿ ತನಿಖೆ ಮುಂದುವರಿಸಿದ್ದಾರೆ.

## ಸ್ವಯಂಪ್ರೇರಿತ ರಕ್ತದಾನ ಶಿಬಿರ ರಕ್ತದಾನಿಗಳಿಗೆ ಸನ್ಮಾನ



**ಬಳ್ಳಾರಿ ,ಜೂ.27.**ರಕ್ತದಾನದ ಮೂಲಕ ಅನೇಕ ಅಮೂಲ್ಯ ಜೀವಗಳನ್ನು ರಕ್ಷಿಸಬಹುದೆಂಬ ಸಂದೇಶವನ್ನು ಸಾರಲಿದ್ದು, ಆರೋಗ್ಯ ವಂತರು ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿ ಕೊಳ್ಳುವಂತೆ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಖಜಾಂಚಿ ಗಳಾದ ಶ್ರೀ ಪೋಲಾ ರಾಧಾಕೃಷ್ಣ ರವರು ಹೇಳಿದ್ದಾರೆ.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಬಳ್ಳಾರಿ ಜಿಲ್ಲಾ ಶಾಖೆ ಹಾಗೂ ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್ ,ಬಳ್ಳಾರಿ ಇವರ ಸಹಯೋಗದೊಂದಿಗೆ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಹಾಗೂ ಸ್ವಯಂ ಪ್ರೇರಿತ ರಕ್ತದಾನಿಗಳಿಗೆ ಸನ್ಮಾನ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದರು.

ಸಮಾಜದಲ್ಲಿ ಸ್ವಯಂ ಪ್ರೇರಿತ ರಕ್ತದಾನದ ಮಹತ್ವ , ಯುವಜನರ ಸಾಮಾಜಿಕ ಹೊಣೆಗಾರಿಕೆ ,ಮಾನವೀಯ ಮೌಲ್ಯಗಳ ಬೆಳವಣಿಗೆ ಹಾಗೂ ಜೀವ ಉಳಿಸುವ ಈ ಮಹತ್ತರ ಸೇವೆಯಲ್ಲಿ ಪ್ರತಿಯೊಬ್ಬ ನಾಗರೀಕನ ಪಾತ್ರದ ಕುರಿತು ತಮ್ಮ ಅಮೂಲ್ಯ ವಿಚಾರಗಳನ್ನು ಕಾರ್ಯಕ್ರಮವನ್ನು ಉದ್ಘಾಟಿಸಿ ಪ್ರೇರಣಾದಾಯಕ ಮಾತುಗಳನ್ನಾಡಿದರು.

ಅಧ್ಯಕ್ಷೀಯ ಭಾಷಣದಲ್ಲಿ ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್ ನ ಉಪಾಧ್ಯಕ್ಷರಾದ ಜಿತೇಂದ್ರ ಪ್ರಸಾದ್, ರವರು ರಕ್ತದಾನದ ಆರೋಗ್ಯಕರ ಮಹತ್ವ ,ತುರ್ತು ಸಂದರ್ಭಗಳಲ್ಲಿ ರಕ್ತದ ಅವಶ್ಯಕತೆ ಹಾಗೂ ನಿಯಮಿತ ರಕ್ತದಾನದ ಮೂಲಕ ಅನೇಕ ಜೀವಗಳನ್ನು ಉಳಿಸುವ ಸಾಧ್ಯತೆ ಕುರಿತು ವೇದಿಕೆಗೆ ವಿವರಿಸಿದರು.

ಡಾ. ನಾಗರಾಜ್ ರವರು ಸಮಾಜದಲ್ಲಿ ಸೇವಾ ಮನೋಭಾವವನ್ನು ಬೆಳೆಸುವ ಅಗತ್ಯ,ರಕ್ತದಾನದಂತಹ ಮಾನವೀಯ ಕಾರ್ಯಗಳಲ್ಲಿ ಪ್ರತಿಯೊಬ್ಬರೂ ಸಕ್ರಿಯವಾಗಿ ಭಾಗ ವಹಿಸಿ, ಸಮಾಜದ ಒಳಿತಿಗಾಗಿ ಎಲ್ಲರೂ ಕೈಜೋಡಿಸುವಂತೆ ಕರೆ ನೀಡಿದರು.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ವನ್ನು ಯಶಸ್ವಿಗೊಳಿಸುವುದರ ಜೊತೆಗೆ, ರಕ್ತದಾನ ಮಾಡಿ ಜೀವ ಉಳಿಸುವ ಮಹತ್ಕಾರ್ಯದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿ ಗೊಳಿಸಿದರು.

## ಹೋಟೆಲ್ ಮ್ಯಾನೇಜ್‌ಮೆಂಟ್‌ನ ನೂತನ ಕೋರ್ಸ್‌ಗಳಿಗೆ ಚಾಲನೆ ನೀಡಿದ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ

**ಹುಬ್ಬಳ್ಳಿ ಜೂ.27.**ಉತ್ತರ ಕರ್ನಾಟಕದ ವಿದ್ಯಾರ್ಥಿಗಳಿಗೆ ಈಗ ಹುಬ್ಬಳ್ಳಿಯಲ್ಲೇ ಬೆಂಗಳೂರು, ಗೋವಾ, ಮುಂಬೈ ಹಾಗೂ ಹೈದರಾಬಾದ್‌ಗೆ ಸಮಾನ ಗುಣಮಟ್ಟದ ಕಾನೂನು ಮತ್ತು ಆತಿಥ್ಯ ಶಿಕ್ಷಣವನ್ನು ನೀಡಲಿದೆ.

ಡಾ. ಪ್ರಭಾಕರ ಕೋರೆ ಅವರ ದೂರದರ್ಶಿ ಮಾರ್ಗದರ್ಶನದಲ್ಲಿ ಹಾಗೂ ಪ್ರೊ–ಚಾನ್ಸಲರ್ ಡಾ. ಅಶೋಕ್ ಶೆಟ್ಟರ್ ಮತ್ತು ಕುಲಪತಿ ಡಾ. ಪ್ರಕಾಶ್ ತೇವಾರಿ ಅವರ ಸಮರ್ಥ ನಾಯಕತ್ವದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯವು ಎಂಜಿನಿಯರಿಂಗ್, ಮ್ಯಾನೇಜ್‌ಮೆಂಟ್, ಕಂಪ್ಯೂಟರ್ ಅಪ್ಲಿಕೇಶನ್ಸ್, ಫ್ಯಾಷನ್ ಡಿಸೈನಿಂಗ್ ಹಾಗೂ ವಾಣಿಜ್ಯ ಶಿಕ್ಷಣ ಕ್ಷೇತ್ರಗಳಲ್ಲಿ ತನ್ನದೇ ಆದ ವಿಶಿಷ್ಟ ಸ್ಥಾನವನ್ನು ಗಳಿಸಿದೆ. ವಿಶ್ವವಿದ್ಯಾಲಯವು ಬೆಂಗಳೂರು ಹಾಗೂ ಬೆಳಗಾವಿಯಲ್ಲಿ ಎರಡು ಆಫ್–ಕ್ಯಾಂಪಸ್ ಕೇಂದ್ರಗಳನ್ನು ಯಶಸ್ವಿಯಾಗಿ ನಡೆಸುತ್ತಿದ್ದು, ಕರ್ನಾಟಕದಾದ್ಯಂತ ತನ್ನ ಶೈಕ್ಷಣಿಕ ಸೇವೆಯನ್ನು ವಿಸ್ತರಿಸಿದೆ.



ಉತ್ತರ ಕರ್ನಾಟಕದಲ್ಲಿ ಗುಣ ಮಟ್ಟದ ಕಾನೂನು ಶಿಕ್ಷಣ ಹಾಗೂ ಆತಿಥ್ಯ ನಿರ್ವಹಣಾ ಕ್ಷೇತ್ರದಲ್ಲಿ ಪರಿಣತ ವೃತ್ತಿಪರರ ಅಗತ್ಯವನ್ನು ಮನಗಂಡು, ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯವು 202627ನೇ ಶೈಕ್ಷಣಿಕ ವರ್ಷದಿಂದ ಹುಬ್ಬಳ್ಳಿಯ ಗೋಕುಲ ಕ್ಯಾಂಪಸ್‌ನಲ್ಲಿ ನಾಲ್ಕು ನೂತನ ಕೋರ್ಸ್‌ಗಳನ್ನು ಆರಂಭಿಸುತ್ತಿದೆ. ಈ ಕೋರ್ಸ್‌ಗಳಿಗಾಗಿ ಗೋಕುಲ ಕ್ಯಾಂಪಸ್‌ನಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಸ್ಕೂಲ್ ಆಫ್ ಲೀಗಲ್ ಸ್ಟಡೀಸ್ ವಿಭಾಗದಲ್ಲಿ ಸುಸಜ್ಜಿತ ಮೂಟ್ ಕೋರ್ಟ್, ಆಧುನಿಕ ತರಗತಿ ಕೊಠಡಿಗಳು ಹಾಗೂ ಸಮೃದ್ಧ ಗ್ರಂಥಾಲಯವನ್ನು ನಿರ್ಮಿಸಲಾಗಿದೆ. ಅದೇ ರೀತಿ ಹೋಟೆಲ್ ಮ್ಯಾನೇಜ್‌ಮೆಂಟ್ ವಿಭಾಗದಲ್ಲಿ ಅತ್ಯಾಧುನಿಕ ಟ್ರೈನಿಂಗ್ ಕಿಚನ್ ಸೇರಿದಂತೆ ಕೈಗಾರಿಕಾ ಅವಶ್ಯಕತೆಗಳಿಗೆ ಅನುಗುಣವಾದ ತರಬೇತಿ ಸೌಲಭ್ಯಗಳನ್ನು ಒದಗಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಹಾಗೂ ಉದ್ಯಮಮುಖಿ ಶಿಕ್ಷಣ ದೊರೆಯಲಿದೆ.


ಇಲ್ಲಿಯವರೆಗೆ ಉತ್ತರ ಕರ್ನಾಟಕದ ವಿದ್ಯಾರ್ಥಿಗಳು ಕಾನೂನು ಹಾಗೂ ಹೋಟೆಲ್ ಮ್ಯಾನೇಜ್‌ಮೆಂಟ್ ಶಿಕ್ಷಣಕ್ಕಾಗಿ ಗೋವಾ, ಬೆಂಗಳೂರು, ಮುಂಬೈ ಮತ್ತು ಹೈದರಾಬಾದ್‌ನಂತಹ ಮಹಾನಗರಗಳಿಗೆ ತೆರಳಬೇಕಾಗುತ್ತಿತ್ತು. ಈಗ ಅದೇ ಮಟ್ಟದ ಪಠ್ಯಕ್ರಮ, ಗುಣಮಟ್ಟದ ಬೋಧನೆ ಹಾಗೂ ಅತ್ಯಾಧುನಿಕ ಸೌಲಭ್ಯಗಳನ್ನು ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯವು ಹುಬ್ಬಳ್ಳಿ ಯಲ್ಲೇ ಒದಗಿಸುತ್ತಿದ್ದು, ಕಡಿಮೆ ವೆಚ್ಚದಲ್ಲಿ, ತಮ್ಮ ಮನೆಯ ಸಮೀಪದಲ್ಲೇ ವಿಶ್ವಮಟ್ಟದ ಶಿಕ್ಷಣವನ್ನು ಪಡೆಯುವ ಅವಕಾಶವನ್ನು ವಿದ್ಯಾರ್ಥಿ ಗಳಿಗೆ ಕಲ್ಪಿಸಿದೆ ಎಂದು ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯದ ಬ್ರ್ಯಾಂಡಿಂಗ್ ಮತ್ತು ಮಾರ್ಕೆಟಿಂಗ್ ನಿರ್ದೇಶಕರಾದ ಎಂ. ಎಸ್. ಕೊಲ್ಹಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2026–27ನೇ ಸಾಲಿನ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದೆ.ಹೆಚ್ಚಿನ ಮಾಹಿತಿಗಾಗಿ ಬಿ.ವಿ. ಭೂಮರಡ್ಡಿ ಕ್ಯಾಂಪಸ್, ವಿದ್ಯಾನಗರ, ಹುಬ್ಬಳ್ಳಿ, ಗೋಕುಲ ಕ್ಯಾಂಪಸ್, ಹುಬ್ಬಳ್ಳಿ 91085 41920 ಅಥವಾ www.kletech.ac.in.

### ಬಳ್ಳಾರಿಯಲ್ಲಿ ಕೆಂಪೇಗೌಡ ಜಯಂತಿ ಆಚರಣೆ

## ಮಹನೀಯರ ಆದರ್ಶಗಳು ಇಂದಿನ ತಲೆಮಾರಿಗೆ ದಾರಿದೀಪ: ಮೇಯರ್ ಗಾದೆಪ್ಪ

**ಬಳ್ಳಾರಿ,ಜೂ.27.**ನಾಡಿನ ಏಳಿಗೆಗಾಗಿ ಶ್ರಮಿಸಿದ ಎಲ್ಲಾ ಮಹನೀಯರ ಜಯಂತಿಗಳನ್ನು ಸರ್ಕಾರವು ಸಡಗರದಿಂದ ಆಚರಿಸುವ ಮೂಲಕ ಅವರ ಕೊಡುಗೆಗಳನ್ನು ಸ್ಮರಿಸುತ್ತಿದೆ ಎಂದು ಮಹಾನಗರ ಪಾಲಿಕೆಯ ಮಹಾಪೌರ ಪಿ.ಗಾದೆಪ್ಪ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮೆಲ್ಲರ ಹೆಮ್ಮೆಯ ಬೆಂಗಳೂರು ನಗರದ ನಿರ್ಮಾತೃ, ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ರಾಜ್ಯಾದ್ಯಂತ ಅತ್ಯಂತ ವೈವಿಧ್ಯಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಇಂದು ನಾವು ಅನುಭವಿಸುತ್ತಿರುವ ಸುಂದರ ಪರಿಸರ, ನಮ್ಮ ಊರು, ನಾಡು, ಜಲ, ಮತ್ತು ಭಾಷೆಯ ಶ್ರೀಮಂತಿಕೆಗೆ ಅಂದಿನ ಮಹಾತ್ಮರ ಮತ್ತು ಹಿರಿಯರ ನಿಸ್ವಾರ್ಥ ಕೊಡುಗೆಯೇ ಕಾರಣ. ಈ ಇತಿಹಾಸ ಮತ್ತು ಮಹನೀಯರ ಸಾಧನೆಗಳನ್ನು ಇಂದಿನ ವಿದ್ಯಾರ್ಥಿ ದೆಸೆಯ ಯುವ ಪೀಳಿಗೆಗೆ ಮನವರಿಕೆ ಮಾಡಿಕೊಡುವುದು ಮತ್ತು ಅವರ ಆದರ್ಶಗಳನ್ನು ಸಮಾಜದಲ್ಲಿ ಮರುಸ್ಥಾಪಿಸುವುದು ಈ ಜಯಂತಿ ಆಚರಣೆಗಳ ಮುಖ್ಯ ಉದ್ದೇಶವಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರು ತೀರಾ ಚಿಕ್ಕ ವಯಸ್ಸಿನಲ್ಲೇ ಶ್ರೀಕೃಷ್ಣದೇವರಾಯರ ಆಸ್ಥಾನಕ್ಕೆ ಭೇಟಿ ನೀಡಿದ್ದರು. ವಿಜಯನಗರ ಸಾಮ್ರಾಜ್ಯದ ವೈಭವ, ಅಲ್ಲಿನ ಸಂಪತ್ತು, ಕಟ್ಟಡಗಳು ಹಾಗೂ ದೇವಸ್ಥಾನಗಳನ್ನು ಕಂಡು ಪ್ರೇರಿತರಾಗಿದ್ದ ಅವರು, ತಾವೂ ಕೂಡ ಇಂತಹದೊಂದು ಸುಂದರ ನಾಡನ್ನು ಕಟ್ಟಬೇಕೆಂಬ ದೊಡ್ಡ ಕನಸನ್ನು ಕಂಡಿದ್ದರು. ಅವರ ಆ ಕನಸಿನ ಫಲವೇ ಇಂದಿನ ಬೆಂಗಳೂರು ಎಂದು ಅವರು ಸ್ಮರಿಸಿದರು.

ಈಗಿನ ಯುವಪೀಳಿಗೆ ಕೆಂಪೇಗೌಡರಂತೆಯೇ ನಾಡು ಕಟ್ಟಬೇಕೆಂದೇನಿಲ್ಲ. ಸಮಾಜದಲ್ಲಿ ಒಬ್ಬ ಜಿಲ್ಲಾಧಿಕಾರಿ, ಎಸ್‌ಪಿ, ರಾಜಕಾರಣಿ, ಸಂಗೀತಗಾರ ಅಥವಾ ಯಶಸ್ವಿ ಪುರುಷರನ್ನು ನೋಡಿದಾಗ, ನಾನು ಕೂಡ ಅವರಂತೆ ಸಾಧನೆ ಮಾಡಬೇಕೆಂಬ ದೊಡ್ಡ ಕನಸನ್ನು ಕಾಣಬೇಕು. ಆ ಕನಸನ್ನು ನನಸಾಗಿಸಲು ಶ್ರಮಿಸುವುದೇ ನಾವು ಕೆಂಪೇಗೌಡರಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

ಕೆಂಪೇಗೌಡರು ಅತ್ಯಂತ ದೂರದೃಷ್ಟಿಯಿಂದ ಬೆಂಗಳೂರನ್ನು ನಿರ್ಮಿಸಿದ್ದರು. ನಾಡಿನ ರಕ್ಷಣೆಗಾಗಿ ಕೋಟೆ, ವ್ಯಾಪಾರಕ್ಕಾಗಿ ಪೇಟೆ, ದೇವರ ಸ್ಮರಣೆಗಾಗಿ ದೇವಸ್ಥಾನಗಳು ಹಾಗೂ ಪ್ರಾಣಿ–ಪಕ್ಷಿ ಮತ್ತು ಪರಿಸರಕ್ಕಾಗಿ ಸಾವಿರಾರು ಕೆರೆಗಳು ಹಾಗೂ ಉದ್ಯಾನವನಗಳನ್ನು ನಿರ್ಮಿಸಿದರು. ಇವತ್ತು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಸಿಲಿಕಾನ್ ಸಿಟಿಯಾಗಿ ಬೆಳಗುತ್ತಿರುವುದಕ್ಕೆ ಇಲ್ಲಿನ ಪ್ರಕೃತಿಯ ಕೊಡುಗೆ ಹಾಗೂ ಕೆಂಪೇಗೌಡರ ದೂರದೃಷ್ಟಿಯೇ ಕಾರಣ. ಅಲ್ಲದೆ, ಜಾತಿ, ಭಾಷೆಗಳ ಭೇದವಿಲ್ಲದೆ ಎಲ್ಲ ರಾಜ್ಯಗಳ ಜನರಿಗೂ ಆಶ್ರಯ ನೀಡಿರುವ ಬೆಂಗಳೂರು ಇವತ್ತು ಸಾಂಸ್ಕೃತಿಕ ವೈವಿಧ್ಯತೆಯ ಹೆಮ್ಮೆಯ ಸಂಕೇತವಾಗಿದೆ ಎಂದು ಶ್ಲಾಘಿಸಿದರು.

## ಕೊಂಡ್ಲಹಳ್ಳಿಯಲ್ಲಿ ಎಐಎಂಎಸ್‌ಎಸ್‌ನಿಂದ ರಾಜ್ಯಮಟ್ಟದ ಮಹಿಳಾ ಅಧ್ಯಯನ ಶಿಬಿರ

**ಬಳ್ಳಾರಿ, ಜೂ.27:** ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆಯ ರಾಜ್ಯ ಸಮಿತಿಯ ವತಿಯಿಂದ, ಇಂದಿನಿಂದ ಮೂರು ದಿನಗಳ ರಾಜ್ಯ ಮಟ್ಟದ ಮಹಿಳಾ ಅಧ್ಯಯನ ಶಿಬಿರವನ್ನು ಮೊಳಕಾಲ್ಮೂರು ತಾಲೂಕಿನ ಕೊಂಡ್ಲಹಳ್ಳಿ ಎಂ.ಆರ್.ಟಿ ಕಣ್ಣಿನ ಆಸ್ಪತ್ರೆ ಆವರಣದಲ್ಲಿ ಸಂಘಟಿಸಲಾಗುತ್ತಿದೆ.

ಸಮಾಜದ ಹಳೆಯ ಊಳಿಗಮಾನ್ಯ ಪುರುಷ ಪ್ರಧಾನ ಮೌಲ್ಯಗಳು ಮಹಿಳೆಯರನ್ನು ಇಂದಿಗೂ ಮುಂದೆ ಹೋಗದಂತೆ ತಡೆದು ನಿಲ್ಲಿಸುತ್ತಿವೆ. ಇಂದು ಎಲ್ಲಾ ಕ್ಷೇತ್ರಗಳಲ್ಲೂ ಹೆಚ್ಚುತ್ತಿರುವ ಸಮಸ್ಯೆಗಳು, ಬಿಕ್ಕಟ್ಟು ಮಹಿಳೆಯರನ್ನು ಹೊರತುಪಡಿಸಿಲ್ಲ. ಮಾಧ್ಯಮಗಳ ಮೂಲಕ ಹಬ್ಬುತ್ತಿರುವ ಕೀಳು ಅಭಿರುಚಿ, ಹಿಂಸೆ, ಕ್ರೌರ್ಯ ಜೊತೆಗೆ ಮದ್ಯ–ಮಾದಕ ವಸ್ತುಗಳು ವಿದ್ಯಾರ್ಥಿ–ಯುವಜನತೆಯಲ್ಲಿ ವಿಕೃತ ಮನೋಭಾವನೆಯನ್ನು ಬೆಳೆಸುತ್ತಿವೆ. ಸಮಾಜದ ಸಾಂಸ್ಕೃತಿಕ, ನೈತಿಕ ಮಟ್ಟ ತೀವ್ರವಾಗಿ ಕುಸಿಯುತ್ತಿದೆ. ಇದರಿಂದಾಗಿ ಮಹಿಳೆಯರು ಮತ್ತು ಮಕ್ಕಳ ಮೇಲೆ ಮೇಲಿನ ಅತ್ಯಾಚಾರ, ದೌರ್ಜನ್ಯಗಳು ದಿಗ್ಭ್ರಮೆಗೊಳಿಸುವಷ್ಟು ಹೆಚ್ಚುತ್ತಿವೆ.




ಇಂತಹ ಪರಿಸ್ಥಿತಿಯ ವಿರುದ್ಧ ಇಡೀ ಮಹಿಳಾ ಸಮುದಾಯ ಎದ್ದು ನಿಲ್ಲಬೇಕಾಗಿದೆ. ಇತಿಹಾಸವನ್ನೂ ಅರ್ಥೈಸಿಕೊಳ್ಳುತ್ತಾ ಪ್ರಸ್ತುತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಸಮಾಜ ಬದಲಾವಣೆಯ ಮಹತ್ಕಾರ್ಯವನ್ನು ಮುನ್ನಡೆಸಬೇಕಾಗಿದೆ. ಈ ನಿಟ್ಟಿನಲ್ಲಿ ಮಹಿಳೆಯರನ್ನು ವೈಚಾರಿಕವಾಗಿ ಮತ್ತು ಸಂಘಟನಾತ್ಮಕವಾಗಿ ಸಜ್ಜುಗೊಳಿಸಲು ಈ ರಾಜ್ಯ ಮಟ್ಟದ ಮಹಿಳಾ ಕಾರ್ಯಕರ್ತರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಎಐಎಂಎಸ್‌ಎಸ್ ನ ಅಖಿಲ ಭಾರತ ಉಪಾಧ್ಯಕ್ಷರಲ್ಲಿ ಒಬ್ಬರಾದ ಅಪರ್ಣ ಬಿ ಆರ್ ರವರು ಇಂದು ಮಹಿಳಾ ಸಮಸ್ಯೆಗಳು ಸಾಮಾಜಿಕ ಸಮಸ್ಯೆಗಳಿಂದ ಹೊರತಾಗಿಲ್ಲ. ಆದ್ದರಿಂದ ಮಹಿಳಾ ಸಮಸ್ಯೆಗಳನ್ನು ಪ್ರತ್ಯೇಕವಾಗಿ ಅಧ್ಯಯನ ಮಾಡಲು ಸಾಧ್ಯವಿಲ್ಲ. ರೋಗ ಒಂದಕ್ಕೆ ಮದ್ದು ನೀಡುವಲ್ಲಿ ಆ ರೋಗದ ಮೂಲಕಾರಣ ತಿಳಿಯುವುದು ಎಷ್ಟು ಅವಶ್ಯಕವೋ, ಹಾಗೆಯೇ ಮಹಿಳೆಯರ ಸಮಸ್ಯೆಗಳ ಮೂಲ ಅರಿಯದೆ, ಮಹಿಳೆಯರ ಸಮಸ್ಯೆಗೆ ಪರಿಹಾರ ಹುಡುಕುವುದು ಸಾಧ್ಯವಿಲ್ಲ. ಆ ನಿಟ್ಟಿನಲ್ಲಿ ಈ ಶಿಬಿರದಲ್ಲಿ ತೆಗೆದುಕೊಂಡಿರುವ ವಿಷಯಗಳೆಲ್ಲವೂ ಬಹಳ ಪ್ರಮುಖವಾದವುಗಳು. ಎಐಎಂಎಸ್‌ಎಸ್ ಇಂತಹ ಅಧ್ಯಯನಗಳಿಗೆ ಪ್ರಾರಂಭದಿಂದಲೂ ಒತ್ತು ಕೊಡುತ್ತ ಬಂದಿದೆ. ಇಂತಹ ಶಿಬಿರಗಳು ಮಹಿಳಾ ಸಂಘಟನಾಕಾರರನ್ನು ಗಟ್ಟಿಗೊಳಿಸುವಲ್ಲಿ ಅತ್ಯವಶ್ಯಕ? ಎಂದರು. ಉದ್ಘಾಟನಾ ಸಭೆಯ ಅಧ್ಯಕ್ಷತೆಯನ್ನು ರಾಜ್ಯ ಉಪಾಧ್ಯಕ್ಷರಲ್ಲಿ ಒಬ್ಬರಾದ ಸೀಮಾ ಜಿಎಸ್ ವಹಿಸಿದ್ದರು. ಎಐಎಂಎಸ್‌ಎಸ್‌ನ ರಾಜ್ಯ ಅಧ್ಯಕ್ಷರಾದ ಮಂಜುಳಾ ಎನ್, ಮತ್ತೋರ್ವ ಉಪಾಧ್ಯಕ್ಷರಾದ ಹರಿಣ ಆಚಾರ್ಯ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಇಂದಿನ ಪ್ರಥಮ ಘೋಷ್ಠಿಯನ್ನು ಮಹಾನ್ ಕಾದಂಬರಿಗಾರರಾದ ಥಾಮಸ್ ಹಾರ್ಡಿ ರವರ ಟೆಸ್ ಆಫ್ ದಿ ಡರ್ಬರ್ ವಿಲ್ ಎಂಬ ಕಾದಂಬರಿ ಕುರಿತು ಚರ್ಚಿಸಲಾಗುತ್ತಿದ್ದು, ಈ ಗೋಷ್ಠಿಯನ್ನು ಎಐಎಂಎಸ್‌ಎಸ್‌ನ ಅಖಿಲ ಭಾರತ ಉಪಾಧ್ಯಕ್ಷರಾದ ಡಾ. ಸುಧಾ ಕಾಮತ್ ರವರು ನಡೆಸಿಕೊಡಲಿದ್ದಾರೆ.

ಎರಡನೇ ದಿನದ ಶಿಬಿರದಲ್ಲಿ ಸ್ತ್ರೀವಾದ ಕುರಿತು ಚರ್ಚೆ ನಡೆಯಲಿದ್ದು, ಮೂರನೇ ದಿನ ಫೆಡ್ರಿಕ್ ಎಂಗಲ್ಸ್ ರವರ ಖಾಸಗಿ ಆಸ್ತಿ, ಕುಟುಂಬ ಮತ್ತು ರಾಜ್ಯದ ಉಗಮ ಎಂಬ ವಿಷಯದ ಕುರಿತು ಚರ್ಚೆ ನಡೆಯಲಿದೆ. ಶಿಬಿರದ ಮೂರು ದಿನಗಳಲ್ಲಿ ಮಹಿಳಾ ಚಳುವಳಿಯ ಸೂಕ್ತಿ ಮತ್ತು ಛಾಯಾಚಿತ್ರ ಪ್ರದರ್ಶನ, ಸಿನೆಮಾ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು, ಕರ್ನಾಟಕದ 20 ಕ್ಕೂ ಹೆಚ್ಚು ಜಿಲ್ಲೆಗಳಿಂದ ಸಂಘಟನೆಯ ಮಹಿಳಾ ಕಾರ್ಯಕರ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

ರಾಮಮಂದಿರ ಅವ್ಯವಹಾರ: ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ

# ರಾಮಮಂದಿರ ವಿಶ್ವಸ್ಥ ಮಂಡಳಿ ಟ್ರಸ್ಟ್ ಸದಸ್ಯ ಪೇಜಾವರ ಶ್ರೀವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಆಗ್ರಹ

**ಉಡುಪಿ, ಜೂ.27:** ದೇಶ ವಿದೇಶದ ಸಮಸ್ತ ಭಕ್ತರ ಶ್ರದ್ಧಾಕೇಂದ್ರವಾಗಿರುವ ರಾಮಮಂದಿರದಲ್ಲಿ ಅವ್ಯವಹಾರದಂತಹ ಘೋರ ಅಪಚಾರ ನಡೆಯಬಾರದಿತ್ತು. ನಡೆದದ್ದು ಸತ್ಯವಾದರೆ ಆರೋಪಿಗಳಿಗೆ ತಕ್ಕ ಶಿಕ್ಷೆ ಆಗಬೇಕು ಎಂದು ರಾಮಮಂದಿರ ವಿಶ್ವಸ್ಥಮಂಡಳಿ ಟ್ರಸ್ಟ್ ಸದಸ್ಯರಾದ ಪೇಜಾವರ ಶ್ರೀವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಆಗ್ರಹಿಸಿದ್ದಾರೆ.

ಶನಿವಾರ ಮಾತನಾಡಿದ ಅವರು, ಯು.ಪಿ. ರಾಜ್ಯ ಸರಕಾರದ ಮೇಲೆ ವಿಶ್ವಾಸ ಇದೆ. ಸರಿಯಾಗಿ ತನಿಖೆ ನಡೆಯುವ ವಿಶ್ವಾಸ ಇದೆ. ಆ ಮೂಲಕ ಸತ್ಯಾಸತ್ಯತೆ ಶೀಘ್ರವಾಗಿ ಹೊರಬರಬೇಕು. ಎಸ್ಐಟಿ ತನಿಖೆ ನಡೆಸುತ್ತಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಆರೋಪಿಗಳಿಗೆ ತಕ್ಕ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದರು.200 ಕೆ.ಜಿ ಬೆಳ್ಳಿ ನೀಡಿದರೂ ರಶೀದಿ ನೀಡಿಲ್ಲ ಎಂಬ ಸಿಂಧಿ ಸಮುದಾಯದ ಗಂಭೀರ ಆರೋಪಕ್ಕೆ ಪ್ರತಿಕ್ರಿಯಿಸಿದ ಸ್ವಾಮೀಜಿ, ದೊಡ್ಡ ಮಟ್ಟದ ದೇಣಿಗೆ ನೀಡಿದವರು, ಅಲ್ಲಿಯೇ ರಶೀದಿ ತೆಗೆದುಕೊಳ್ಳಬೇಕು. ದೇಣಿಗೆ ನೀಡುವವರು ಮತ್ತು ಪಡೆದವರು ಇಬ್ಬರಿಗೂ ಆ ಬಗ್ಗೆ ಜವಾಬ್ದಾರಿ ಇದೆ. ದೇಣಿಗೆ ತೆಗೆದುಕೊಂಡವರಿಗೆ ದೊಡ್ಡ ಜವಾಬ್ದಾರಿ ಇದೆ. ರಶೀದಿ ಕೊಟ್ಟಿಲ್ಲವಾದರೆ ಅದು ದೊಡ್ಡ ತಪ್ಪು. ಕೇವಲ ಬಾಯಿಮಾತಿನ ಹೇಳಿಕೆಗಳಾಗಿ ಉಳಿಯಬಾರದು. ಅವರು ಆರೋಪ ಮಾಡಿದ್ದರೆ ವಾಸ್ತವ ಇರಬಹುದು. ಆದರೆ ರಶೀದಿ ಕೊಟ್ಟಿಲ್ಲ ಎಂಬ ಮಾತು ನಂಬಲು ಆಗಲ್ಲ ಎಂದು ತಿಳಿಸಿದರು.

ಚಂಪತ್ ರಾಯ್ ರಾಜೀನಾಮೆ ವಿಚಾರದ ಕುರಿತ ಪ್ರಶ್ನೆಗೆ ಉತ್ತರಿಸಿದ ಸ್ವಾಮೀಜಿ, ವಾಟ್ಸಾಪ್ ಗ್ರೂಪಿನಲ್ಲಿ ಅವರು ಯಾವುದೇ ಆ ರೀತಿಯ ಸಂದೇಶ ಕಳುಹಿಸಿಲ್ಲ. ಟ್ರಸ್ಟ್‌ನ ವಾಟ್ಸಾಪ್ ಗ್ರೂಪಿನಲ್ಲಿ ಕೂಡ ಮಾಹಿತಿ




ಬಂದಿಲ್ಲ. ಅವರ ನಂಬರ್‌ನಿಂದಲೂ ನನಗೆ ನೇರವಾಗಿ ಸಂದೇಶ ಬಂದಿಲ್ಲ. ಈ ರೀತಿಯ ವಿಷಯಗಳಿದ್ದಾಗ ಅವರು ಮೆಸೇಜ್ ಮಾಡುತ್ತಿದ್ದರು. ಅಲ್ಲಿ ಏನು ಬೆಳವಣಿಗೆ ಆಗಿದೆ ಎಂಬುದು ನನಗೆ ಗೊತ್ತಿಲ್ಲ ಎಂದರು.

ನಾವು ಮಂದಿರಕ್ಕೆ ಹಣ ಹಾಕುವುದರ ಬದಲು ಬಡವರಿಗೆ ಮನೆ ಕಟ್ಟಿಸಿ ಕೊಡಿ ಎಂದು ಕರೆನೀಡಿದ್ದೆವು. ರಾಮದೇವರ ಸೇವೆಯನ್ನು ಬಡವರಿಗೆ ಮನೆ ಕಟ್ಟಿ ಮಾಡಿಕೊಡಬಹುದು. ಅವಕಾಶ ವಂಚಿತರಿಗೆ ದೀನ-ದಲಿತರಿಗೆ ಮನೆ ಕಟ್ಟಿಸಿ ಕೊಡಬಹುದು. ನಮ್ಮ ಉದ್ಯೋಗದ ಜೊತೆ ಸಮಾಜಸೇವೆ ಮಾಡಲು ಅನೇಕ ಅವಕಾಶಗಳಿವೆ ಆ ಮೂಲಕ ರಾಮಸೇವೆ ಮಾಡಬಹುದು ಎಂದು ಅವರು ಹೇಳಿದರು.

ಒಳ್ಳೆಯ ಕೆಲಸ ಮಾಡಿ ದೇವರಿಗೆ ಸಮರ್ಪಿಸಬಹುದು. ದುಃಖಿತರಿಗೆ ಸಹಾಯ ಮಾಡುವುದೇ ನಿಜವಾದ ರಾಮಸೇವೆ. ಉಡುಪಿಯ ಪರಿಸರದಲ್ಲಿ ಈ ರಾಮ ಸೇವೆ ಆಗುತ್ತಿದೆ. ನೂರು ಕೆ.ಜಿ ಬೆಳ್ಳಿ ಕೊಡುವುದರ ಬದಲು 1000 ಮನೆ ನಿರ್ಮಾಣ ಮಾಡುವ ಮೂಲಕ ರಾಮದೇವರ ಸೇವೆ ಮಾಡಬಹುದಿತ್ತು ಎಂದರು.



ಮೈಸೂರಿನಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶನಿವಾರ ಅಭಿಮಾನಿಗಳು ಸ್ವಾಗತಿಸಿದರು.

# ಯೋಗ ವರ್ಷಕ್ಕೊಮ್ಮೆಯಾಗದೇ, ನಿತ್ಯ ಕೆಲ ಸಮಯ ಮೀಸಲಿಡಬೇಕು: ಬಿ.ವೆಂಕಟಸಿಂಗ್




**ರಾಯಚೂರು, ಜೂ. 27:** ಯೋಗವು ಶರೀರಕ್ಕೆ ಆರೋಗ್ಯವನ್ನು, ಮನಸ್ಸಿಗೆ ಆನಂದವನ್ನು ಕೊಟ್ಟು, ಕ್ರಿಯಾಶೀಲವಾಗಿರಲು ದಿವ್ಯ ಔಷಧವಾಗಿದೆ. ಒತ್ತಡದ ಜೀವನದ ಮಧ್ಯೆ ಈ ಸಾಧನೆಗೆ ಯೋಗವನ್ನು ವರ್ಷಕ್ಕೊಮ್ಮೆ ಯೋಗದಿನವಾಗಿ ಆಚರಿಸದೇ ನಿತ್ಯ ಕೆಲಸಮಯ ದಿನದ ಕನಿಷ್ಠ ಕೆಲ ಸಮಯ ಮೀಸಲಿಡಬೇಕೆಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ.ವೆಂಕಟ್ಸಿಂಗ್ ಹೇಳಿದರು.

ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಆಯುಷ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಸಾಮೂಹಿಕ ಯೋಗ ಕಾರ್ಯಕ್ರಕ್ಕೆ ಚಾಲನೆ ನೀಡಿ ಮಾತನಾಡಿದರು.

ಯೋಗ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯವನ್ನು ಕಾಪಾಡುವ ಅತ್ಯುತ್ತಮ ಸಾಧನವಾಗಿದ್ದು, ವಿದ್ಯಾರ್ಥಿಗಳಿಂದ ಹಿಡಿದು ನೌಕರರವರಿಗೆ ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಪತ್ರಿ ದಿನ ಯೋಗ ಮಾಡುವ ಮೂಲಕ ತಮ್ಮ ಒತ್ತಡ ಜೀವನದಿಂದ ಹೊರಬರಬೇಕು. ಪರೀಕ್ಷೆಯಲ್ಲಿ ಒಳ್ಳೆಯ ಫಲಿತಾಂಶವನ್ನು ಪಡೆಯಬೇಕೆಂದರು. ನಂತರ ಯೋಗ ಶಿಕ್ಷಕರು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ವಿವಿಧ ಯೋಗಾಸನಗಳ ಅಭ್ಯಾಸ ಮಾಡಿಸಿದರು.

ಯೋಗ ಶಿಕ್ಷಕರು ವೃಕ್ಷಾಸನ, ಪಾದಹಸ್ತಾಸನ, ತಾಡಾಸನ, ತ್ರಿಕೋನಾಸನ, ಭದ್ರಾಸನ, ವಜ್ರಾಸನ, ಉಷ್ಟ್ರಾಸನ, ಅರ್ಧ ಉಷ್ಟ್ರಾಸನ, ಶಶಾಂಕಾಸನ, ಉತ್ತಾನ, ಮಂಡೂಕಾಸನ, ವಕ್ರಾಸನ, ಮಕರಾಸನ, ಭುಜಂಗಾಸನ, ಶಲಭಾಸನ, ಸೇತುಬಂಧಾಸನ, ಅರ್ಧ ಹಲಾಸನ, ಪವನಮುಕ್ತಾಸನ, ಶವಾಸನ ಹೇಳಿಕೊಟ್ಟರು.

ಯೋಗ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರಮಾಣಪತ್ರ ವಿತರಿಸಲಾಯಿತು.

# ನರೇಂದ್ರ ಮೋದಿಯವರ ಸಾಧನೆಗಳ ಪ್ರದರ್ಶನ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಸೋಮಶೇಖರರೆಡ್ಡಿ ಭಾಗಿ



**ಬಳ್ಳಾರಿ,ಜೂ.27:** ಬಳ್ಳಾರಿ ನಗರದ ಸಂಗನಕಲ್ಲು ರಸ್ತೆಯ ವಶಿಷ್ಠ ಕಾಲೇಜು ಹತ್ತಿರ ಬಳ್ಳಾರಿ ಜಿಲ್ಲಾ ಯುವ ಮೋರ್ಚಾ ವತಿಯಿಂದ ಹಮ್ಮಿಕೊಳ್ಳಲಾದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಸಾಧನೆಗಳ ಪ್ರದರ್ಶನ ಕಾರ್ಯಕ್ರಮದಲ್ಲಿ ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ಭಾಗಿಯಾಗಿ ಸಾಧನೆಗಳ ಬಗ್ಗೆ ವಿಸ್ತಾರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು ಮೋಕಾ, ರಾಜ್ಯ ಎಸ್‌ಟಿ ಪ್ರಧಾನ ಕಾರ್ಯದರ್ಶಿ ಕೆ. ಎಸ್.ದಿವಾಕರ್, ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್, ಮಾಜಿ ಜಿಲ್ಲಾ ಪಂಚಾಯತಿ ಸದಸ್ಯರಾದ ಜೀವೇಶ್ವರಿ ಸೇರಿದಂತೆ ಇನ್ನಿತರರು ಭಾಗಿಯಾಗಿದ್ದರು.

# ಬರೂರಿನಲ್ಲಿ ಸೇತುವೆ ನಿರ್ಮಾಣಕ್ಕೆ ಚಾಲನೆ, 40 ವರ್ಷಗಳ ಕನಸು ನನಸು-ಜನರ ಜೀವರಕ್ಷಣೆಗೆ ಆದ್ಯತೆ: ಶಾಸಕ ಡಾ.ಬೆಲ್ದಾಳೆ

**ಬೀದರ್, ಜೂ. 27:** ಸಾರ್ವಜನಿಕರ ಜೀವ ರಕ್ಷಣೆ ಮತ್ತು ಸುರಕ್ಷಿತ ಸಂಚಾರಕ್ಕೆ ಮೊದಲ ಆದ್ಯತೆ ಕೊಡುವುದಾಗಿ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಕ್ಷೇತ್ರದ ಬರೂರ ಗ್ರಾಮದ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿ, ಚಿಂತಲಗೇರ ಕ್ರಾಸ್‌ನಿಂದ ಬರೂರ (ತೆಲಂಗಾಣ ಗಡಿವರೆಗೆ) ಸಂಪರ್ಕಿಸುವ ರಸ್ತೆಯ 4 ಕೋಟಿ ಅಂದಾಜು ವೆಚ್ಚದ ಬಾಕ್ಸ್ ಕಲ್ವರ್ಟ್ (ಸೇತುವೆ) ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಿ ಮಾತನಾಡಿದ ಅವರು, ಕಳೆದ ಮಳೆಗಾಲದಲ್ಲಿ ಈ ಸ್ಥಳದಲ್ಲಿ ಉಂಟಾದ ಪ್ರವಾಹದಿಂದ ರಸ್ತೆ ಸಂಪೂರ್ಣ ಮುಳುಗಡೆಯಾಗಿ, ಬರೂರ ಗ್ರಾಮದ ಪ್ರಭಾಕರ್ ಅವರು ದುರಂತವಾಗಿ ಮೃತಪಟ್ಟಿದ್ದರು. ಈ ದುರ್ಘಟನೆಯ ಬಳಿಕ ಸ್ಥಳೀಯರ ಬಹುಕಾಲದ ಬೇಡಿಕೆ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಶಾಶ್ವತ ಪರಿಹಾರವಾಗಿ ಈ ಬಾಕ್ಸ್ ಕಲ್ವರ್ಟ್ ನಿರ್ಮಾಣಕ್ಕೆ ಸರ್ಕಾರದಿಂದ



4 ಕೋಟಿ ಅನುದಾನ ಮಂಜೂರಾಗಿದ್ದು, ಇದೀಗ ಕಾಮಗಾರಿಗೆ ಅಧಿಕೃತ ಚಾಲನೆ ನೀಡಲಾಗಿದೆ.ಸುಮಾರು 40 ವರ್ಷಗಳಿಂದ ಈ ಭಾಗದ ಜನರು ಸೇತುವೆ ನಿರ್ಮಾಣಯಿಕ್ಕಾಗಿ ನಿರಂತರವಾಗಿ ಬೇಡಿಕೆ ಸಲ್ಲಿಸುತ್ತಿದ್ದು, ಇದೀಗ ಕಾಮಗಾರಿಗೆ ಚಾಲನೆ ದೊರೆತಿಯಿರುವುದಕ್ಕೆ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ. ಈ ಯೋಜನೆಯು ಹಲವು ವರ್ಷಗಳ ಕನಸನ್ನು ನನಸಾಗಿಸಿದ್ದು, ಮಳೆಗಾಲದಲ್ಲಿಯೂ ಸುರಕ್ಷಿತ ಹಾಗೂ ನಿರಂತರ ಸಂಚಾರಕ್ಕೆ ದಾರಿ ಮಾಡಿಕೊಡಲಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ಸಾರ್ವಜನಿಕರ ಜೀವ ರಕ್ಷಣೆ ಮತ್ತು ಸುರಕ್ಷಿತ ಸಂಚಾರ ನಮ್ಮ ಮೊದಲ ಆದಯ್ತೆಯಾಗಿದೆ. ಮಳೆಗಾಲದಲ್ಲಿ ಜನರು ಯಾವುದೇ ತೊಂದರೆ ಅನುಭವಿಸದಂತೆ ಗುಣಮಟ್ಟದ ಮೂಲಸೌಕರ್ಯಗಳನ್ನು ನಿರ್ಮಿಸುವ ಮೂಲಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಈ ಕಾಮಗಾರಿ ಪೂರ್ಣಗೊಂಡ ಬಳಿಕ ಬರೂರ ಸೇಯಿರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನಯಿರಿಗೆ ವರ್ಷ ಪೂರ್ತಿ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಾಬುರಾವ್ ಮಲ್ಕಾಪುರ ಅವರು ಮಾತನಾಡಿ, ಬರೂರ್ ಗ್ರಾಮದ ಜನರು ಸುಮಾರು ನಾಲ್ಕು ದಶಕಗಳಿಂದ ಈ ಸೇತುವೆ ನಿರ್ಮಾಣಕ್ಕಾಗಿ ನಿರಂತರವಾಗಿ ಹೋರಾಟ ನಡೆಸುತ್ತಿದ್ದರು. ಮಳೆಗಾಲದಲ್ಲಿ ಸಂಪರ್ಕ ಕಡಿತಗೊಂಡು ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದರು. ಇದೀಗ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರ ವಿಶೇಷ ಪ್ರಯತ್ನದಿಂದ 4 ಕೋಟಿ ವೆಚ್ಚದ ಬಾಕ್ಸ್ ಕಲ್ವರ್ಟ್ ಕಾಮಗಾರಿಗೆ ಚಾಲನೆ ದೊರೆತಿರುವುದು ಈ ಭಾಗದ ಜನರ ಬಹುಕಾಲದ ಕನಸನ್ನು ನನಸಾಗಿಸಿದೆ. ಕಾಮಗಾರಿ ಶೀಘ್ರ ಪೂರ್ಣಗೊಂಡು ಜನರ ಸೇವೆಗೆ ಸಮರ್ಪಣ ಯಾಗಲಿ ಎಂಬುದು ನಮ್ಮ ಆಶಯ ಎಂದರು.

# ಅಯೋಧ್ಯೆ ರಾಮಮಂದಿರದಲ್ಲಿ ಕಾಣಿಕೆ ದುರ್ಬಳಕೆ: ತನಿಖೆಗೆ ಈಶ್ವರಪ್ಪ ಒತ್ತಾಯ

ಶಿವಮೊಗ್ಗ, ಜೂ.27: ಅಯೋಧ್ಯೆ ರಾಮಮಂದಿರದಲ್ಲಿ ಭಕ್ತರು ನೀಡಿದ ಕಾಣಿಕೆ ಹಣ ದುರ್ಬಳಕೆಯಾಗಿದೆ ಎಂಬ ಆರೋಪದ ಕುರಿತು ನ್ಯಾಯಸಮ್ಮತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಆರೋಪಗಳು ರಾಮಭಕ್ತರನ್ನು ಬೆಚ್ಚಿಬೀಳುವಂತೆ ಮಾಡಿವೆ ಎಂದು ಹೇಳಿದರು.

ಕೇಂದ್ರ ಸರ್ಕಾರ ಈ ವಿಷಯ




ವನ್ನು ಲಘುವಾಗಿ ಪರಿಗಣಿ ಸುತ್ತಿಲ್ಲ ಎಂಬ ನಂಬಿಕೆ ಇದೆ. ದೇಣಿಗೆ ಹಣವನ್ನು ದೀರ್ಘಕಾಲ ದಿಂದಲೇ ಅಕ್ರಮವಾಗಿ ದುರುಪಯೋಗ ಪಡಿಸಿಕೊಳ್ಳುವ ಸಂಚು ನಡೆದಿದೆ ಎಂಬ ವರದಿಗಳಿವೆ.

ಅಲ್ಲದೆ, ದೇವಸ್ಥಾನದ ಟ್ರಸ್ಟ್‌ನಿಂದಲೂ ಸ್ಪಷ್ಟ ವೈಫಲ್ಯ ಕಂಡುಬಂದಿದೆ ಎಂದು ಅವರು ಆರೋಪಿಸಿದರು.

ಭಕ್ತರು ಅರ್ಪಿಸಿದ ಕಾಣಿಕೆ ಹಣವನ್ನು ದುರ್ಬಳಕೆ ಮಾಡಿದವರ ವಿರುದ್ಧ ಕೇಂದ್ರ ಸರ್ಕಾರ ನ್ಯಾಯಯುತ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ಈಶ್ವರಪ್ಪ ಒತ್ತಾಯಿಸಿದರು.

# ಬಿಡದಿ ಟೌನ್‌ಶಿಪ್ ಯೋಜನೆ: ಎಚ್‌ಡಿಕೆ ವಿರೋಧಕ್ಕೆ ಶಾಸಕ ಕದಲೂರು ಉದಯ್ ವಾಗ್ದಾಳಿ

**ಮದ್ದೂರು, ಜೂ.27:** ಬಿಡದಿ ಟೌನ್‌ಶಿಪ್ ವಿಚಾರವಾಗಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಮದ್ದೂರು ವಿಧಾನಸಭಾ ಕ್ಷೇತ್ರದ ಶಾಸಕ ಕದಲೂರು ಉದಯ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಎಚ್‌ಡಿಕೆ ವರ್ತನೆಯನ್ನು ಬಾಲಿಶ ಎಂದಿರುವ ಅವರು, ಅವರಿಗೆ ಈ ಯೋಜನೆಯನ್ನು ಜೀರ್ಣಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಲೇವಡಿ ಮಾಡಿದ್ದಾರೆ.

ಯೋಜನೆ ಆರಂಭಿಸಲು ಹೊರಟಿದ್ದೇ ಕುಮಾರಸ್ವಾಮಿ. ಈಗ ಡಿ.ಕೆ. ಶಿವಕುಮಾರ್ ಅವರು ಯೋಜನೆಯನ್ನು ವೇಗವಾಗಿ ಅನುಷ್ಠಾನಕ್ಕೆ ತರುತ್ತಿದ್ದಾರೆ. ತಮಗೆ ಸಿಗಬೇಕಾದ ಹೆಸರು ಬೇರೆಯವರಿಗೆ ಸಿಗುತ್ತದೆ ಎಂಬ ಕಾರಣಕ್ಕೆ ಕುಮಾರಸ್ವಾಮಿ ಅವರು ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಇದೇ ಕಾರಣಕ್ಕಾಗಿ ಸುತ್ತಲಿನ ತಾಲೂಕುಗಳ ಕಾರ್ಯಕರ್ತರನ್ನು ಕರೆಸಿ ಪ್ರತಿಭಟನೆ ನಡೆಸಲಾಗುತ್ತಿದೆ ಈ ವಿಷಯದ ಬಗ್ಗೆ ಚರ್ಚೆ ನಡೆಸಲು ಮುಖ್ಯಮಂತ್ರಿಗಳು ಮುಕ್ತ ಆಹ್ವಾನ ನೀಡಿದ್ದರು. ಚರ್ಚೆ ನಡೆಸಿದ್ದರೆ ಅವರಿಗೆ ಗೌರವ ಇರುತ್ತಿತ್ತು. ಅದನ್ನು ಬಿಟ್ಟು ಅಲ್ಲಿಗೆ ಬನ್ನಿ, ಇಲ್ಲಿಗೆ ಬನ್ನಿ, ಕಾಯ್ತೀನಿ ಎಂದು ಪ್ರದರ್ಶನ ನೀಡುತ್ತಿದ್ದಾರೆ ಎಂದರು.

ಕುಮಾರಸ್ವಾಮಿ ಅವರ ಹಳ್ಳಿ ಪ್ರವಾಸದ ಹೇಳಿಕೆಗಳಿಗೂ ಟಾಂಗ್ ನೀಡಿದ ಶಾಸಕರು, "ಇವರು ಸಿಎಂ ಆಗಿದ್ದಾಗ ಎಷ್ಟು ಹಳ್ಳಿಗಳಿಗೆ ಹೋಗಿದ್ದರು, ಯಾವುದಾದರೂ ತಾಲೂಕಿಗೆ ಭೇಟಿ ನೀಡಿದ್ದರಾ, ತಾಜ್ ವೆಸ್ಟ್‌ಎಂಡ್ ಹೋಟೆಲ್ ಬಿಟ್ಟರೆ ಇವರು ವಿಧಾನಸೌಧಕ್ಕೆ



ಹೋಗುತ್ತಿರಲಿಲ್ಲ. ಈಗ ಹಳ್ಳಿಗೆ ಬನ್ನಿ ಅಂದರೆ ಇವರದು ಬರೀ ಚಂಗ್ಲುತನವೇ ಆಗಿಹೋಗಿದೆ" ಎಂದು ತೀಕ್ಷ್ಣವಾಗಿ ವಿಮರ್ಶಿಸಿದರು.

ಬಿಡದಿ ಟೌನ್‌ಶಿಪ್ ಜಟಾಪಟಿ ವಿಚಾರವಾಗಿ ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಶಾಸಕ ಕದಲೂರು ಉದಯ್ ನೀಡಿರುವ ಈ ಹೇಳಿಕೆ ಇದೀಗ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಚಿಕ್ಕಬಳ್ಳಾಪುರದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಗೊಂದಲ

# ಹುಚ್ಚ ಎಂದು ಕೂಗಿ ಶಾಸಕ ಪ್ರದೀಪ್ ಈಶ್ವರ್ ಅವರತ್ತ ಚಪ್ಪಲಿ ಎಸೆತ

**ಚಿಕ್ಕಬಳ್ಳಾಪುರ, ಜೂ.27:** ಚಿಕ್ಕಬಳ್ಳಾಪುರದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಬೆಂಬಲಿಗರು ದಾಂಧಲೆ ನಡೆಸಿದ್ದಾರೆ.

ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರನ್ನು ಹುಚ್ಚ-ಹುಚ್ಚ ಎಂದು ಕೂಗಿರುವ ಜೆಡಿಎಸ್ ಕಾರ್ಯಕರ್ತರು, ಅವರ ಮೇಲೆ ಚಪ್ಪಲಿ ಎಸೆದಿದ್ದಾರೆ. ದಾಂಧಲೆ ನಡೆಸಿದ ಕಿಡಿಗೇಡಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತವು ಕೆಂಪೇಗೌಡ ಜಯಂತಿ ಕಾರ್ಯಕ್ರಮ ಆಯೋಜಿಸಿತ್ತು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ್ರದೀಪ್ ಈಶ್ವರ್ ಬರುತ್ತಿದ್ದಂತೆಯೇ, ಅವರ ಮೇಲೆ ಜೆಡಿಎಸ್ ಕಾರ್ಯಕರ್ತರು ಮುಗಿಬಿದ್ದಿದ್ದಾರೆ. ವೇದಿಕೆಯ ಮುಂಭಾಗದಲ್ಲೇ ಚಪ್ಪಲಿಗಳನ್ನು ಕೈಯಲ್ಲಿ ಹಿಡಿದು, ಪ್ರದೀಪ್ ಈಶ್ವರ್ ವಿರುದ್ಧ ಘೋಷಣೆ



ಕೂಗಿದ್ದಾರೆ. ತಕ್ಷಣವೇ ಎಚ್ಚೆತ್ತ ಪೊಲೀಸರು ಪ್ರತಿಭಟನಾಕಾರರನ್ನು ಹೊರದಬ್ಬಿಸಿದ್ದಾರೆ. ಚಪ್ಪಲಿ ಎಸೆದು ದಾಂಧಲೆ ಮಾಡಿದವರನ್ನು ವಶಕ್ಕೆ ಪಡೆದಿದ್ದಾರೆ.

ಎಚ್.ಡಿ. ಕುಮಾರಸ್ವಾಮಿ ಅವರ ಚೇಲಾಗಳು ನನ್ನ ಮೇಲೆ ಮುಗಿಬಿದ್ದಿದ್ದಾರೆ. ನನ್ನ ವಿರುದ್ಧ ಕೂಗಾಡುತ್ತಿದ್ದಾರೆ. ಇಂತಹ ಬೆದರಿಕೆಗಳಿಗೆಲ್ಲ ನಾನು ಹೆದರುವವನಲ್ಲ ಎಂದು ಪ್ರದೀಪ್ ಈಶ್ವರ್ ಹೇಳಿದ್ದಾರೆ.

ಇತ್ತೀಚೆಗೆ, ಪ್ರದೀಪ್ ಈಶ್ವರ್ ಬಗ್ಗೆ ಮಾತನಾಡಿದ್ದ ಕುಮಾರಸ್ವಾಮಿ ಅವರು, ಪ್ರದೀಪ್ ಈಶ್ವರ್ ಅವರ ಪರಿಶ್ರಮ ನೀಟ್ ಅಕಾಡೆಮಿಗೆ ಸಿಎ ಸೈಟ್ ಮಂಜೂರಾಗಿದೆ ಎಂದು ಆರೋಪಿಸಿದ್ದರು.

ಅವರ ಆರೋಪಕ್ಕೆ ಪ್ರತಿಕ್ರಿಯಿಸಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿದ್ದ ಪ್ರದೀಪ್ ಈಶ್ವರ್, ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರ ಬಳಿ 85 ವಾಚುಗಳು, 700-800 ಎಕರೆ ಜಮೀನಿದೆ. ಅವರ ವಾಚ್‌ಗಳ ಒಟ್ಟು ಮೌಲ್ಯವೇ 10 ರಿಂದ 20 ಕೋಟಿ ರೂ. ಆಗುತ್ತದೆ. ಇಷ್ಟು ಆಸ್ತಿಯನ್ನು ಅವರು ತೋಟದ ಮನೆಯಲ್ಲಿ ಬೆಳೆದ ಬದನೆಕಾಯಿ ಮಾರಿ ಗಳಿಸಿದರೇ ಅಥವಾ ಬಳ್ಳಾರಿಯ ಕಿಕ್‌ಬ್ಯಾಕ್ (ಕಮೀಷನ್) ಹಣದಿಂದ ಖರೀದಿಸಿದರೇ, ಬಿಡದಿಯಲ್ಲಿ ಅನಿತಾ ಕುಮಾರಸ್ವಾಮಿ ಅವರು 32 ಎಕರೆ ಜಮೀನನ್ನು ರಾಮ್‌ರಾಜ್ ಪಂಚೆ ಮಾರಿ ಖರೀದಿಸಿದ್ದಾರೆಯೇ ಎಂದು ವಾಗ್ದಾಳಿ ನಡೆಸಿದ್ದರು.

# ಲಿಂಗನಮಕ್ಕಿಯಲ್ಲಿ ನೀರಿನ ಮಟ್ಟ ಇಳಿಕೆ ವಿದ್ಯುತ್ ಉತ್ಪಾದನೆ ತಾತ್ಕಾಲಿಕ ಸ್ಥಗಿತ



**ಶಿವಮೊಗ್ಗ, ಜೂ.27:** ರಾಜ್ಯದ ಪ್ರಮುಖ ಜಲವಿದ್ಯುತ್ ಮೂಲಗಳಲ್ಲಿ ಒಂದಾದ ಶಿವಮೊಗ್ಗ ಜಿಲ್ಲೆ ಸಾಗರ ತಾಲೂಕಿನ ಜೋಗ ಬಳಿಯಿರುವ ಲಿಂಗನಮಕ್ಕಿ ಜಲಾಶಯದಲ್ಲಿ ನೀರಿನ ಮಟ್ಟ ಆತಂಕಕಾರಿಯಾಗಿ ಇಳಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಜಲಾಶಯದ ವಿದ್ಯುತ್ ಉತ್ಪಾದನಾ ಘಟಕದಲ್ಲಿ ವಿದ್ಯುತ್ ತಯಾರಿಕೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಪ್ರಸ್ತುತ ಲಿಂಗನಮಕ್ಕಿ ಜಲಾಶಯದಲ್ಲಿ ನೀರಿನ ಮಟ್ಟ 1,745.75 ಅಡಿಗೆ ತಲುಪಿದೆ. ಸಾಮಾನ್ಯವಾಗಿ ಜಲಾಶಯದಲ್ಲಿ 1,743 ಅಡಿಗಳವರೆಗೆ ಯಾವುದೇ ತೊಂದರೆಯಿಲ್ಲದೆ ವಿದ್ಯುತ್ ಉತ್ಪಾದನೆ ಮಾಡಬಹುದು. ಆದರೆ, ಸದ್ಯದ ಮಟ್ಟ ಕನಿಷ್ಠ ಮಟ್ಟಕ್ಕೆ ಅತ್ಯಂತ ಹತ್ತಿರದಲ್ಲಿದೆ.ನೀರಿನ ಸಂಗ್ರಹ ತೀರಾ ಕನಿಷ್ಠ ಮಟ್ಟಕ್ಕೆ ತಲುಪಿದಾಗ ವಿದ್ಯುತ್ ಉತ್ಪಾದನೆ ಮುಂದುವರಿಸಿದರೆ ಯಂತ್ರಗಳಲ್ಲಿ ಗಂಭೀರ ತಾಂತ್ರಿಕ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಈ ತಾಂತ್ರಿಕ ದೋಷಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ, ಮುನ್ನೆಚ್ಚರಿಕೆ ಕ್ರಮವಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಹಾಗೂ ಕೆಪಿಸಿಎಲ್ ಅಧಿಕಾರಿಗಳು ವಿದ್ಯುತ್ ಉತ್ಪಾದನೆಯನ್ನು ಸದ್ಯಕ್ಕೆ ನಿಲ್ಲಿಸಲು ನಿರ್ಧರಿಸಿದ್ದಾರೆ.ಲಿಂಗನಮಕ್ಕಿ ವಿದ್ಯುತ್ ಉತ್ಪಾದನಾ ಕೇಂದ್ರದಿಂದ ಪ್ರತಿದಿನ ಸರಾಸರಿ 55 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು. ಮುಂಗಾರು ಮಳೆ ಕ್ಷೀಣಿಸಿರುವುದರಿಂದ ಜಲಾಶಯಕ್ಕೆ ಒಳಹರಿವು ಸಂಪೂರ್ಣ ಕಡಿಮೆಯಾಗಿದ್ದು, ಮಳೆ ಚುರುಕಾಗಿ ನೀರಿನ ಮಟ್ಟ ಏರಿಕೆಯಾಗುವವರೆಗೂ ವಿದ್ಯುತ್ ಉತ್ಪಾದನೆ ಪುನಾರಂಭಗೊಳ್ಳುವುದು ಕಷ್ಟಸಾಧ್ಯ ಎನ್ನಲಾಗಿದೆ.

# ಜನಪದ ಜನರ ಭಾವನೆ ಬೆಸೆಯುವ ಮಾಧ್ಯಮ: ಟಿ.ವಿಜಯಕುಮಾರ್

**ಕಲಬುರಗಿ, ಜೂ. 27:** ಸಂಗೀತಕ್ಕೆ ಯಾವುದೇ ಭಾಷೆ, ಜಾತಿ ಮತ್ತು ಧರ್ಮ ಮತ್ತು ಪ್ರಾದೇಶಿಕತೆಯ ಮಿತಿಯಿಲ್ಲ. ಇದು ಜನರ ಭಾವನೆ ಬೆಸೆಯುವ ಬಹುದೊಡ್ಡ ಶಕ್ತಿಯುತ ಮಾಧ್ಯಮವಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಟಿ.ವಿಜಯಕುಮಾರ ಪಾಟೀಲ್ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಡಿ ಜಾನಪದ ಮತ್ತು ಸಾಂಸ್ಕೃತಿಕ ಕಲರವ ಕಾರ್ಯಕ್ರಮ ಉದ್ಘಾಟಿಸಿದ ಅವರು, ಶಾಸಿಯ ಸಂಗೀತ ಅಥವಾ ಹಿತವಾದ ಜಾನಪದ ಗೀತೆಗಳನ್ನು ಆಲಿಸುವುದರಿಂದ ಮಾನಸಿಕ ಒತ್ತಡ ಕಡಿಮೆ ಜತೆಗೆ ಏಕಾಗ್ರತೆಯೂ ಹೆಚ್ಚಲಿದೆ ಎಂದರು.ರಾಜ್ಯ ಯುವ ಪ್ರಶಸ್ತಿ ಪುರಸತ ಬಸವರಾಜ ತೋಟದ ಮಾತನಾಡಿ, ಕಲಾವಿದರಿಗೆ ಅವಕಾಶ ಕೊಡುವ ಮೂಲಕ ಪ್ರೋತ್ಸಾಹಿಸುವ ಕಾರ್ಯ ಮಾಡಲಾಗುತ್ತಿದೆ.

# ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ವಿರೋಧಿಸಿ ಇಂದು ಸಾಗರದಲ್ಲಿ ಬೃಹತ್ ಪ್ರತಿಭಟನೆ

**ಶಿವಮೊಗ್ಗ, ಜೂ.27:** ಪರಿಸರಕ್ಕೆ ಮಾರಕವಾಗಿರುವ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯನ್ನು ಕೈಬಿಡುವಂತೆ ಒತ್ತಾಯಿಸಿ ಜೂನ್ 28ರಂದು ರಾಷ್ಟ್ರಭಕ್ತರ ಬಳಗ ಹಾಗೂ ವಿವಿಧ ಸಂಘಟನೆಗಳ ಆಶ್ರಯದಲ್ಲಿ ಸಾಗರ ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರಾಷ್ಟ್ರಭಕ್ತರ ಬಳಗದ ಪ್ರಮುಖ ಕೆ.ಇ.ಕಾಂತೇಶ್ ತಿಳಿಸಿದ್ದಾರೆ.

ಇಂದು ಶಿವಮೊಗ್ಗ ಜಿಲ್ಲೆಯ ಸಾಗರದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಬೆಳಿಗ್ಗೆ 10 ಗಂಟೆಗೆ ಸಾಗರದ ಪೊಲೀಸ್ ಸ್ಟೇಷನ್ ವೃತ್ತದಲ್ಲಿ ಬೃಹತ್ ಪ್ರತಿಭಟನಾ ಸಭೆ ನಡೆಯಲಿದೆ. ಈ ಸಭೆಯಲ್ಲಿ ಬಂಗಾರಮಕ್ಕಿಯ ಶ್ರೀ ಮಾರುತಿ ಗುರೂಜಿ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಪಾಲ್ಗೊಳ್ಳಲಿದ್ದಾರೆ. ಇದಕ್ಕೂ ಮುನ್ನ ಶಿವಮೊಗ್ಗದ ಫ್ರೀಡಂ ಪಾರ್ಕ್‌ನಲ್ಲಿ ವಿವಿಧ ಮಠಾಧೀಶರು ಕೆ.ಎಸ್.ಈಶ್ವರಪ್ಪ ಅವರಿಗೆ ಹೋರಾಟದ ಧ್ವಜ ಹಸ್ತಾಂತರಿಸುವ ಮೂಲಕ ಈ ಬೃಹತ್ ಜನಾಂದೋಲನಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

ಸಾಗರದಲ್ಲಿ ಬೃಹತ್ ಸಭೆ ಮುಗಿದ ನಂತರ ಪ್ರತಿಭಟನಾಕಾರರು ಸಿಗಂದೂರು ಕ್ಷೇತ್ರಕ್ಕೆ ತೆರಳಿ ಚೌಡೇಶ್ವರಿ ದೇವಿ ದರ್ಶನ ಪಡೆಯಲಿದ್ದಾರೆ. ತದನಂತರ, ಮಧ್ಯಾಹ್ನ 3 ಗಂಟೆಗೆ ಕಾರ್ಗಲ್‌ನ ಕೆಪಿಸಿ ಕಚೇರಿ ಎದುರು ಬೃಹತ್ ಧರಣಿ ನಡೆಸಿ, ಮುಖ್ಯ ಅಭಿಯಂತರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುತ್ತದೆ.ಈ ಹೋರಾಟಕ್ಕಾಗಿ ಸುಮಾರು 115 ಬಸ್‌ಗಳಲ್ಲಿ ಸಾವಿರಾರು ಸಾರ್ವಜನಿಕರು ಹಾಗೂ ಪರಿಸರ ಪ್ರೇಮಿಗಳು ಆಗಮಿಸಲಿದ್ದಾರೆ. ಸಾಗರದ ವಿವಿಧ ಸ್ಥಳೀಯ ಸಂಘಟನೆಗಳು ಕೂಡ ಇದಕ್ಕೆ ಕೈಜೋಡಿಸಿವೆ. ರಾಷ್ಟ್ರಭಕ್ತ ಬಳಗವು ಆರಂಭದಿಂದಲೂ ಈ ಪರಿಸರ ವಿರೋಧಿ ಯೋಜನೆಯನ್ನು ವಿರೋಧಿಸುತ್ತಾ ಬಂದಿದ್ದು, ಈಗಾಗಲೇ ಶಿವಮೊಗ್ಗದಲ್ಲಿ ಅಹೋರಾತ್ರಿ ಧರಣಿ ಸೇರಿದಂತೆ ಅನೇಕ ಹೋರಾಟಗಳನ್ನು ನಡೆಸಿ ಸರ್ಕಾರದ ಗಮನ ಸೆಳೆದಿದೆ ಎಂದು ಕಾಂತೇಶ್ ವಿವರಿಸಿದರು.

ರಾಜ್ಯ ಸರ್ಕಾರ ಆರಂಭದಲ್ಲಿ ಈ ಯೋಜನೆಗೆ 3,800 ಕೋಟಿ ರೂ. ವೆಚ್ಚದ ಅಂದಾಜು ಪಟ್ಟಿ ತಯಾರಿಸಿತ್ತು. ಆದರೆ ಈಗ ಅದನ್ನು ದಿಢೀರ್ ಆಗಿ 10,500 ಕೋಟಿ ರೂ.ಗೆ ಹೆಚ್ಚಿಸಿದೆ. ಯೋಜನೆಯನ್ನು ಕೈಬಿಡುವಂತೆ ಪರಿಸರ ಸಂಘಟನೆಗಳು ಹೈಕೋರ್ಟ್‌ಗೆ; ಮೇಲ್ಮನವಿ ಸಲ್ಲಿಸಿದ್ದು, ನ್ಯಾಯಾಲಯದ ತಡೆಯಾಜ್ಞೆ ಚಾಲ್ತಿಯಲ್ಲಿದೆ.

ಹೀಗಿದ್ದರೂ, ಕೇಂದ್ರ ಪರಿಸರ ಅಧ್ಯಯನ ಸಮಿತಿ ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಈಗಾಗಲೇ ಮೇಘಾ ಇಂಜಿನಿಯರಿಂಗ್ ಸಂಸ್ಥೆಗೆ ಗುತ್ತಿಗೆ ನೀಡಲಾಗಿದ್ದು, ಸರ್ಕಾರದ ಈ ತರಾತುರಿಯ ಹಿಂದೆ ದೊಡ್ಡ ಹಗರಣವಿರುವ ಶಂಕೆ ವ್ಯಕ್ತವಾಗುತ್ತಿದೆ" ಎಂದು ಕಾಂತೇಶ್ ಆರೋಪಿಸಿದರು.

# ಜಲಸಂಧಿಯಲ್ಲಿ ದಾಳಿ, ಮೂರ್ಖತನದ ಕದನ ವಿರಾಮ ಉಲ್ಲಂಘನೆ

**ವಾಷಿಂಗ್ಟನ್, ಜೂ.27:** ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗಿನ ಮೇಲೆ ದಾಳಿ ನಡೆಸಿದ ನಂತರ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಟೆಹ್ರಾನ್ ದುರ್ಬಲವಾದ ಕದನ ವಿರಾಮದ "ಮೂರ್ಖತನದ ಉಲ್ಲಂಘನೆ" ಎಂದು ಆರೋಪಿಸಿದ ನಂತರ ಅಮೆರಿಕ ಇರಾನ್ ಮಿಲಿಟರಿ ಗುರಿಗಳ ಮೇಲೆ ವೈಮಾನಿಕ ದಾಳಿ ನಡೆಸಿತು. ಈ ಉಲ್ಬಣವು ಜೂನ್ 17 ರಂದು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ಯುದ್ಧವನ್ನು ಕಡಿಮೆ ಮಾಡುವ ಮತ್ತು ಪ್ರಮುಖ ಹಡಗು ಕಾರಿಡಾರ್ ಅನ್ನು ಮುಕ್ತವಾಗಿಡುವ ಗುರಿಯನ್ನು ಹೊಂದಿರುವ ಒಪ್ಪಂದ ಒಪ್ಪಂದದ ತೀಕ್ಷ್ಣವಾದ ಹೊಸ ಪರೀಕ್ಷೆಯನ್ನು ಸೂಚಿಸುತ್ತದೆ.

ಗುರುವಾರ ಆಯಕಟ್ಟಿನ ಜಲಮಾರ್ಗವನ್ನು ಸಾಗಿಸುವ ಸರಕು ಹಡಗಿನ ಮೇಲೆ ಡ್ರೋನ್ ದಾಳಿಗೆ "ಪ್ರಬಲ ಪ್ರತಿಕ್ರಿಯೆ" ಎಂದು ಅಮೆರಿಕದ ಪಡೆಗಳು ಕರಾವಳಿ ರಾಡಾರ್ ಸ್ಥಾಪನೆಗಳ ಜೊತೆಗೆ ಇರಾನಿನ ಕ್ಷಿಪಣಿ ಮತ್ತು ಡ್ರೋನ್ ಸಂಗ್ರಹಣಾ ಸೌಲಭ್ಯಗಳನ್ನು ಹೊಡೆದುರುಳಿಸಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿದೆ. "ಇರಾನಿನ ಪಡೆಗಳಿಂದ ವಾಣಿಜ್ಯ ಸಾಗಣೆಯ ವಿರುದ್ಧ ಅನಗತ್ಯ ಆಕ್ರಮಣವು ಕದನ ವಿರಾಮವನ್ನು ಸ್ಪಷ್ಟವಾಗಿ ಉಲ್ಲಂಘಿಸಿದೆ" ಎಂದು ಸೆಂಟ್ಕಾಮ್ ಹೇಳಿಕೆಯಲ್ಲಿ ತಿಳಿಸಿದೆ. "ಇದಲ್ಲದೆ, ಇರಾನ್ನ ಅಪಾಯಕಾರಿ ನಡವಳಿಕೆಯು ಪ್ರಮುಖ ಅಂತರರಾಷ್ಟ್ರೀಯ ವ್ಯಾಪಾರ ಕಾರಿಡಾರ್ ಮೂಲಕ ವಾಣಿಜ್ಯವು ಹೆಚ್ಚಾಗಿ ಹರಿಯುವುದರಿಂದ ಸಂಚರಣೆಯ ಸ್ವಾತಂತ್ರ್ಯವನ್ನು ದುರ್ಬಲಗೊಳಿಸಿದೆ." "ಜಲಸಂಧಿಯನ್ನು ಸಾಗಿಸುವ ವಾಣಿಜ್ಯ ಹಡಗುಗಳಿಗೆ ಸುರಕ್ಷಿತ ಮಾರ್ಗ ಸಮನ್ವಯ ಮತ್ತು ಬೆಂಬಲವನ್ನು ಒದಗಿಸುವುದನ್ನು ಯುಎಸ್ ಪಡೆಗಳು ಮುಂದುವರಿಸುತ್ತವೆ" ಎಂದು ಆಜ್ಞೆಯು ಹೇಳಿದೆ.

ಅಮೆರಿಕ ಅಧಿಕಾರಿಗಳ ಪ್ರಕಾರ, ದಾಳಿಗಳು 90 ನಿಮಿಷಗಳ ಕಾಲ ನಡೆದವು ಮತ್ತು ಹಾರ್ಮುಜ್ ಜಲಸಂಧಿಯ ಬಳಿಯ ಕೆಶ್ಮ್ ದ್ವೀಪದಲ್ಲಿನ ಸ್ಥಾನಗಳು ಸೇರಿದಂತೆ ಅನೇಕ ಸ್ಥಳಗಳನ್ನು ಗುರಿಯಾಗಿಸಿಕೊಂಡು ಫೈಟರ್ ಜೆಟ್‌ಗಳನ್ನು ಬಳಸಲಾಯಿತು. ಹಾನಿಯ ಪ್ರಮಾಣವು ತಕ್ಷಣ ಸ್ಪಷ್ಟವಾಗಿಲ್ಲ. ದಾಳಿಗೆ ಮೊದಲು ಶ್ವೇತಭವನದಿಂದ ಮಾತನಾಡಿದ ಅಧ್ಯಕ್ಷ ಟ್ರಂಪ್, ವಾಣಿಜ್ಯ ಹಡಗಿನ ಮೇಲೆ ಹಿಂದಿನ ದಿನದ ದಾಳಿಯಿಂದ ಕೋಪಗೊಂಡಿದ್ದೇನೆ ಎಂದು ಹೇಳಿದರು. "ಅವರು ನಿನ್ನೆ ಗುಂಡು ಹಾರಿಸಿದ್ದಾರೆ, ವಾಸ್ತವವಾಗಿ ಅವುಗಳಲ್ಲಿ ನಾಲ್ಕು" ಎಂದು ಅವರು ಹೇಳಿದರು. "ಅವರು ಹಾಗೆ ಮಾಡಬಾರದು." ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳ ನಡುವೆ ಇರಾನ್ ಏಕೆ ಅಂತಹ ದಾಳಿಯನ್ನು ನಡೆಸುತ್ತದೆ ಎಂದು ಕೇಳಿದಾಗ, ಟ್ರಂಪ್ "ಅವರು ಸ್ವಲ್ಪ ಭಿನ್ನರು" ಎಂದು ಪ್ರತಿಕ್ರಿಯಿಸಿದರು.



**IRGC ಸ್ಪಷ್ಟೀಕರಣ:**

"ಹಾರ್ಮುಜ್ ಜಲಸಂಧಿಯಲ್ಲಿ ಅನಧಿಕೃತ ಮಾರ್ಗವನ್ನು ಉಲ್ಲಂಘಿಸುವ ಹಡಗಿನ ವಿವಿಧ ನೆಪಗಳ ಅಡಿಯಲ್ಲಿ ಅಮೆರಿಕ ವೈಮಾನಿಕ ದಾಳಿಗಳನ್ನು ಪ್ರಾರಂಭಿಸಿದೆ" ಎಂದು IRGC ಹೇಳಿದೆ. "ಆಕ್ರಮಣವನ್ನು ಪುನರಾವರ್ತಿಸಿದರೆ ನಮ್ಮ ಪ್ರತಿಕ್ರಿಯೆ ಇದಕ್ಕಿಂತ ಹೆಚ್ಚು ವಿಸ್ತಾರವಾಗಿರುತ್ತದೆ" ಎಂದು ಅದು ಎಚ್ಚರಿಕೆಯನ್ನು ಸೇರಿಸಿದೆ. ಜಾಗತಿಕ ತೈಲ ಮತ್ತು ಅನಿಲ ವ್ಯಾಪಾರಕ್ಕೆ ನಿರ್ಣಾಯಕ ಅಪಧಮನಿಯಾದ ಹಾರ್ಮುಜ್ ಜಲಸಂಧಿಯಲ್ಲಿನ ಹಡಗು ಮಾರ್ಗಗಳ ಮೇಲೆ ಟೆಹ್ರಾನ್ ಈ ಹಿಂದೆ ಹೆಚ್ಚಿನ ನಿಯಂತ್ರಣವನ್ನು ಪ್ರತಿಪಾದಿಸಿದೆ. ಗುರುವಾರದ ಘಟನೆಯಲ್ಲಿ ಭಾಗಿಯಾಗಿರುವ ಹಡಗು ಅನಧಿಕೃತ ಮಾರ್ಗವನ್ನು ಬಳಸುತ್ತಿದೆ ಎಂದು ಇರಾನ್ ಅಧಿಕಾರಿಗಳು ತಿಳಿಸಿದ್ದಾರೆ. ಅನುಮೋದಿತ ಮಾರ್ಗಗಳ ಹೊರಗೆ ಕಾರ್ಯನಿರ್ವಹಿಸುತ್ತಿದೆ ಎಂದು ಇರಾನ್ ಹೇಳಿದ ಸರಕು ಹಡಗಿನ ಮೇಲಿನ ಮುಷ್ಕರವು ಈ ಪ್ರದೇಶದಲ್ಲಿ ಸಿಲುಕಿಕೊಂಡಿರುವ ಹಡಗುಗಳಿಗೆ ಯೋಜಿತ ಸಮುದ್ರ ಸ್ಥಳಾಂತರಿಸುವ ಪ್ರಯತ್ನಗಳನ್ನು ಅಡ್ಡಿಪಡಿಸಿತು ಮತ್ತು ಜಾಗತಿಕ ಹಡಗು ಅಪಾಯದ ಮೌಲ್ಯಮಾಪನಗಳನ್ನು ಸಂಕ್ಷಿಪ್ತವಾಗಿ ಹೆಚ್ಚಿಸಿತು.

**ಇರಾನ್‌ನ ಸಂಸತ್ತಿನ ರಾಷ್ಟ್ರೀಯ ಭದ್ರತಾ ಮುಖ್ಯಸ್ಥ ಇಬ್ರಾಹಿಂ ಅಜೀಜಿ, ವಾಷಿಂಗ್ಟನ್ ರಾಜತಾಂತ್ರಿಕತೆಯನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿದರು, ಅಮೆರಿಕ "ಮತ್ತೊಮ್ಮೆ ಮಾತುಕತೆಗಳ ಮಧ್ಯದಲ್ಲಿ ಇರಾನ್ ಮೇಲೆ ದಾಳಿ ಮಾಡಿದೆ" ಎಂದು ಸಾಮಾಜಿಕ ಮಾಧ್ಯಮದಲ್ಲಿ ಬರೆದಿದ್ದಾರೆ. "ಕದನ ವಿರಾಮದ ಈ ಅಜಾಗರೂಕ ಉಲ್ಲಂಘನೆಯು ಯಾವಾಗಲೂ ಅವರ ಕಡೆಯಿಂದ ಹಿಮ್ಮೆಟ್ಟುವಿಕೆ ಮತ್ತು ವಿಷಾದಕ್ಕೆ ಕಾರಣವಾಗುತ್ತದೆ. ದೂಷಣೆಯ ಆಟ ಇನ್ನು ಮುಂದೆ ಕೆಲಸ ಮಾಡುವುದಿಲ್ಲ" ಎಂದು ಅವರು ಹೇಳಿದರು.**

ಘಟನೆಯ ನಂತರ ಕೊಲ್ಲಿಯಿಂದ ಹೊರಡುವ ಹಡಗುಗಳಿಗೆ ಸಹಾಯ ಮಾಡುವ ಸಮನ್ವಯ ಪ್ರಯತ್ನಗಳನ್ನು ಅಂತರರಾಷ್ಟ್ರೀಯ ಸಾಗರ ಸಂಸ್ಥೆ ಸ್ಥಗಿತಗೊಳಿಸಿತು, ಆದರೆ ಜಲಸಂಧಿಯ ಮೂಲಕ ಸಾಗಣೆ ಸಂಚಾರ ತೀವ್ರವಾಗಿ ಕುಸಿಯಿತು.

ಈ ವರ್ಷದ ಆರಂಭದಲ್ಲಿ ನವೀಕರಿಸಿದ ಉದ್ವಿಗ್ನತೆಗಳು ವಿಶ್ವದ ಪ್ರಮುಖ ತೈಲ ಚಾಕ್‌ಪಾಯಿಂಟ್‌ಗಳಲ್ಲಿ ಒಂದಾದ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆ ಮಾರ್ಗಗಳಲ್ಲಿ ಪ್ರಮುಖ ಅಡಚಣೆಗಳಿಗೆ ಕಾರಣವಾದಾಗಿನಿಂದ ಜಾಗತಿಕ ಇಂಧನ ಮಾರುಕಟ್ಟೆಗಳು ಅಂಚಿನಲ್ಲಿವೆ. ಇತ್ತೀಚಿನ ಮುಷ್ಕರಗಳ ವಿನಿಮಯವು ಕದನ ವಿರಾಮದ ದುರ್ಬಲತೆಯನ್ನು ಮತ್ತು ಸೀಮಿತ ದಾಳಿಗಳು ಸಹ ಜಾಗತಿಕ ಇಂಧನ ಹರಿವು ಮತ್ತು ಕಡಲ ಭದ್ರತೆಯನ್ನು ಅಡ್ಡಿಪಡಿಸುವ ಪ್ರದೇಶದಲ್ಲಿ ತ್ವರಿತ ಏರಿಕೆಯ ಅಪಾಯವನ್ನು ಒತ್ತಿಹೇಳುತ್ತದೆ.

## ಅಮೆರಿಕದ ರಾತ್ರೋರಾತ್ರಿ ದಾಳಿಗೆ ಪ್ರತೀಕಾರವಾಗಿ ಬಹ್ರೇನ್ ಮೇಲೆ ಇರಾನ್ ಡ್ರೋನ್ ದಾಳಿ

**ಟೆಹ್ರಾನ್, ಜೂನ್ 27:** 'ವಿರಾಮಗೊಳಿಸಲಾದ' ಸಂಘರ್ಷವನ್ನು ನಿಯಂತ್ರಣದಿಂದ ಹೊರತರುವ ಮತ್ತು ಯುದ್ಧಕ್ಕೆ ಶಾಶ್ವತ ಅಂತ್ಯವನ್ನು ಮಾತುಕತೆ ನಡೆಸಲು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡೆಸುತ್ತಿರುವ ರಾಜತಾಂತ್ರಿಕ ಪ್ರಯತ್ನಗಳನ್ನು ದುರ್ಬಲಗೊಳಿಸುವ ಬೆದರಿಕೆ ಹಾಕುವ ಗಲ್ಫ್ ಪ್ರದೇಶದಲ್ಲಿ ಉದ್ವಿಗ್ನತೆಯ ತೀವ್ರ ಏರಿಕೆಯಲ್ಲಿ, ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ಮೇಲೆ ಟೆಹ್ರಾನ್ ನಡೆಸಿದ ಡ್ರೋನ್ ದಾಳಿಯ ವಿರುದ್ಧ ಅಮೆರಿಕ ರಾತ್ರಿಯಿಡೀ ದಾಳಿ ನಡೆಸಿದ ನಂತರ ಇರಾನ್ ಶನಿವಾರ ಬಹ್ರೇನ್ ವಿರುದ್ಧ ಡ್ರೋನ್ ದಾಳಿ ನಡೆಸಿದೆ.



ಬಹ್ರೇನ್ನ ವಿದೇಶಾಂಗ ಸಚಿವಾಲಯದ ಪ್ರಕಾರ, ಹಲವಾರು ಇರಾನಿನ ಡ್ರೋನ್ಗಳು ರಾಜ್ಯವನ್ನು ಗುರಿಯಾಗಿಸಿಕೊಂಡಿವೆ ಮತ್ತು ಈ ದಾಳಿಯನ್ನು "ನಾಗರಿಕರು ಮತ್ತು ನಿವಾಸಿಗಳ ಭದ್ರತೆಗೆ ಸ್ಪಷ್ಟ ಬೆದರಿಕೆ" ಎಂದು ಕರೆದಿವೆ. ಸಾವುನೋವುಗಳು ಅಥವಾ ಹಾನಿಯ ಬಗ್ಗೆ ತಕ್ಷಣದ ವಿವರಗಳನ್ನು ಬಿಡುಗಡೆ ಮಾಡಲಾಗಿಲ್ಲ. ಗಲ್ಫ್ ಸಾಮ್ರಾಜ್ಯವು ಅಮೆರಿಕ ನೌಕಾಪಡೆಯ ಐದನೇ ನೌಕಾಪಡೆಯ ಪ್ರಧಾನ ಕಚೇರಿಯನ್ನು ಆಯೋಜಿಸುತ್ತಿರುವುದರಿಂದ ಮತ್ತು ಇರಾನ್ನ ಅತ್ಯಂತ ಕಟುವಾದ ಪ್ರಾದೇಶಿಕ ವಿಮರ್ಶಕರಲ್ಲಿ ಒಬ್ಬನಾಗಿರುವುದರಿಂದ, ಮನಾಮವು ಯುಎಸ್ ಜೊತೆಗಿನ ನಿಕಟ ಭದ್ರತಾ ಸಂಬಂಧಗಳನ್ನು ನೀಡಿದರೆ ಈ ದಾಳಿ ವಿಶೇಷವಾಗಿ ಮಹತ್ವದ್ದಾಗಿ ಕಂಡುಬಂದಿದೆ. ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಭಾಗವಹಿಸಿದ ಜಿಸಿಸಿ ವಿದೇಶಾಂಗ ಮಂತ್ರಿಗಳ ಸಭೆಯನ್ನು ಬಹ್ರೇನ್ ಆಯೋಜಿಸಿದ ಸ್ವಲ್ಪ ಸಮಯದ ನಂತರ ಈ ದಾಳಿ ನಡೆದಿದೆ. ಇರಾನಿನ ದಾಳಿಗಳನ್ನು ಕೊನೆಗೊಳಿಸಲು ಮತ್ತು ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಪುನಃ ತೆರೆಯಲು ಕರೆಗಳೊಂದಿಗೆ ಸಭೆ ಮುಕ್ತಾಯವಾಯಿತು. ಶನಿವಾರದಂದು, ಇರಾನ್ನ ಅರೆಸೈನಿಕ ದೇವಪ್ರಭುತ್ವ ಗಾರ್ಡ್, IRGC, "ಈ ಪ್ರದೇಶದಲ್ಲಿನ ಯುಎಸ್ ಭಯೋತ್ಪಾದಕ ಸೈನ್ಯ" ಎಂದು ವಿವರಿಸಿದ ಹಲವಾರು ಸ್ಥಳಗಳನ್ನು ಗುರಿಯಾಗಿಸಿಕೊಂಡಿದೆ ಎಂದು ಘೋಷಿಸಿತು. ರಾಜ್ಯ ಸುದ್ದಿ ಸಂಸ್ಥೆ IRNA ನಡೆಸಿದ ಹೇಳಿಕೆಯಲ್ಲಿ, ದೇವಪ್ರಭುತ್ವ ಗಾರ್ಡ್ ದಾಳಿಗೊಳಗಾದ ಸ್ಥಳಗಳನ್ನು ಗುರುತಿಸಲಿಲ್ಲ.

## ಮುಂದಿನ ವರ್ಷದ ಆರಂಭದಲ್ಲಿ ಭಾರತಕ್ಕೆ ಡೊನಾಲ್ಡ್ ಟ್ರಂಪ್ ಭೇಟಿ: ಮಾರ್ಕೊ ರುಬಿಯೋ

ನವದೆಹಲಿ : ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮುಂದಿನ ವರ್ಷದ ಆರಂಭದಲ್ಲಿ ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಹೇಳಿದ್ದಾರೆ. ಅಧ್ಯಕ್ಷರ ಭೇಟಿ ಹಿನ್ನೆಲೆ ವರ್ಷಾಂತ್ಯಕ್ಕೆ ತಾವು ಭಾರತಕ್ಕೆ ಭೇಟಿ ನೀಡುವುದಾಗಿ ಅವರು ವಿವರಿಸಿದ್ದಾರೆ.



ಸುದ್ದಿ ಸಂಸ್ಥೆಗೆ ಪ್ರತಿಕ್ರಿಯೆ ನೀಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಡೊನಾಲ್ಡ್ ಟ್ರಂಪ್ ವೈಯಕ್ತಿಕ ಸಂಬಂಧವು ಉತ್ತಮವಾಗಿದೆ, ಇದರ ಭಾಗವಾಗಿ ಮುಂದಿನ ವರ್ಷದ ಆರಂಭದಲ್ಲಿ ಅಧ್ಯಕ್ಷರು ಭಾರತಕ್ಕೆ ಬರುವಂತೆ ಏರ್ಪಾಡು ಮಾಡುತ್ತಿದ್ದೇವೆ. ಇದು ಬಹಳ ಸಕಾರಾತ್ಮಕವಾಗಿದೆ ಎಂದರು. ಭಾರತವು ಅಮೆರಿಕದ ನಿಕಟ ಪಾಲುದಾರ ಮತ್ತು ಮಿತ್ರ ರಾಷ್ಟ್ರ. ಟ್ರಂಪ್ ಅವರು ಭಾರತಕ್ಕೆ ಭೇಟಿ ನೀಡಿದರೆ ಅದು 2020ರ ಫೆಬ್ರವರಿ ನಂತರದ ಮೊದಲ ಭೇಟಿ ಮತ್ತು ಎರಡನೇ ಅವಧಿಯಲ್ಲಿ ಮೊದಲ ಭೇಟಿಯಾಗಲಿದೆ. ಇತ್ತೀಚೆಗೆ ಫ್ರಾನ್ಸ್‌ನ ಎವಿಯಾನ್‌ನಲ್ಲಿ ನಡೆದ ಜಿ7 ಸಮ್ಮೇಳನದಲ್ಲಿ ಟ್ರಂಪ್ ಮತ್ತು ಪ್ರಧಾನಿ ಮೋದಿ ಅವರು ಭೇಟಿಯಾಗಿದ್ದರು. ಅದು 16 ತಿಂಗಳ ನಂತರದ ಮೊದಲ ದ್ವಿಪಕ್ಷೀಯ ಭೇಟಿಯಾಗಿತ್ತು. ಭಾರತ–ಅಮೆರಿಕ ವ್ಯಾಪಾರ ಒಪ್ಪಂದದ ಮಾತುಕತೆಗಳು ಕೊನೆಯ ಹಂತದಲ್ಲಿವೆ ಎಂದು ರುಬಿಯೋ ಹೇಳಿದ್ದಾರೆ.

ಉ7 ಸಮ್ಮೇಳನದಲ್ಲಿ ಪ್ರಧಾನಿಯೊಂದಿಗೆ ನಡೆದ ಭೇಟಿ ಉತ್ತಮವಾಗಿತ್ತು. ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವತ್ತ ನಾವು ಸಾಗುತ್ತಿದ್ದೇವೆ. ಕ್ವಾಡ್ ಗುಂಪಿನ ಮತ್ತೊಂದು ಸಭೆಯನ್ನು ಎರಡು ರಾಷ್ಟ್ರಗಳು ಎದುರು ನೋಡುತ್ತಿವೆ. ಇದರ ಜೊತೆಗೆ ಅವರು ಈ ವರ್ಷದ ಕೊನೆಯ ಮುನ್ನ ಭಾರತಕ್ಕೆ ಭೇಟಿ ನೀಡಿ ಅಧ್ಯಕ್ಷರ ಭೇಟಿಗೆ ತಯಾರಿ ಮಾಡುವ ಸಾಧ್ಯತೆಯನ್ನು ವಿವರಿಸಿದರು.

ಪ್ರಧಾನಿ ಮೋದಿ ಅವರ ನಾಯಕತ್ವವನ್ನು ಹೊಗಳಿದ ರುಬಿಯೋ, ನಾನು ಮೋದಿಯ ಅಭಿಮಾನಿ, ಮೋದಿ ಅವರು ಭಾರತವನ್ನು ವಿಶ್ವ ಶಕ್ತಿಯನ್ನಾಗಿ ಮಾಡಿದ್ದಾರೆ. ಭಾರತ ಮತ್ತು ಅಮೆರಿಕ ತೈಲ ಸರಬರಾಜು ಹೆಚ್ಚಿಸುವಲ್ಲಿ ತೀವ್ರವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದ್ದಾರೆ. ಭಾರತವು ಭಾರೀ ಕಚ್ಚಾ ತೈಲವನ್ನು ಶುದ್ಧೀಕರಿಸುವ ಸಾಮರ್ಥ್ಯ ಹೊಂದಿರುವ ಕೆಲವೇ ರಾಷ್ಟ್ರಗಳಲ್ಲಿ ಒಂದು ಎಂದರು. ಈ ಭೇಟಿ ಮತ್ತು ವ್ಯಾಪಾರ ಒಪ್ಪಂದವು ಭಾರತ–ಅಮೆರಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಇರಾನ್‌ಗೆ ದೊಡ್ಡ ಹಿನ್ನಡೆ



**ಪ್ರಧಾನಮಂತ್ರಿ ನರೇಂದ್ರ ಮೋದಿ ಶನಿವಾರ ಸೀಶೆಲ್ಸ್ ರಾಷ್ಟ್ರೀಯ ಸಸ್ಯೋದ್ಯಾನದಲ್ಲಿ ಸ್ಥಳೀಯ ಜಾತಿಯಾದ ಅಲ್ಡಾಬ್ರಾ ದೈತ್ಯ ಆಮೆಗೆ ಆಹಾರವನ್ನು ನೀಡಿದರು.**

**ಜೆರುಸಲೆಮ್, ಜೂ.27:** ಇಸ್ರೇಲ್ ಮತ್ತು ಲೆಬನಾನ್ ನಡುವಿನ ಹೊಸದಾಗಿ ಸಹಿ ಹಾಕಲಾದ ಚೌಕಟ್ಟಿನ ಒಪ್ಪಂದವನ್ನು ಇರಾನ್‌ಗೆ ದೊಡ್ಡ ಕಾರ್ಯತಂತ್ರದ ಹೊಡೆತ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಶ್ಲಾಘಿಸಿದ್ದಾರೆ, ಹೆಜ್ಬೊಲ್ಲಾ ನಿಶ್ಶಸ್ತ್ರಗೊಳ್ಳುವವರೆಗೆ ಮತ್ತು ಇಸ್ರೇಲಿ ಭದ್ರತೆಗೆ ಇನ್ನು ಮುಂದೆ ಬೆದರಿಕೆಯಾಗದವರೆಗೆ ಇಸ್ರೇಲಿ ಪಡೆಗಳು ದಕ್ಷಿಣ ಲೆಬನಾನ್‌ನಲ್ಲಿ ನೆಲೆಗೊಂಡಿರುತ್ತವೆ ಎಂಬ ಜೆರುಸಲೆಮ್ನ ನಿಲುವನ್ನು ಪುನರುಚ್ಚರಿಸಿದ್ದಾರೆ. ಹಿಜ್ಬುಲ್ಲಾ ಮತ್ತು ಇತರ ಸಶಸ್ತ್ರ ಗುಂಪುಗಳು ಒಡ್ಡುವ ಬೆದರಿಕೆಯನ್ನು ತೆಗೆದುಹಾಕಿದ ನಂತರ ದಕ್ಷಿಣ ಲೆಬನಾನ್‌ನಿಂದ ಇಸ್ರೇಲ್ ಹಿಂತೆಗೆದುಕೊಳ್ಳುವಿಕೆಯನ್ನು ಒಪ್ಪಂದವು ವಿಶಾಲವಾಗಿ ದೃಢಪಡಿಸುತ್ತದೆ, ಎಲ್ಲಾ ಆಕ್ರಮಿತ ಪ್ರದೇಶದ ನಿಯಂತ್ರಣವನ್ನು ಲೆಬನಾನ್ ಸಶಸ್ತ್ರ ಪಡೆಗಳಿಗೆ ಬಿಟ್ಟುಕೊಡುತ್ತದೆ. ವಾಷಿಂಗ್ಟನ್‌ನಲ್ಲಿ ಒಪ್ಪಂದಕ್ಕೆ ಸಹಿ ಹಾಕಿದ ನಂತರ ಮಾತನಾಡಿದ ನೆತನ್ಯಾಹು, ಲೆಬನಾನ್‌ಜೊತೆಗಿನ ದೀರ್ಘ ಮಾತುಕತೆಗಳು ಇಸ್ರೇಲ್ ನಿಲುವನ್ನು ಬಲಪಡಿಸುವ ಫಲಿತಾಂಶಗಳನ್ನು ನೀಡುವಲ್ಲಿ ಅನುಕೂಲಕರವೆಂದು ಸಾಬೀತಾಗಿದೆ ಎಂದು ಹೇಳಿದರು, ಲೆಬನಾನ್‌ನ ಭದ್ರತಾ ವಲಯದಲ್ಲಿ ಮಿಲಿಟರಿ ಉಪಸ್ಥಿತಿಯನ್ನು ಮುಂದುವರಿಸುವುದು ಒಪ್ಪಂದದ ಪ್ರಮುಖ ಸಾಧನೆಗಳಲ್ಲಿ ಒಂದಾಗಿದೆ ಎಂದು ಕರೆದರು. "ದಕ್ಷಿಣ ಲೆಬನಾನ್ನ ಭದ್ರತಾ ವಲಯದಲ್ಲಿ ಇಸ್ರೇಲ್ ಉಳಿಯುವುದು ಅತ್ಯಂತ ಮುಖ್ಯವಾದ ವಿಷಯ. ಇದು ಒಂದು ಪ್ರಮುಖ ಸಾಧನೆಯಾಗಿದೆ, ಮತ್ತು ಹಿಜ್ಬೊಲ್ಲಾ ನಿಶ್ಶಸ್ತ್ರೀಕರಣಗೊಳ್ಳುವವರೆಗೆ ಮತ್ತು ಇಸ್ರೇಲ್‌ಗೆ ಬೆದರಿಕೆ ಇರುವವರೆಗೆ ನಾವು ಅದನ್ನು ನಿರ್ವಹಿಸುತ್ತೇವೆ" ಎಂದು ನೆತನ್ಯಾಹು ಹೇಳಿದರು.

## ಅಮೆರಿಕದ ಕಾನ್ಸುಲೇಟ್‌ನ ಪಕ್ಕದ ರಸ್ತೆಗೆ ಡೊನಾಲ್ಡ್ ಟ್ರಂಪ್ ಹೆಸರು: ಭಾರತಕ್ಕೆ ಧನ್ಯವಾದ ತಿಳಿಸಿದ ಟ್ರಂಪ್

ಹೈದ್ರಬಾದ್: ಇಲ್ಲಿನ ಅಮೆರಿಕದ ರಾಜತಾಂತ್ರಿಕ ಕಚೇರಿಯ ಪಕ್ಕದ ರಸ್ತೆಗೆ ಡೊನಾಲ್ಡ್ ಟ್ರಂಪ್ ಅವೆನ್ಯೂ ಎಂದು ನಾಮಕರಣ ಮಾಡಿದ್ದಕ್ಕೆ ಅಮೆರಿಕ ಅಧ್ಯಕ್ಷ ಟ್ರಂಪ್ ಧನ್ಯವಾದ ಹೇಳಿದ್ದಾರೆ. ತಮಗೆ ದೊರೆತ ಗೌರವಕ್ಕಾಗಿ ಭಾರತಕ್ಕೆ ಧನ್ಯವಾದ ಅರ್ಪಿಸಿದ್ದಾರೆ. ಟ್ರೂತ್ ಸೋಷಿಯಲ್‌ನಲ್ಲಿ ಹೇಳಿಕೆ ಹಾಕಿರುವ ಡೊನಾಲ್ಡ್ ಟ್ರಂಪ್, ಹೈದರಾಬಾದ್‌ನ ಹೊಸ ಡೊನಾಲ್ಡ್ ಟ್ರಂಪ್ ಅವೆನ್ಯೂ ಎಂದು ನಾಮಕರಣ ಮಾಡಿದೆ. ಈ ರೀತಿ ಗೌರವಿಸಲ್ಪಟ್ಟ ಮೊದಲ ಅಮೆರಿಕ ಅಧ್ಯಕ್ಷ, ಧನ್ಯವಾದಗಳು ಎಂದಿದ್ದಾರೆ. ಭಾರತದ ಅಮೆರಿಕದ ರಾಯಭಾರಿ ಸೆರ್ಗಿಯೊ ಗೋರ್ ಮತ್ತು ತೆಲಂಗಾಣ ಉಪಮುಖ್ಯಮಂತ್ರಿ ಮಲ್ಲು ಭಟ್ಟಿ ವಿಕ್ರಮಾರ್ಕ ಮಂಗಳವಾರ ಜಂಟಿಯಾಗಿ ಹೈದರಾಬಾದ್‌ನಲ್ಲಿರುವ ಅಮೆರಿಕ ದೂತಾವಾಸದ ಪಕ್ಕದಲ್ಲಿರುವ ರಸ್ತೆಯನ್ನು ಡೊನಾಲ್ಡ್ ಟ್ರಂಪ್ ಅವೆನ್ಯೂ ಎಂದು ನಾಮಕರಣ ಮಾಡಿದ್ದರು. ಈ ಸ್ಮರಣಾರ್ಥ ಒಂದು ವಿಧ್ಯುಕ್ತ ಫಲಕವನ್ನು ಅನಾವರಣಗೊಳಿಸಿದ್ದರು.




ಅಮೆರಿಕದ ಸ್ವಾತಂತ್ರ್ಯದ 250ನೇ ವಾರ್ಷಿಕೋತ್ಸವದ ಅಂಗವಾಗಿ ನಡೆದ ಫ್ರೀಡಂ 250 ಕಾರ್ಯಕ್ರಮದಲ್ಲಿ ಹಿರಿಯ ರಾಜತಾಂತ್ರಿಕರು, ಸರ್ಕಾರಿ ಅಧಿಕಾರಿಗಳು , ಬಾಹ್ಯಾಕಾಶ, ರಕ್ಷಣಾ ಮತ್ತು ತಂತ್ರಜ್ಞಾನ ಕ್ಷೇತ್ರಗಳ ನಾಯಕರು ಪಾಲ್ಗೊಂಡಿದ್ದರು. ತೆಲಂಗಾಣ ಸರ್ಕಾರ ತೆಗೆದುಕೊಂಡಿರುವ ಈ ನಿರ್ಣಯವ ಅಮೆರಿಕವನ್ನು ಗೌರವಿಸುತ್ತದೆ ಮತ್ತು ಅಮೆರಿಕ–ಭಾರತ ಸಂಬಂಧಗಳನ್ನು ಬಲಪಡಿಸುವಲ್ಲಿ ಹೈದರಾಬಾದ್ನ ಪಾತ್ರವನ್ನು ಪ್ರತಿಬಿಂಬಿಸುತ್ತದೆ ಎಂದು ಅಮೆರಿಕದ ರಾಯಭಾರ ಕಚೇರಿ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿತ್ತು.

## ಫಿಫಾ ವಿಶ್ವಕಪ್: ಫ್ರಾನ್ಸ್ ಪರ ಡೆಂಬೆಲೆ ಹ್ಯಾಟ್ರಿಕ್ ಗೋಲು

**ಬೋಸ್ಟನ್,ಜೂ.27:** 2026ರ ಫಿಫಾ ವಿಶ್ವಕಪ್‌ನಲ್ಲಿ, ಫ್ರಾನ್ಸ್ ನಾರ್ವೆಯನ್ನು 4–1 ಗೋಲುಗಳಿಂದ ಸೋಲಿಸಿತು. ನಾರ್ವೆ ವಿರುದ್ಧ ಫ್ರಾನ್ಸ್ 4–1 ಗೋಲುಗಳಿಂದ ಜಯಗಳಿಸಿತು, ಔಸ್ಮಾನೆ ಡೆಂಬೆಲೆ ಮೊದಲಾರ್ಧದಲ್ಲಿ ಹ್ಯಾಟ್ರಿಕ್ ಗಳಿಸಿದರು. ಪ್ಯಾರಿಸ್ ಸೇಂಟ್–ಜರ್ಮೈನ್ ಫಾರ್ವರ್ಡ್ ಡೆಂಬೆಲೆ ಬೋಸ್ಟನ್ ಬಳಿಯ ಜಿಲೆಟ್ ಕ್ರೀಡಾಂಗಣದಲ್ಲಿ ಏಳನೇ ನಿಮಿಷದಲ್ಲಿ ಗೋಲು ಗಳಿಸಿದರು, 20 ನಿಮಿಷಗಳಲ್ಲಿ ಮತ್ತೆ ಗೋಲು ಗಳಿಸಿದರು ಮತ್ತು ಥೆಲೊ ಆಸ್‌ಗಾರ್ಡ್ ಒಂದು ಗೋಲು ಗಳಿಸಿದ ನಂತರ, 32 ನೇ ನಿಮಿಷದಲ್ಲಿ ಅವರು 3–1 ಗೋಲು ಗಳಿಸಿದರು. ಥೆಲೊ ಆಸ್ಗಾರ್ಡ್ ದಯೋಟ್ ಉಪಮೆಕಾನೊ ಅವರನ್ನು ದಾಟಿ ಮೈಕ್ ಮೈಗ್ನಾನ್ ಅವರ ಆಚೆ ಕಡಿಮೆ ಶಾಟ್ ಹೊಡೆಯುವ ಮೂಲಕ ನಾರ್ವೆಗೆ ಭರವಸೆ ನೀಡಿದರು.



ಆದರೆ ಡೆಂಬೆಲೆ ಅವರ ಮೂರನೇ ಗೋಲು ಫ್ರಾನ್ಸ್‌ನ ದಿಟ್ಟತನವನ್ನು ಪುನಃಸ್ಥಾಪಿಸಿತು, ಡಿಸೈರ್ ಡೌ ಸ್ನಾಪ್–ಟೈಮ್ ನಾಲ್ಕನೇ ಸ್ಥಾನವನ್ನು ಸೇರಿಸುವ ಮೊದಲು, ಲೆಸ್ ಬ್ಲೂಸ್ ಅವರ ಆಕ್ರಮಣಕಾರಿ ಆಯ್ಕೆಗಳ ಸಂಪತ್ತನ್ನು ನೆನಪಿಸಿತು. ಈ ಫಲಿತಾಂಶವು ಫ್ರಾನ್ಸ್ ಗ್ರೂಪ್ I ನಲ್ಲಿ ಅಗ್ರಸ್ಥಾನವನ್ನು ಪಡೆಯಿತು ಮತ್ತು ಡಿಡಿಯರ್ ಡೆಸ್ಚಾಂಪ್ಸ್ ಅವರ ಸಂಪನ್ಮೂಲಗಳ ವಿಸ್ತಾರವನ್ನು ಒತ್ತಿಹೇಳಿತು.

## ಮಿಲಿಟರಿ ಸಂಘರ್ಷ ಕೊನೆಗೊಳಿಸಲು ಒಪ್ಪಂದಕ್ಕೆ ಸಹಿ

**ಜೆರುಸಲೆಮ್/ಬೈರುತ್,ಜೂ.27:** ದಕ್ಷಿಣ ಲೆಬನಾನ್ನಲ್ಲಿ ಐಡಿಎಫ್ನ ಆಕ್ರಮಣವನ್ನು ಕೊನೆಗೊಳಿಸುವ ಪ್ರಯತ್ನದಲ್ಲಿ ಇಸ್ರೇಲ್ ಮತ್ತು ಲೆಬನಾನ್ ವಾಷಿಂಗ್ಟನ್‌ನಲ್ಲಿ ಅಮೆರಿಕ–ಮಧ್ಯಸ್ಥಿಕೆಯ ಒಪ್ಪಂದಕ್ಕೆ ಸಹಿ ಹಾಕಿದವು, ಆದರೆ ಹೆಜ್ಬೊಲ್ಲಾ ಉಗ್ರಗಾಮಿಗಳ ಉಪಸ್ಥಿತಿ ಮತ್ತು ದೇಶದಲ್ಲಿ ಅವರ ಭಾರೀ ಪ್ರಭಾವವನ್ನು ಗಮನದಲ್ಲಿಟ್ಟುಕೊಂಡು ಒಪ್ಪಂದದ ಎಷ್ಟರ ಮಟ್ಟಿಗೆ ಜಾರಿಗೆ ತರಬಹುದು ಎಂಬುದು ಇನ್ನೂ ಪ್ರಶ್ನಾರ್ಹವಾಗಿದೆ. ಶುಕ್ರವಾರ ಸಹಿ ಹಾಕಿದ ಒಪ್ಪಂದವು ವಾಷಿಂಗ್ಟನ್ ಸುಗಮಗೊಳಿಸಿದ ನಾಲ್ಕು ದಿನಗಳ ಮಾತುಕತೆಗಳನ್ನು ಅನುಸರಿಸುತ್ತದೆ ಮತ್ತು ಎರಡೂ ದೇಶಗಳ ನಡುವೆ ಭವಿಷ್ಯದ ಶಾಂತಿ ಇತ್ಯರ್ಥಕ್ಕೆ ಒಂದು ಮಾರ್ಗವನ್ನು ವಿವರಿಸುತ್ತದೆ. ಒಪ್ಪಂದದ ನಿಯಮಗಳ ಅಡಿಯಲ್ಲಿ, ಜೆರುಸಲೆಮ್ ಮತ್ತು ಬೈರುತ್ ಎರಡೂ ದಕ್ಷಿಣ ಲೆಬನಾನ್ನಲ್ಲಿ ಎರಡು ಪೈಲಟ್ ಯೋಜನೆಗಳನ್ನು ಪ್ರಾರಂಭಿಸಲು ಒಪ್ಪಿಕೊಂಡಿವೆ, ಇದು ಪ್ರಸ್ತುತ ಇಸ್ರೇಲಿ ನಿಯಂತ್ರಣದಲ್ಲಿರುವ ಪ್ರದೇಶಗಳಿಂದ ಸೀಮಿತ ಇಸ್ರೇಲಿ ಮಿಲಿಟರಿ ಹಿಂತೆಗೆದುಕೊಳ್ಳುವಿಕೆಯನ್ನು ಮತ್ತು ಅವುಗಳ ಸ್ಥಳದಲ್ಲಿ ಲೆಬನಾನಿನ ಸೇನಾ ಪಡೆಗಳನ್ನು ನಿಯೋಜಿಸುವುದನ್ನು ಗುರುತಿಸುತ್ತದೆ, ಹೆಜ್ಬೊಲ್ಲಾ ಪಡೆಗಳು ಇನ್ನು ಮುಂದೆ ಗೊತ್ತುಪಡಿಸಿದ ವಲಯಗಳಲ್ಲಿ ಇಲ್ಲ ಎಂದು ಮೇಲ್ವಿಚಾರಣೆ ಮತ್ತು ಪರಿಶೀಲಿಸುವಲ್ಲಿ ಯುಎಸ್ ಮಿಲಿಟರಿ ಸಿಬ್ಬಂದಿ ಸಹಾಯವನ್ನು ನೀಡುತ್ತಾರೆ. ಇಸ್ರೇಲಿ ಅಧಿಕಾರಿಗಳ ಪ್ರಕಾರ, ಒಂದು ಪೈಲಟ್ ಪ್ರದೇಶವು ಲಿಟಾನಿ ನದಿಯ ಉತ್ತರಕ್ಕೆ ಮತ್ತು ಇನ್ನೊಂದು ಅದರ ದಕ್ಷಿಣಕ್ಕೆ ಇದೆ. ಆದಾಗ್ಯೂ, ಒಪ್ಪಂದದ ಹೊರತಾಗಿಯೂ, ಹಿಜ್ಬುಲ್ಲಾ, ಲೆಬನಾನ್‌ನಲ್ಲಿರುವ ಇತರ ಉಗ್ರಗಾಮಿಗಳು ಮತ್ತು ಭಯೋತ್ಪಾದಕ ಗುಂಪುಗಳನ್ನು ಸಂಪೂರ್ಣವಾಗಿ ನಿಶ್ಶಸ್ತ್ರಗೊಳಿಸುವವರೆಗೆ ಇಸ್ರೇಲ್ ತನ್ನ ಭದ್ರತಾ ವಲಯವನ್ನು ಹಳದಿ ರೇಖೆಯ ಉದ್ದಕ್ಕೂ ನಿರ್ವಹಿಸುತ್ತದೆ ಎಂದು ಸಮರ್ಥಿಸಿಕೊಂಡಿದೆ. "ಹೆಜ್ಬೊಲ್ಲಾ ಮತ್ತು ಲೆಬನಾನ್‌ನಲ್ಲಿರುವ ಇತರ ಭಯೋತ್ಪಾದಕ ಸಂಘಟನೆಗಳನ್ನು ನಿಶ್ಶಸ್ತ್ರಗೊಳಿಸುವ ದಿನದವರೆಗೆ ಮತ್ತು ಇಸ್ರೇಲ್ ರಾಜ್ಯದ ಪ್ರದೇಶಕ್ಕೆ ಲೆಬನಾನ್ನಿಂದ ಇನ್ನು ಮುಂದೆ ಯಾವುದೇ ಬೆದರಿಕೆ ಇಲ್ಲದಿರುವವರೆಗೆ ಇಸ್ರೇಲ್ ತನ್ನ ಭದ್ರತಾ ವಲಯವನ್ನು ಲೆಬನಾನ್‌ನಲ್ಲಿರುವ ಹಳದಿ ರೇಖೆಯ ಗಡಿಯೊಳಗೆ ನಿರ್ವಹಿಸುತ್ತದೆ" ಎಂದು ಹಿರಿಯ ಇಸ್ರೇಲಿ ಅಧಿಕಾರಿಯೊಬ್ಬರು ಹೇಳಿದರು. ಈ ಒಪ್ಪಂದವನ್ನು ಈಗಾಗಲೇ ಇರಾನ್ ಬೆಂಬಲಿತ ಇಸ್ಲಾಮಿಕ್ ಉಗ್ರ ಸಂಘಟನೆ ತೀವ್ರವಾಗಿ ಟೀಕಿಸಿದೆ, ಹಿರಿಯ ಹೆಜ್ಬೊಲ್ಲಾ–ಸಂಬಂಧಿತ ಸಂಸದ ಹಸನ್ ಫಡ್ಲಲ್ಲಾ ಚೌಕಟ್ಟನ್ನು ಖಂಡಿಸಿದ್ದಾರೆ ಮತ್ತು ಹೆಜ್ಬೊಲ್ಲಾದ ನಿಶ್ಶಸ್ತ್ರೀಕರಣವನ್ನು ಜಾರಿಗೊಳಿಸುವ ಯಾವುದೇ ಪ್ರಯತ್ನವು ಲೆಬನಾನ್‌ನಲ್ಲಿ ಆಂತರಿಕ ಸಂಘರ್ಷಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದ್ದಾರೆ. ಕಳೆದ ವಾರಾಂತ್ಯದಿಂದ ಇಸ್ರೇಲ್ ಮತ್ತು ಹೆಜ್ಬೊಲ್ಲಾ ನಡುವೆ ಕದನ ವಿರಾಮ ಹೆಚ್ಚಾಗಿ ನಡೆಯುತ್ತಿದೆ, ಆದರೂ ಐಡಿಎಫ್ ಗುಂಪು ಒಡ್ಡಿದ ತಕ್ಷಣದ ಬೆದರಿಕೆಗಳ ವಿರುದ್ಧ ದಾಳಿಗಳನ್ನು ನಡೆಸುತ್ತಲೇ ಇದೆ. ಅಮೆರಿಕ ವಿದೇಶಾಂಗ ಇಲಾಖೆಯಲ್ಲಿ ನಡೆದ ಸಹಿ ಸಮಾರಂಭದಲ್ಲಿ, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಈ ಒಪ್ಪಂದವನ್ನು ವಿಜಯೋತ್ಸವದ ಸಾಧನೆ ಎಂದರು.




**ಲಂಡನ್‌ನಲ್ಲಿ ನಡೆಯಲಿರುವ ಮುಂಬರುವ ಮಹಿಳಾ ಟಿ20 ವಿಶ್ವಕಪ್‌ಗೆ ಮುಂಚಿತವಾಗಿ ರಾಷ್ಟ್ರೀಯ ತಂಡಕ್ಕೆ ಶನಿವಾರ ಆಯೋಜಿಸಲಾದ ಸ್ವಾಗತ ಸಮಾರಂಭದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಭಾರತ ಮಹಿಳಾ ರಾಷ್ಟ್ರೀಯ ಕ್ರಿಕೆಟ್ ತಂಡದ ತರಬೇತುದಾರ ಅಮೋಲ್ ಮುಜುಂದಾರ್ ಅವರಿಂದ ಭಾರತೀಯ ತಂಡದ ಜೆರ್ಸಿಯನ್ನು ಸ್ವೀಕರಿಸಿದರು.**